VOLUME: 16 | 30 JULY 2026 | ಗುರುವಾರ | RS: 2 | PAGE: 06 ISSUE: 165 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

'ಕಾಂತಾರ' ಖ್ಯಾತಿಯ ರಿಷಬ್ ಶೆಟ್ಟಿ ನಟಿಸುತ್ತಿರುವ ಬಹುನಿರೀಕ್ಷಿತ ಐತಿಹಾಸಿಕ ಚಿತ್ರ 'ದಿ ಪ್ರೈಡ್ ಆಫ್ ಭಾರತ್: ಛತ್ರಪತಿ ಶಿವಾಜಿ ಮಹಾರಾಜ್' ಚಿತ್ರತಂಡಕ್ಕೆ ಬಾಲಿವುಡ್ ನಟಿ ಭೂಮಿ ಪೆಡ್ನೇಕರ್ ಅಧಿಕೃತವಾಗಿ ಸೇರಿಕೊಂಡಿದ್ದಾರೆ. ಸಂದೀಪ್ ಸಿಂಗ್ ನಿರ್ದೇಶಿಸಿ, ನಿರ್ಮಿಸುತ್ತಿರುವ ಈ ಚಿತ್ರದಲ್ಲಿ ರಿಷಬ್ ಶೆಟ್ಟಿ ಛತ್ರಪತಿ ಶಿವಾಜಿ ಮಹಾರಾಜ್ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದು ಭೂಮಿ ಪೆಡ್ನೇಕರ್ ರಾಣಿ 'ಬೆಳವಡಿ ಮಲ್ಲಮ್ಮ'ನ ಪಾತ್ರದಲ್ಲಿ ತೆರೆ ಮೇಲೆ ಬರಲಿದ್ದಾರೆ.



BHARATHA SARATHI
KANNADA DAILY NEWS PAPER

# ಭಾರತ ಸಾರಥಿ

CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



## ಮುಗಿಯದ ಸಂಪುಟ ವಿಸ್ತರಣೆ ಕಸರತ್ತು

ಬೆಂಗಳೂರು: ರಾಜ್ಯ ಸಚಿವ ಸಂಪುಟ ವಿಸ್ತರಣೆ ಕುರಿತಂತೆ ಕಾಂಗ್ರೆಸ್ ಹೈಕಮಾಂಡ್ ಮಟ್ಟದಲ್ಲಿ ನಡೆಯುತ್ತಿರುವ ಹಗ್ಗಜಗ್ಗಾಟ ಇನ್ನೂ ಮುಂದುವರಿದಿದ್ದು, ಒಂದೆರಡು ದಿನಗಳಲ್ಲಿ ಸಂಪುಟ ವಿಸ್ತರಣೆಯ ಬಗ್ಗೆ ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಸಂಪುಟ ವಿಸ್ತರಣೆಯ ಹಿನ್ನೆಲೆಯಲ್ಲಿ ಲೋಕಭವನದಲ್ಲಿ ವ್ಯಾಪಕ ಸಿದ್ಧತೆಗಳು ನಡೆಯುತ್ತಿದ್ದು, ಸುತ್ತಮುತ್ತಲ ಪ್ರದೇಶಗಳಲ್ಲಿ ಬಿಗಿ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿದೆ. ಯಾವುದೇ ಕ್ಷಣದಲ್ಲಿ ಸಚಿವ ಸಂಪುಟ ವಿಸ್ತರಣೆ ನಡೆದರೂ ಪ್ರಮಾಣವಚನ ಕಾರ್ಯಕ್ರಮಕ್ಕೆ ಲೋಕಭವನ ಸಜ್ಜಾಗುತ್ತಿದೆ ಎನ್ನಲಾಗಿದೆ.

ಆಗಸ್ಟ್ 13ರಿಂದ ವಿಧಾನಮಂಡಲದ ಅಧಿವೇಶನ ಆರಂಭವಾಗಲಿರುವ ಹಿನ್ನೆಲೆಯಲ್ಲಿ ಅದಕ್ಕೂ ಮುನ್ನ ಕನಿಷ್ಠ 10 ದಿನಗಳಾದರೂ ಹೊಸದಾಗಿ ಸಚಿವರಾಗುವವರಿಗೆ ತಮ್ಮ ಇಲಾಖೆಗಳ ಕಾರ್ಯವೈಖರಿ ಹಾಗೂ ಜವಾಬ್ದಾರಿಗಳನ್ನು ಅರ್ಥಮಾಡಿಕೊಳ್ಳಲು ಅವಕಾಶ ನೀಡಬೇಕಿದೆ. ಹೀಗಾಗಿ ಅಧಿವೇಶನಕ್ಕೂ ಮುನ್ನವೇ ಸಂಪುಟ ವಿಸ್ತರಣೆ ಪೂರ್ಣಗೊಳಿಸುವ ಒತ್ತಡ ರಾಜ್ಯ ಕಾಂಗ್ರೆಸ್ ನಾಯಕರ ಮೇಲಿದೆ.

ಈ ಬಾರಿ ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ಹಿಂದೆಂದಿಗಿಂತಲೂ ಹೆಚ್ಚಿನ ಮಟ್ಟದಲ್ಲಿ ಚರ್ಚೆ, ಪರಿಶೀಲನೆ ಮತ್ತು ಪಟ್ಟಿಗಳ ಪರಿಷ್ಕರಣೆ ನಡೆಯುತ್ತಿದೆ. ಕಳೆದ ಒಂದು ತಿಂಗಳಿನಿಂದ ನಡೆಯುತ್ತಿರುವ ಪ್ರಕ್ರಿಯೆಯಲ್ಲಿ ಇದು ಏಳನೇ ಸುತ್ತಿನ ಸಭೆಯಾಗಿದ್ದು, ಇನ್ನೂ ಎರಡು ಸುತ್ತಿನ ಚರ್ಚೆಗಳು ಬಾಕಿ ಉಳಿದಿವೆ ಎನ್ನಲಾಗಿದೆ. ಈ ಚರ್ಚೆಗಳು ಬುಧವಾರವೇ ಮುಕ್ತಾಯವಾಗಬಹುದು ಅಥವಾ ಗುರುವಾರಕ್ಕೂ ಮುಂದೂಡಿಕೆಯಾಗಬಹುದು ಎಂದು ಹೇಳಲಾಗುತ್ತಿದೆ.



ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಸೂಚಿಸಿರುವ ಮಾನದಂಡಗಳನ್ನು ಆಧರಿಸಿ ಸಂಭಾವ್ಯ ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲು ರಾಜ್ಯ ನಾಯಕರು ಕಸರತ್ತು ನಡೆಸುತ್ತಿದ್ದಾರೆ. ಸುಮಾರು 15ಕ್ಕೂ ಹೆಚ್ಚು ಹೊಸ ಮುಖಗಳಿಗೆ ಅವಕಾಶ ನೀಡುವ ಪ್ರಸ್ತಾಪವಿರುವುದು ಪಕ್ಷದ ನಾಯಕರಿಗೆ ದೊಡ್ಡ ಸವಾಲಾಗಿದೆ. ಹಿರಿಯರನ್ನು ಕಡೆಗಣಿಸಿ ಹೊಸಬರಿಗೆ ಹೆಚ್ಚಿನ ಆದ್ಯತೆ ನೀಡಿದರೆ ಪಕ್ಷದೊಳಗೆ ಬಂಡಾಯ ಚಟುವಟಿಕೆಗಳು ಹೆಚ್ಚಾಗುವ ಸಾಧ್ಯತೆಯ ಬಗ್ಗೆಯೂ ಆತಂಕ ವ್ಯಕ್ತವಾಗಿದೆ.

ಹೊಸ ಸಚಿವರ ಆಯ್ಕೆಯಲ್ಲಿ ಭೌಗೋಳಿಕ ಹಾಗೂ ಸಾಮಾಜಿಕ ಪ್ರಾತಿನಿಧ್ಯದ ಜತೆಗೆ ಪಕ್ಷ ಸಂಘಟನೆಯಲ್ಲಿ ಸಕ್ರಿಯತೆ, ಜನಪ್ರಿಯತೆ ಮತ್ತು ಮುಂದಿನ ಚುನಾವಣಾ ದೃಷ್ಟಿಯಿಂದ ಗೆಲುವಿನ ಸಾಮರ್ಥ್ಯವನ್ನೂ ಪರಿಗಣಿಸಲಾಗುತ್ತಿದೆ. ಚುನಾವಣಾ ರಣನೀತಿ ಸಲಹೆಗಾರರೊಬ್ಬರು ನೀಡಿರುವ ವರದಿಯ ಆಧಾರದ ಮೇಲೆ ಕ್ರಿಯಾಶೀಲ ಯುವ ಶಾಸಕರಿಗೂ ಆದ್ಯತೆ ನೀಡುವ ಚಿಂತನೆ ನಡೆದಿದೆ. ಆದರೆ ಸಾಮಾಜಿಕ ನ್ಯಾಯದ ಸಮತೋಲನ ಕಾಪಾಡಿಕೊಳ್ಳುವುದು ಹೈಕಮಾಂಡ್‌ಗೆ ಪ್ರಮುಖ ಸವಾಲಾಗಿದೆ.

ಲಿಂಗಾಯತ ಸಮುದಾಯದಲ್ಲಿ ಹಲವು ಕ್ರಿಯಾಶೀಲ ಯುವ ಶಾಸಕರಿದ್ದರೆ, ಪಕ್ಷದ ಮೇಲೆ ಪ್ರಭಾವ ಹೊಂದಿರುವ ಹಿರಿಯ ಶಾಸಕರ ಸಂಖ್ಯೆಯೂ ಹೆಚ್ಚಿದೆ. ಹಿಂದುಳಿದ ವರ್ಗಗಳ ಪ್ರಮುಖ ಸಮುದಾಯಗಳಿಗೆ ಪ್ರಾತಿನಿಧ್ಯ ನೀಡುವುದರ ಜತೆಗೆ ಇದುವರೆಗೆ ಅವಕಾಶ ವಂಚಿತ ಸಮುದಾಯಗಳಿಗೂ ಸಚಿವ ಸ್ಥಾನ ಕಲ್ಪಿಸುವ ಲೆಕ್ಕಾಚಾರ ನಡೆಯುತ್ತಿದೆ.

ಸಂಪುಟ ವಿಸ್ತರಣೆಗೆ ವಿಳಂಬವಾಗುತ್ತಿರುವಂತೆ ಸಚಿವ ಸ್ಥಾನದ ಆಕಾಂಕ್ಷಿಗಳ ಸಂಖ್ಯೆಯೂ ಹೆಚ್ಚುತ್ತಿದ್ದು, ಸುಮಾರು 65ರಿಂದ 70 ಶಾಸಕರು ಹಾಗೂ 10ಕ್ಕೂ ಹೆಚ್ಚು ವಿಧಾನಪರಿಷತ್ ಸದಸ್ಯರು ದೆಹಲಿಯಲ್ಲಿ ಬೀಡುಬಿಟ್ಟಿದ್ದಾರೆ ಎನ್ನಲಾಗಿದೆ. ಮೊದಲ ಬಾರಿಗೆ ಆಯ್ಕೆಯಾಗಿರುವ ಶಾಸಕರೂ ತಮ್ಮ ಕುಟುಂಬದ ಹಿನ್ನೆಲೆ, ಸಾಮಾಜಿಕ ಸ್ಥಾನಮಾನ ಹಾಗೂ ಸಮುದಾಯದ ಪ್ರಾತಿನಿಧ್ಯದ ಆಧಾರದ ಮೇಲೆ ಸಚಿವ ಸ್ಥಾನ ನೀಡುವಂತೆ ಒತ್ತಡ ಹೇರುತ್ತಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಅವರನ್ನು ಶಾಸಕರ ದಂಡು ನಿರಂತರವಾಗಿ ಭೇಟಿಯಾಗುತ್ತಿದೆ.

ಎಐಸಿಸಿ ನಾಯಕರಾದ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ರಣದೀಪ್ ಸಿಂಗ್ ಸುರ್ಜೇವಾಲ ಹಾಗೂ ಕೆ.ಸಿ. ವೇಣುಗೋಪಾಲ್ ಅವರು ಸಂಸತ್ ಕಲಾಪಗಳಲ್ಲಿ ನಿರತರಾಗಿರುವುದರಿಂದ ಶಾಸಕರಿಗೆ ಹೆಚ್ಚಿನ ಸಮಯ ನೀಡಲು ಸಾಧ್ಯವಾಗುತ್ತಿಲ್ಲ ಎನ್ನಲಾಗಿದೆ.

ರಾಜ್ಯ ನಾಯಕರು ಈವರೆಗೆ ಮೂರು ಬಾರಿ ದೆಹಲಿ ಪ್ರವಾಸ ಕೈಗೊಂಡಿದ್ದು, ಒಂದು ಬಾರಿ ಮಾತ್ರ ರಾಹುಲ್ ಗಾಂಧಿ ಅವರೊಂದಿಗೆ ಚರ್ಚೆ ನಡೆಸಿದ್ದಾರೆ. ಉಳಿದಂತೆ ಕೆ.ಸಿ. ವೇಣುಗೋಪಾಲ್ ಹಾಗೂ ರಣದೀಪ್ ಸಿಂಗ್ ಸುರ್ಜೇವಾಲ ಅವರೊಂದಿಗೆ ಹೆಚ್ಚಿನ ಸಮಾಲೋಚನೆ ನಡೆದಿದೆ ಎಂದು ಮೂಲಗಳು ತಿಳಿಸಿವೆ.

## ಕಾವೇರಿ ನೀರು ಹರಿಸುವ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ತೀರ್ಮಾನ

ನವದೆಹಲಿ: ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ ನೀಡಿರುವ ಆದೇಶದ ವಿರುದ್ಧ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಲು ನಿರ್ಧರಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ದೆಹಲಿಯ ಕರ್ನಾಟಕ ಭವನದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಂಬಂಧ ಅಡ್ವೊಕೇಟ್ ಜನರಲ್, ಕಾನೂನು ತಜ್ಞರು ಮತ್ತು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದ್ದು, ಮೇಲ್ಮನವಿ ಸಲ್ಲಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದರು.

ಈ ಬಾರಿ ರಾಜ್ಯದಲ್ಲಿ ವರುಣ ಕೃಪೆ ತೋರಿಲ್ಲ. ತಮಿಳುನಾಡು ಕಾವೇರಿ ನೀರು ಹರಿಸುವಂತೆ ಈ ಹಿಂದೆ ಸಲ್ಲಿಸಿದ್ದ ಮನವಿಯನ್ನು ಕಾವೇರಿ ನೀರು ನಿಯಂತ್ರಣ ಸಮಿತಿ ಎರಡು ಬಾರಿ ತಿರಸ್ಕರಿಸಿತ್ತು. ಆದರೆ, ಈ ಬಾರಿ ನೀರು ಹರಿಸುವಂತೆ ಸೂಚನೆ ನೀಡಿದೆ. ಈ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸುವ ಕುರಿತು ಸಚಿವ ರಾಮಲಿಂಗಾರೆಡ್ಡಿ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದೆ ಎಂದು ಹೇಳಿದರು.

ಬೆಂಗಳೂರಿಗೆ ಮರಳಿದ ಬಳಿಕ ಈ ವಿಚಾರವಾಗಿ ವಿರೋಧ ಪಕ್ಷದ ನಾಯಕರೊಂದಿಗೂ ಚರ್ಚಿಸಲಾಗುವುದು ಎಂದು ತಿಳಿಸಿದ ಡಿ.ಕೆ. ಶಿವಕುಮಾರ್, ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರು ತಮ್ಮೊಂದಿಗೆ ಚರ್ಚಿಸಲು ಇಚ್ಛೆ ವ್ಯಕ್ತಪಡಿಸಿ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿದ್ದಾರೆ ಹಾಗೂ ದೂರವಾಣಿ ಮೂಲಕವೂ ಮಾತನಾಡಿದ್ದಾರೆ ಎಂದು ಹೇಳಿದರು. ನಾವು ಅವರಿಗೆ ನೀಡಬೇಕಾದ ಗೌರವ ನೀಡಿ ಸಭೆಗೆ ಬರುವಂತೆ ಆಹ್ವಾನಿಸಿದ್ದೇವೆ. ನಮ್ಮ ರಾಜ್ಯಕ್ಕೆ ಬರುವ ಅತಿಥಿಗಳನ್ನು ಗೌರವದಿಂದ ಸ್ವಾಗತಿಸುವುದು ನಮ್ಮ ಕರ್ತವ್ಯ. ಹೀಗಾಗಿ ಅವರು ಬರುವುದಕ್ಕೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.

ನಮ್ಮ ಕಾವೇರಿ ಜಲಾನಯನ ಪ್ರದೇಶದ ವಾಸ್ತವ ಪರಿಸ್ಥಿತಿಯನ್ನು ಸ್ವತಃ ಪರಿಶೀಲಿಸುವಂತೆ ತಮಿಳುನಾಡು ಮುಖ್ಯಮಂತ್ರಿಗೆ ಮನವಿ ಮಾಡಿದ್ದೇವೆ. ಅಗತ್ಯವಿದ್ದರೆ ಹೆಲಿಕಾಪ್ಟರ್ ವ್ಯವಸ್ಥೆ ಮಾಡುವುದಾಗಿಯೂ ತಿಳಿಸಿದ್ದೇವೆ. ಅವರು ವಾಸ್ತವ ಪರಿಸ್ಥಿತಿಯನ್ನು ಕಣ್ಣಾರೆ ಕಂಡು ಅನುಭವಿಸಬೇಕು. ಬಳಿಕ ಅವರ ತೀರ್ಮಾನ ಏನೆಂಬುದನ್ನು ನೋಡೋಣ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

## ಇಂದು ತುರ್ತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆ

ಬೆಂಗಳೂರು: ಕರ್ನಾಟಕದಿಂದ ತಮಿಳುನಾಡಿಗೆ ಮುಂದಿನ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ನೀರು ಹರಿಸುವಂತೆ ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯುಆರ್‌ಸಿ) ಶಿಫಾರಸು ಮಾಡಿರುವ ಬೆನ್ನಲ್ಲೇ, ಗುರುವಾರ ನವದೆಹಲಿಯಲ್ಲಿ 54ನೇ ತುರ್ತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ (ಸಿಡಬ್ಲ್ಯುಎಂಎ) ಮಹತ್ವದ ಸಭೆ ನಡೆಯಲಿದೆ.

ನವದೆಹಲಿಯಲ್ಲಿ ಗುರುವಾರ ಮಧ್ಯಾಹ್ನ 2.30ಕ್ಕೆ ನಡೆಯಲಿರುವ ಸಭೆಯಲ್ಲಿ ಕರ್ನಾಟಕ, ತಮಿಳುನಾಡು ಹಾಗೂ ಪುದುಚೇರಿ ಸೇರಿದಂತೆ ಸಂಬಂಧಿತ ರಾಜ್ಯಗಳ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಈ ಹಿಂದೆ ನಡೆದ ಸಭೆಯಲ್ಲಿ ಸಿಡಬ್ಲ್ಯುಆರ್‌ಸಿ, ಕರ್ನಾಟಕವು ಮುಂದಿನ 15 ದಿನಗಳ ಕಾಲ ಪ್ರತಿದಿನ 3,500 ಕ್ಯೂಸೆಕ್ ನೀರನ್ನು ತಮಿಳುನಾಡಿಗೆ ಹರಿಸಬೇಕೆಂದು ಶಿಫಾರಸು ಮಾಡಿತ್ತು.

ರಾಜ್ಯದಲ್ಲಿ ಮಳೆ ಕೊರತೆಯಿಂದ ಬರ ಪರಿಸ್ಥಿತಿ ಎದುರಾಗಿರುವ ಹಿನ್ನೆಲೆಯಲ್ಲಿ, ಸದ್ಯ ಕಾವೇರಿ ಜಲಾಶಯಗಳಿಂದ ತಮಿಳುನಾಡಿಗೆ ನೀರು ಹರಿಸುವುದು ಕಷ್ಟಸಾಧ್ಯವಾಗಿದೆ ಎಂಬ ನಿಲುವನ್ನು ಕರ್ನಾಟಕ ಸರ್ಕಾರ ವ್ಯಕ್ತಪಡಿಸಿದೆ. ಸಿಡಬ್ಲ್ಯುಆರ್‌ಸಿ ಶಿಫಾರಸನ್ನು ಪ್ರಶ್ನಿಸಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಲು ರಾಜ್ಯ ಸರ್ಕಾರ ಸಿದ್ಧತೆ ನಡೆಸಿದೆ.

> ರಾಜ್ಯದಲ್ಲಿ ಮಳೆ ಕೊರತೆಯಿಂದ ಬರ ಪರಿಸ್ಥಿತಿ ಎದುರಾಗಿರುವ ಹಿನ್ನೆಲೆಯಲ್ಲಿ, ಸದ್ಯ ಕಾವೇರಿ ಜಲಾಶಯಗಳಿಂದ ತಮಿಳುನಾಡಿಗೆ ನೀರು ಹರಿಸುವುದು ಕಷ್ಟಸಾಧ್ಯವಾಗಿದೆ ಎಂಬ ನಿಲುವನ್ನು ಕರ್ನಾಟಕ ಸರ್ಕಾರ ವ್ಯಕ್ತಪಡಿಸಿದೆ. ಸಿಡಬ್ಲ್ಯುಆರ್‌ಸಿ ಶಿಫಾರಸನ್ನು ಪ್ರಶ್ನಿಸಿ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಲು ರಾಜ್ಯ ಸರ್ಕಾರ ಸಿದ್ಧತೆ ನಡೆಸಿದೆ.

ಈ ಸಂಬಂಧ ಭಾರಿ ಮತ್ತು ಮಧ್ಯಮ ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಅವರು ಕಾನೂನು ತಜ್ಞರು ಹಾಗೂ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಮುಂದಿನ ಕಾನೂನು ಹೋರಾಟದ ಕುರಿತು ಸಮಾಲೋಚನೆ ನಡೆಸಿದ್ದಾರೆ.

ಸಭೆಯಲ್ಲಿ ರಾಜ್ಯದ ಪ್ರಸ್ತುತ ಜಲ ಪರಿಸ್ಥಿತಿ, ಜಲಾಶಯಗಳಲ್ಲಿನ ನೀರಿನ ಸಂಗ್ರಹ ಪ್ರಮಾಣ ಹಾಗೂ ಕಾವೇರಿ ಜಲಾನಯನ ಪ್ರದೇಶದಲ್ಲಿನ ವಾಸ್ತವ ಸ್ಥಿತಿಗತಿಗಳನ್ನು ಪ್ರಾಧಿಕಾರದ ಗಮನಕ್ಕೆ ತಂದು, ಸಿಡಬ್ಲ್ಯುಆರ್‌ಸಿ ಶಿಫಾರಸಿನ ಅನುಷ್ಠಾನಕ್ಕೆ ತಡೆಯಾಜ್ಞೆ ನೀಡುವಂತೆ ಕರ್ನಾಟಕ ಮನವಿ ಮಾಡುವ ಸಾಧ್ಯತೆ ಇದೆ.

ಈ ಹಿನ್ನೆಲೆಯಲ್ಲಿ ಕಾನೂನು ತಜ್ಞರು ಹಾಗೂ ಜಲಸಂಪನ್ಮೂಲ ಇಲಾಖೆಯ ಅಧಿಕಾರಿಗಳು ಪ್ರಾಧಿಕಾರದ ಮುಂದೆ ರಾಜ್ಯದ ಪರವಾಗಿ ವಾದ ಮಂಡಿಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿದ್ದಾರೆ.



ಜಯನಗರ ಐದನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶ ಅನುಗ್ರಹದೊಂದಿಗೆ ಮಠದ ಹಿರಿಯ ವ್ಯವಸ್ಥಾಪಕರಾದ ಆರ್.ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ" ಗುರುಪೌರ್ಣಿಮಾ" ಪ್ರಯುಕ್ತ ಗುರುರಾಯರ ಬೃಂದಾವನಕ್ಕೆ ಅಭಿಷೇಕ, ಮುಖ್ಯಪ್ರಾಣ ದೇವರಿಗೆ ರತ್ನ ಕವಚ ಹಾಗೂ ಗುರುರಾಯರ ಬೃಂದಾವನಕ್ಕೆ ಸುವರ್ಣ ಕವಚದ ಅಲಂಕಾರ ಮತ್ತು ವಿಶೇಷ ಉತ್ಸವಗಳನ್ನು ನೆರವೇರಿಸಲಾಯಿತು. "ಪೌರ್ಣಮಿ" ಪ್ರಯುಕ್ತ ಸಾಮೂಹಿಕ ಸತ್ಯನಾರಾಯಣವ್ರತ ಪೂಜೆಯನ್ನು ಪುಷ್ಪಾರ್ಚನೆ, ಕಥಾಶ್ರವಣದೊಂದಿಗೆ ನೆರವೇರಿಸಿದರು.

## 84.31 ಲಕ್ಷ ಮತದಾರರು ಔಟ್..!

ಬೆಂಗಳೂರು: ಕರ್ನಾಟಕದಲ್ಲಿ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಯಲ್ಲಿ 84,31,612 ಮತದಾರರನ್ನು ಮೊದಲ ಕರಡು ಮತದಾರರ ಪಟ್ಟಿಯಿಂದ ಹೊರಗಿಡಲು ಗುರುತಿಸಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ. ಅನ್ಬುಕುಮಾರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿಯೊಬ್ಬ ಮತದಾರರ ಕುರಿತು ಸ್ಥಳ ಮಹಜರು ನಡೆಸಲಾಗಿದ್ದು, ಮೃತಪಟ್ಟ ಮತದಾರರ ಮರಣ ಪ್ರಮಾಣಪತ್ರಗಳನ್ನು ಸಂಗ್ರಹಿಸಲಾಗಿದೆ. ಸಂಬಂಧಪಟ್ಟವರಿಂದ ಸಹಿಯನ್ನೂ ಪಡೆಯಲಾಗಿದೆ. ಹೀಗಾಗಿ ಪರಿಶೀಲನೆಯ ವೇಳೆ ಗುರುತಿಸಲಾಗಿರುವ 84 ಲಕ್ಷಕ್ಕೂ ಅಧಿಕ ಮತದಾರರನ್ನು ಮೊದಲ ಕರಡು ಮತದಾರರ ಪಟ್ಟಿಯಲ್ಲಿ ಪರಿಗಣಿಸಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಸುಮಾರು 1.3 ಕೋಟಿ ಮತದಾರರಿದ್ದು, ಈವರೆಗೆ 47.97 ಲಕ್ಷ ಮಂದಿ ಮಾತ್ರ ಎನ್ಯುಮರೇಷನ್ ಅರ್ಜಿಗಳನ್ನು ಹಿಂತಿರುಗಿಸಿದ್ದಾರೆ. ಬರೋಬ್ಬರಿ 39.38 ಲಕ್ಷ ಮತದಾರರು ಪತ್ತೆಯಾಗಿಲ್ಲ. ಇನ್ನೂ 16.57 ಲಕ್ಷ ಮತದಾರರು ಅರ್ಜಿಗಳನ್ನು ಹಿಂತಿರುಗಿಸಬೇಕಿದೆ ಎಂದು ಅನ್ಬುಕುಮಾರ್ ಮಾಹಿತಿ ನೀಡಿದರು.

ರಾಜ್ಯಾದ್ಯಂತ ಒಟ್ಟು 5,54,32,314 ಎನ್ಯುಮರೇಷನ್ ಅರ್ಜಿಗಳನ್ನು ವಿತರಿಸಲಾಗಿದ್ದು, ಈ ಪೈಕಿ 4,26,75,861 ಅರ್ಜಿಗಳ ಡಿಜಿಟಲೀಕರಣ ಪೂರ್ಣಗೊಂಡಿದೆ. ಶೇ. 76.99ರಷ್ಟು ಪ್ರಗತಿ ಸಾಧಿಸಲಾಗಿದೆ. ಇನ್ನೂ 43,24,841 ಮತದಾರರ ಕುರಿತು ಮಾಹಿತಿ ಲಭ್ಯವಾಗಬೇಕಿದೆ.

## 'ವಿಮಾನ ದುರಂತ: ವಿಮಾನದಲ್ಲಿ ಲೋಪವಿರಲಿಲ್ಲ'

ನವದೆಹಲಿ: ಕಳೆದ ವರ್ಷ 260 ಜನರ ಸಾವಿಗೆ ಕಾರಣವಾದ ಏರ್ ಇಂಡಿಯಾ ವಿಮಾನ ದುರಂತಕ್ಕೆ ಸಂಬಂಧಿಸಿದಂತೆ ವಿಮಾನದ ಫ್ಯೂಯಲ್ ಕಂಟ್ರೋಲ್ ಸ್ವಿಚ್ ಅಥವಾ ಅದರ ಲಾಕಿಂಗ್ ವ್ಯವಸ್ಥೆಯಲ್ಲಿ ಯಾವುದೇ ದೋಷ ಕಂಡುಬಂದಿಲ್ಲ ಎಂದು ಕೇಂದ್ರ ಸರ್ಕಾರ ಸಂಸತ್ತಿಗೆ ಮಾಹಿತಿ ನೀಡಿದೆ.

ವಿಮಾನದ ಮೂಲ ಉಪಕರಣ ತಯಾರಕರು ನಡೆಸಿದ ಸುಧಾರಿತ ಪರೀಕ್ಷೆಗಳಲ್ಲಿ ಫ್ಯೂಯಲ್ ಕಂಟ್ರೋಲ್ ಸ್ವಿಚ್ ಸಾಮಾನ್ಯ ರೀತಿಯಲ್ಲಿಯೇ ಕಾರ್ಯನಿರ್ವಹಿಸುತ್ತಿರುವುದು ದೃಢಪಟ್ಟಿದೆ ಎಂದು ಸರ್ಕಾರ ತಿಳಿಸಿದೆ.

ಇದೇ ವೇಳೆ, ಪೂರ್ಣ ಪ್ರಮಾಣದ ಥ್ರಸ್ಟ್ ಕಂಟ್ರೋಲ್ ಮಾಡ್ಯೂಲ್‌ನ ಸವಿಸ್ತಾರ ಪರಿಶೀಲನೆ ಅಮೆರಿಕದ ಸಿಯಾಟಲ್‌ನಲ್ಲಿರುವ ಬೋಯಿಂಗ್ ಘಟಕದಲ್ಲಿ ಪ್ರಗತಿಯಲ್ಲಿದ್ದು, ಅದರ ಫಲಿತಾಂಶಕ್ಕಾಗಿ ತನಿಖಾಧಿಕಾರಿಗಳು ಕಾಯುತ್ತಿದ್ದಾರೆ ಎಂದು ತಿಳಿಸಲಾಗಿದೆ.

ವಿಮಾನ ಅಪಘಾತ ತನಿಖಾ ಬ್ಯೂರೋ ತನಿಖೆಯಲ್ಲಿ ಯಾವುದೇ ವಿಳಂಬ ಮಾಡಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಪ್ರಮುಖ ವಿಮಾನ ಅಪಘಾತಗಳ ತನಿಖೆಗೆ ಯಾವುದೇ ನಿರ್ದಿಷ್ಟ ಕಾಲಮಿತಿ ಇರುವುದಿಲ್ಲ. ತನಿಖೆಯಲ್ಲಿ ಎಲ್ಲಾ ಸಾಧ್ಯತೆಗಳನ್ನು ಪರಿಶೀಲಿಸಲಾಗುತ್ತಿದೆ.

## ಬೆಳೆ ಹಾನಿ ಪರಿಶೀಲಿಸಿದ ಆರ್.ಅಶೋಕ್ ನೇತೃತ್ವದ ಬಿಜೆಪಿ ನಿಯೋಗ

ಚಿತ್ರದುರ್ಗ: ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಭೀಕರ ಬರ ಪರಿಸ್ಥಿತಿ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ನೇತೃತ್ವದ ಬಿಜೆಪಿ ಅಧ್ಯಯನ ನಿಯೋಗವು ಜಿಲ್ಲೆಯ ವಿವಿಧ ತಾಲೂಕುಗಳಿಗೆ ಭೇಟಿ ನೀಡಿ ಬೆಳೆ ಹಾನಿ ಪರಿಶೀಲನೆ ನಡೆಸಿತು.

ಹಿರಿಯೂರು ತಾಲೂಕಿನ ಮೇಟಿಕುರ್ಕೆ ಹಾಗೂ ಸೂರಗೊಂಡನಹಳ್ಳಿ ಗ್ರಾಮಗಳಿಗೆ ಭೇಟಿ ನೀಡಿದ ನಿಯೋಗವು ಮಳೆ ಇಲ್ಲದೆ ಒಣಗಿ ಹೋಗಿರುವ ಸೂರ್ಯಕಾಂತಿ, ಶೇಂಗಾ ಹಾಗೂ ಜೋಳದ ಬೆಳೆಗಳನ್ನು ವೀಕ್ಷಿಸಿತು. ಸಂಕಷ್ಟದಲ್ಲಿರುವ ರೈತರೊಂದಿಗೆ ನೇರವಾಗಿ ಮಾತುಕತೆ ನಡೆಸಿ, ಅವರ ಸಮಸ್ಯೆಗಳು ಹಾಗೂ ಬೆಳೆ ಹಾನಿಯ ಕುರಿತು ಮಾಹಿತಿ ಪಡೆದುಕೊಂಡಿತು.

ಬಳಿಕ ಚಿತ್ರದುರ್ಗದ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿದ ಆರ್. ಅಶೋಕ್, ಸ್ಥಳೀಯ ಇಲಾಖೆಗಳ ಅಧಿಕಾರಿಗಳು ಕ್ಷೇತ್ರಕ್ಕೆ ತೆರಳಿ ವಾಸ್ತವಿಕ ಸಮೀಕ್ಷೆ ನಡೆಸುವ ಬದಲು ಕಚೇರಿಗಳಲ್ಲೇ ಕುಳಿತು ವರದಿ ಸಿದ್ಧಪಡಿಸುತ್ತಿದ್ದಾರೆ ಎಂದು ಆರೋಪಿಸಿದರು. ಕ್ಷೇತ್ರ ಪರಿಶೀಲನೆ ವೇಳೆ ಆಡಳಿತಾತ್ಮಕ ವೈಫಲ್ಯಗಳು ಕಂಡುಬಂದಿವೆ ಎಂದು ಅವರು ಹೇಳಿದರು.



ರೈತರು ತೀವ್ರ ಸಂಕಷ್ಟದಲ್ಲಿದ್ದು, ಮಳೆ ಬಾರದ ಕಾರಣ ಕೃಷಿ ಹಾಗೂ ತೋಟಗಾರಿಕೆ ಬೆಳೆಗಳು ಹಾನಿಗೊಳಗಾಗಿವೆ. ಕೃಷಿ ಮತ್ತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಹಾಗೂ ತಹಸೀಲ್ದಾರ್‌ಗಳು ಇದ್ದರೂ ರೈತರ ಜಮೀನುಗಳಿಗೆ ಭೇಟಿ ನೀಡಿ ಸಮೀಕ್ಷೆ ನಡೆಸಿಲ್ಲ. ಅಧಿಕಾರಿಗಳು ಕಚೇರಿಗಳಲ್ಲೇ ಕುಳಿತು ವರದಿ ಸಿದ್ಧಪಡಿಸುತ್ತಿರುವುದರಿಂದ ಅನೇಕ ರೈತರು ಸರ್ಕಾರದ ಪರಿಹಾರ ಯೋಜನೆಗಳಿಂದ ವಂಚಿತರಾಗುವ ಸಾಧ್ಯತೆಯಿದೆ ಎಂದು ಆರ್. ಅಶೋಕ್ ಹೇಳಿದರು.

ಜಿಲ್ಲೆಯಲ್ಲಿ ಬೆಳೆ ವಿಮೆ ಕುರಿತು ಸಾಕಷ್ಟು ಪ್ರಚಾರ ನಡೆಸಲಾಗಿಲ್ಲ ಎಂದು ಆರೋಪಿಸಿದ ಅವರು, ಶೇ.81ರಷ್ಟು ಬಿತ್ತನೆ ಕಾರ್ಯವೇ ನಡೆದಿಲ್ಲ ಎಂಬ ವರದಿಗಳಿವೆ. ಹೀಗಾಗಿ ಚಿತ್ರದುರ್ಗ ಜಿಲ್ಲೆಯನ್ನು ಮೊದಲ ಆದ್ಯತೆಯಲ್ಲಿ ತಕ್ಷಣವೇ ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದರು.

ಕೇಂದ್ರದ ಎಸ್‌ಡಿಆರ್‌ಎಫ್ ನಿಧಿಗೆ ರಾಜ್ಯ ಸರ್ಕಾರ ತನ್ನ ಪಾಲಿನ ಹಣವನ್ನು ಸೇರಿಸಿ ಕೂಡಲೇ ರೈತರಿಗೆ ಪರಿಹಾರ ವಿತರಿಸಬೇಕು. ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಗೋಶಾಲೆಗಳನ್ನು ತೆರೆಯಬೇಕು.

ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಪ್ರತಿಯೊಂದು ತಾಲೂಕಿಗೂ ಕನಿಷ್ಠ ರೂ.50 ಕೋಟಿ ಅನುದಾನ ಬಿಡುಗಡೆ ಮಾಡಬೇಕು ಎಂದು ಅವರು ಆಗ್ರಹಿಸಿದರು.

ಭಾರತ ಸಾರಥಿ
30/07/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬೈಕ್ ಟ್ಯಾಕ್ಸಿ ಚಾಲಕನ ವಿರುದ್ಧ ಅವಾಚ್ಯ ನಿಂದನೆ ಆರೋಪ: ರಂಗಸ್ವಾಮಿ ಬಂಧನ

ಬೆಂಗಳೂರು

ಬೈಕ್ ಟ್ಯಾಕ್ಸಿ ಸೇವೆಯನ್ನು ವಿರೋಧಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿರುವವರ ಬಗ್ಗೆ ಹಾಗೂ ಅವರ ಕುಟುಂಬದ ಸದಸ್ಯರ ಕುರಿತು ಸಾಮಾಜಿಕ ಜಾಲತಾಣಗಳಲ್ಲಿ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿದ ಆರೋಪದ ಮೇಲೆ ರಂಗಸ್ವಾಮಿ ಎಂಬ ವ್ಯಕ್ತಿಯನ್ನು ಹುಳಿಮಾವು ಪೊಲೀಸರು ಬಂಧಿಸಿದ್ದಾರೆ.




ಆರೋಪಿಯಾದ ರಂಗಸ್ವಾಮಿ ಅವರು ಪಾರ್ಟ್ ಟೈಮ್‌ನಲ್ಲಿ ರಾಪಿಡೊ ಬೈಕ್ ಟ್ಯಾಕ್ಸಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸಾಮಾಜಿಕ ಜಾಲತಾಣಗಳಲ್ಲಿ ಪೊಲೀಸ್ ಇಲಾಖೆಯ ಅಧಿಕಾರಿಗಳ ವಿರುದ್ಧ ಅವಹೇಳನಕಾರಿ ಪದಗಳನ್ನು ಬಳಸಿರುವುದಲ್ಲದೆ, ಆಟೋ ಮತ್ತು ಕ್ಯಾಬ್ ಚಾಲಕರನ್ನು ನಿರಂತರವಾಗಿ ನಿಂದಿಸುತ್ತಿದ್ದರು ಎಂಬ ಆರೋಪ ಕೇಳಿಬಂದಿದೆ.

ಈ ವಿಚಾರವನ್ನು ಗಮನಿಸಿದ ಚಾಲಕಪರ ಹೋರಾಟಗಾರ *ಸ್ನೇಹಜೀವಿ ಸಂತೋಷ್ ಕುಮಾರ್ ಅವರು ಹುಳಿಮಾವು ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದರು. ದೂರಿನ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಂಡ ಹುಳಿಮಾವು ಪೊಲೀಸರು ಆರೋಪಿಯನ್ನು ಬಂಧಿಸಿ ಮುಂದಿನ ಕಾನೂನು ಕ್ರಮ ಕೈಗೊಂಡಿದ್ದಾರೆ.

ಸಾಮಾಜಿಕ ಜಾಲತಾಣಗಳನ್ನು ದುರುಪಯೋಗಪಡಿಸಿಕೊಂಡು ವ್ಯಕ್ತಿಗಳ ಹಾಗೂ ಅವರ ಕುಟುಂಬದ ಸದಸ್ಯರ ವಿರುದ್ಧ ಅವಾಚ್ಯ ಶಬ್ದಗಳನ್ನು ಬಳಸುವುದು ಮತ್ತು ಅವಹೇಳನಕಾರಿ ಹೇಳಿಕೆಗಳನ್ನು ನೀಡುವುದನ್ನು ಸಹಿಸಲಾಗುವುದಿಲ್ಲ ಎಂದು ದೂರುದಾರರು ತಿಳಿಸಿದ್ದಾರೆ.

# 13ರ ಹರೆಯದ ಮುಸ್ತಫಾಗೆ ರಾಷ್ಟ್ರೀಯ ಹೇಬಾಲ್ ಚಾಂಪಿಯನ್‌ಶಿಪ್‌ನಲ್ಲಿ ರಜತ ಪದಕ

ಬೆಂಗಳೂರು: ಬೆಂಗಳೂರಿನ 13 ವರ್ಷದ ಬಾಲಕ ಮೊಹಮ್ಮದ್ ಮುಸ್ತಫಾ ಅಹ್ಮದ್ ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ನಡೆದ ಜೂನಿಯರ್ ನ್ಯಾಷನಲ್ ಹೇಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿ ರಜತ ಪದಕ ಗೆಲ್ಲುವ ಮೂಲಕ ದೇಶದ ಕ್ಯೂ ಕ್ರೀಡಾ ಕ್ಷೇತ್ರದಲ್ಲಿ ಹೊಸ ಭರವಸೆ ಮೂಡಿಸಿದ್ದಾರೆ. ವಿಶೇಷವೆಂದರೆ, ಈ ಪ್ರತಿಷ್ಠಿತ ರಾಷ್ಟ್ರೀಯ ಟೂರ್ನಿಯಲ್ಲಿ ಮುಸ್ತಫಾ ಮತ್ತೊಬ್ಬ ಆಟಗಾರನಿಂದ ಎರವಲು ಪಡೆದ ಕ್ಯೂ ಬಳಸಿ ಸ್ಪರ್ಧಿಸಿದ್ದರು.

ಕರ್ನಾಟಕ ರಾಜ್ಯಮಟ್ಟದ ಬಿಲಿಯರ್ಡ್ಸ್ ಮತ್ತು ಸ್ನೂಕರ್ ಸ್ಪರ್ಧೆಗಳಲ್ಲಿ ಈಗಾಗಲೇ ಹಲವು ಜೂನಿಯರ್ ಚಾಂಪಿಯನ್ ಶಿಪ್‌ಗಳನ್ನು ಗೆದ್ದಿರುವ ಮುಸ್ತಫಾ, ಪ್ರಸ್ತುತ ಭಾರತದ ಜೂನಿಯರ್ ಸ್ನೂಕರ್ ಶ್ರೇಯಾಂಕದಲ್ಲಿ 5ನೇ ಸ್ಥಾನದಲ್ಲಿದ್ದಾರೆ.

ಹೇಬಾಲ್ ಕ್ರೀಡೆಗೆ ಕಾಲಿಟ್ಟ ಮುಸ್ತಫಾಗೆ ರಾಷ್ಟ್ರೀಯ ಚಾಂಪಿಯನ್‌ಶಿಪ್‌ಗೂ ಮುನ್ನ ಸಿಕ್ಕಿದ್ದು ಕೇವಲ ಬೆರಳೆಣಿಕೆಯಷ್ಟು ತರಬೇತಿ ಸತ್ರಗಳು ಮಾತ್ರ. ಆರಂಭದಲ್ಲಿ ದೊಡ್ಡ ಟೂರ್ನಿಯ ಅನುಭವ ಪಡೆಯುವ ಉದ್ದೇಶದಿಂದ ಕಣಕ್ಕಿಳಿದಿದ್ದ ಅವರು, ತಮ್ಮ ಚಾಣಾಕ್ಷ ಆಟದಿಂದ ಪಂದ್ಯಾವಳಿಯಲ್ಲಿ ಗಮನ ಸೆಳೆದರು.



ಹಲವು ಅನುಭವಿ ಆಟಗಾರರಿಗೆ ಹಂತ ಹಂತವಾಗಿ ಆಘಾತ ನೀಡುತ್ತಾ ಫೈನಲ್ ತಲುಪಿದ ಮುಸ್ತಫಾ, ಪ್ರಶಸ್ತಿ ಸುತ್ತಿನಲ್ಲಿ ಮಹಾರಾಷ್ಟ್ರದ ಪ್ರತಿಭಾವಂತ ಆಟಗಾರನ ವಿರುದ್ಧ ತೀವ್ರ ಪೈಪೋಟಿ ನಡೆಸಿದರು.

ಅಂತಿಮವಾಗಿ ಅತ್ಯಂತ ನಿಕಟ ಅಂತರದಲ್ಲಿ ಸೋಲೊಪ್ಪಿಕೊಂಡು ರಜತ ಪದಕಕ್ಕೆ ತೃಪ್ತಿಪಟ್ಟರು.

ಸ್ವಂತ ಕ್ರೀಡಾ ಸಲಕರಣೆಗಳ ಕೊರತೆ ಮತ್ತು ಕನಿಷ್ಠ ಸಿದ್ಧತೆಯ ನಡುವೆಯೂ ರಾಷ್ಟ್ರೀಯ ಮಟ್ಟದಲ್ಲಿ ರಜತ ಪದಕ ಗೆದ್ದ ಬೆಂಗಳೂರಿನ ಈ ಬಾಲಕನ ಸಾಧನೆಗೆ ಕ್ರೀಡಾಲೋಕದಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.

ಜುಲೈ 1, 2026ರಂದು ಮುಕ್ತಾಯಗೊಂಡ ಜೂನಿಯರ್ ನ್ಯಾಷನಲ್ ಹೇಬಾಲ್ ಚಾಂಪಿಯನ್‌ಶಿಪ್‌ನಲ್ಲಿ ದೇಶದ ವಿವಿಧ ಭಾಗಗಳಿಂದ ಹಲವು ಪ್ರತಿಭಾವಂತ ಯುವ ಆಟಗಾರರು ಭಾಗವಹಿಸಿದ್ದರು. ತಮ್ಮ ಚೊಚ್ಚಲ ಪ್ರಮುಖ ರಾಷ್ಟ್ರೀಯ ಟೂರ್ನಿಯಲ್ಲೇ ಬೆಳ್ಳಿ ಪದಕ ಗೆಲ್ಲುವ ಮೂಲಕ ಮುಸ್ತಫಾ ಅಹ್ಮದ್ ಭಾರತದ ಕ್ಯೂ ಕ್ರೀಡಾ ಕ್ಷೇತ್ರದ ಭರವಸೆಯ ಉದಯೋನ್ಮುಖ ಪ್ರತಿಭೆಯಾಗಿ ಹೊರಹೊಮ್ಮಿದ್ದಾರೆ.

# ಶ್ರೀ ಸತ್ಯಗಣಪತಿ ಶಿರಡಿ ಸಾಯಿ ಮಂದಿರದಲ್ಲಿ ಅದ್ದೂರಿ ಗುರುಪೌರ್ಣಿಮೆ

ಬೆಂಗಳೂರು: ಗುರುಗಳಿಗೆ ಸಮರ್ಪಿತವಾಗಿ ಆಚರಿಸುವ ಶೈಕ್ಷಣಿಕ, ಆಧ್ಯಾತ್ಮಿಕ ಮತ್ತು ಸಾಂಸ್ಕೃತಿಕ ಆಚರಣೆಗಳ ಮೂಲಕ ಗುರುನೀತಿಯನ್ನು ಸ್ಮರಿಸುವ ಗುರುಪೌರ್ಣಿಮೆ ಮಹೋತ್ಸವವನ್ನು ಜೆ.ಪಿ. ನಗರದ ಶ್ರೀ ಸತ್ಯಗಣಪತಿ ಶಿರಡಿ ಸಾಯಿ ಟ್ರಸ್ಟ್‌ನಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು.

ಗುರುಗಳಿಗೆ, ಗುರು ತತ್ವಗಳಿಗೆ ಹಾಗೂ ಬದುಕಿನಲ್ಲಿ ದಾರಿದೀಪವಾಗಿರುವವರನ್ನು ಶ್ರೀ ಶಿರಡಿ ಸಾಯಿಬಾಬಾ ಅವರ ಮೂಲಕ ಭಕ್ತಾದಿಗಳು ಸ್ಮರಿಸಿ ಗೌರವ ಸಮರ್ಪಿಸಿದರು. ಶಿರಡಿ ಬಾಬಾರನ್ನು ವೈವಿಧ್ಯಮಯ ಪುಷ್ಪಗಳಿಂದ ಹಾಗೂ ಮಂದಿರವನ್ನು ಆಕರ್ಷಕ ದೀಪಗಳಿಂದ ಅಲಂಕರಿಸಲಾಗಿತ್ತು.



ಗುರುಪೌರ್ಣಿಮೆ ಪ್ರಯುಕ್ತ ಅನ್ನದಾನ ಏರ್ಪಡಿಸಲಾಗಿತ್ತು. ಹಿರಿಯ ನಾಗರಿಕರಿಗೆ ಟ್ರಸ್ಟ್ ನಿಂದ ವಿಶೇಷ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ವಿಜಯಲಕ್ಷ್ಮಿ ದರ್ಶನ್ ಸೇರಿ ಹಲವರು ವಿಶೇಷ ಪೂಜೆ ಸಲ್ಲಿಸಿದರು. ಶ್ರೀ ಸತ್ಯಗಣಪತಿ ಶಿರಡಿ ಸಾಯಿ ಟ್ರಸ್ಟ್ ನ ಟ್ರಸ್ಟಿ ಸಿ.ಆರ್. ರಾಮ್ ಮೋಹನ್ ರಾಜು ಮಾತನಾಡಿ, ಭಕ್ತರಿಗೆ ಈ ದಿನ ಗುರುಸಂಪ್ರದಾಯದ ಮಹತ್ವವನ್ನು ತಿಳಿಸಿಕೊಡಲಾಯಿತು. ಭಕ್ತಾದಿಗಳು ಈ ಶುಭ ಸಂದರ್ಭದಲ್ಲಿ ಜೀವನದಲ್ಲಿ ಸಮತೋಲನ ಕಾಯ್ದುಕೊಳ್ಳುವ ಜೊತೆಗೆ ಧರ್ಮ ಮತ್ತು ಸೇವಾ ಚಿಂತನೆಗಳನ್ನು ಅಳವಡಿಸಿಕೊಂಡು ವೈಯಕ್ತಿಕ ಬೆಳವಣಿಗೆ ಜೊತೆಗೆ ಸಮುದಾಯದ ಬಲವರ್ಧನೆಗೆ ಮುಂದಾಗಬೇಕು ಎಂದರು.

# ಐಸಿಐಸಿಐ ಪ್ರು ಐಪ್ರೊಟೆಕ್ಟ್ ಸ್ಮಾರ್ಟ್ ಪ್ಲಸ್ ಪರಿಚಯ

ಬೆಂಗಳೂರು

ಐಸಿಐಸಿಐ ಪ್ರುಡೆನ್ಶಿಯಲ್ ಐಪ್ರೊಟೆಕ್ಟ್ ಸ್ಮಾರ್ಟ್ ಪ್ಲಸ್ ಯೋಜನೆಯನ್ನು ಇದೀಗ 10 ವರ್ಷಗಳ ಜೀವ ವಿಮಾ ರಕ್ಷಣೆ ಆಯ್ಕೆಯೊಂದಿಗೆ ಪರಿಚಯಿಸಲಾಗಿದೆ. ಗೃಹ ಸಾಲ, ಮಕ್ಕಳ ಶಿಕ್ಷಣದ ಗುರಿಗಳು ಮತ್ತು ವ್ಯಾಪಾರ ಸಾಲಗಳಂತಹ ನಿರ್ದಿಷ್ಟ ಹಾಗೂ ಅಲ್ಪಾವಧಿಯ ಹಣಕಾಸಿನ ಜವಾಬ್ದಾರಿಗಳನ್ನು ಹೊಂದಿರುವ ಗ್ರಾಹಕರ ಅಗತ್ಯಗಳನ್ನು ಗಮನದ ಲ್ಲಿಟ್ಟುಕೊಂಡು ಈ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ.

ಜೀವನದಲ್ಲಿ ಹಣಕಾಸಿನ ಜವಾಬ್ದಾರಿಗಳು ಹೆಚ್ಚಿರುವ ಅವಧಿಯಲ್ಲಿ ಗ್ರಾಹಕರು ಕಡಿಮೆ ಪ್ರೀಮಿಯಂನಲ್ಲಿ ಹೆಚ್ಚಿನ ಜೀವ ವಿಮಾ ರಕ್ಷಣೆಯನ್ನು ಪಡೆಯಲು ಈ ಯೋಜನೆ ನೆರವಾಗಲಿದೆ. ಯೋಜನೆಯು ರೂ.67,100ರವರೆಗಿನ ಉಚಿತ ಆರೋಗ್ಯ ಮತ್ತು ಕ್ಷೇಮ ಸೇವೆಗಳು, ರೂ.3 ಲಕ್ಷದ ತ್ವರಿತ ಕ್ಲೇಮ್ ಪಾವತಿ ಹಾಗೂ ಮಾರಣಾಂತಿಕ ಕಾಯಿಲೆ ಪತ್ತೆಯಾದ ಸಂದರ್ಭದಲ್ಲಿ ಶೇ.100ರಷ್ಟು ಪಾವತಿ ಸೌಲಭ್ಯವನ್ನು ಒಳಗೊಂಡಿದೆ.



ಈ ಕುರಿತು ಐಸಿಐಸಿಐ ಪ್ರುಡೆನ್ಶಿಯಲ್ ಲೈಫ್ ಇನ್ಶೂರೆನ್ಸ್‌ನ ವಿತರಣಾ ವಿಭಾಗದ ಮುಖ್ಯಸ್ಥ ಮಣಿಕಂಠನ್ ರಾಜಮಣಿ ಮಾತನಾಡಿ, "ಹಣಕಾಸಿನ ರಕ್ಷಣೆಯ ಕುರಿತ ಗ್ರಾಹಕರ ನಿರೀಕ್ಷೆಗಳು ಅವರ ಜೀವನದ ಗುರಿಗಳೊಂದಿಗೆ ನಿರಂತರವಾಗಿ ಬದಲಾಗುತ್ತಿವೆ. ಐಸಿಐಸಿಐ ಪ್ರುಡೆನ್ಶಿಯಲ್ ಲೈಫ್ ಇನ್ಶೂರೆನ್ಸ್‌ನಲ್ಲಿ, ಗ್ರಾಹಕರ ಹಣಕಾಸಿನ ಪ್ರಯಾಣದ ವಿವಿಧ ಹಂತಗಳಲ್ಲಿ ಅವರಿಗೆ ಅತ್ಯಂತ ಪ್ರಮುಖವಾದುದನ್ನು ರಕ್ಷಿಸಲು ನೆರವಾಗುವುದು ನಮ್ಮ ಮುಖ್ಯ ಉದ್ದೇಶವಾಗಿದೆ"

# ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್‌ಗೆ ಲಾಭ

ಬೆಂಗಳೂರು

ಉಜ್ಜೀವನ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್ 2026ರ ಜೂನ್‌ಗೆ ಅಂತ್ಯಗೊಂಡ ಮೊದಲ ತ್ರೈಮಾಸಿಕದ ಹಣಕಾಸು ಫಲಿತಾಂಶಗಳನ್ನು ಪ್ರಕಟಿಸಿದ್ದು, ರೂ.317 ಕೋಟಿ ನಿವ್ವಳ ಲಾಭ ದಾಖಲಿಸಿದೆ. ಇದೇ ಅವಧಿಯಲ್ಲಿ ಬ್ಯಾಂಕ್ ರೂ.1,186 ಕೋಟಿ ನಿವ್ವಳ ಬಡ್ಡಿ ವರಮಾನ ಮತ್ತು ರೂ.548 ಕೋಟಿ ತೆರಿಗೆ ಪೂರ್ವ ಕಾರ್ಯಾಚರಣಾ ಲಾಭ ಗಳಿಸುವ ಮೂಲಕ ದಾಖಲೆಯ ಸಾಧನೆ ಮಾಡಿದೆ.

ಬ್ಯಾಂಕ್‌ನ ಒಟ್ಟು ಠೇವಣಿಗಳು ರೂ.48,129 ಕೋಟಿಗೆ ತಲುಪಿದ್ದು, ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ.24.6ರಷ್ಟು ಹಾಗೂ ಹಿಂದಿನ ತ್ರೈಮಾಸಿಕಕ್ಕೆ ಹೋಲಿಸಿದರೆ ಶೇ.5.4ರಷ್ಟು ಬೆಳವಣಿಗೆ ದಾಖಲಿಸಿವೆ. ಚಾಲ್ತಿ ಖಾತೆ ಮತ್ತು ಉಳಿತಾಯ ಖಾತೆ ಠೇವಣಿಗಳು ರೂ.12,930 ಕೋಟಿಗೆ ಏರಿಕೆಯಾಗಿದ್ದು, ವರ್ಷದಿಂದ ವರ್ಷಕ್ಕೆ ಶೇ.37.8ರಷ್ಟು ಹೆಚ್ಚಳವಾಗಿದೆ.

ಬ್ಯಾಂಕ್‌ನ ಒಟ್ಟು ಸಾಲದ ಮೊತ್ತ ರೂ.42,903 ಕೋಟಿಗೆ ಏರಿಕೆಯಾಗಿದ್ದು, ವರ್ಷದಿಂದ ವರ್ಷಕ್ಕೆ ಶೇ.28.9ರಷ್ಟು ಹಾಗೂ ತ್ರೈಮಾಸಿಕ ಆಧಾರದ ಮೇಲೆ ಶೇ.5.5ರಷ್ಟು ಬೆಳವಣಿಗೆ ದಾಖಲಿಸಿದೆ. ಭದ್ರತಾ ಸಾಲಗಳ ಮೊತ್ತ ರೂ.21,638 ಕೋಟಿಗೆ ತಲುಪಿದ್ದು, ವಾರ್ಷಿಕ ಶೇ.42.7ರಷ್ಟು ಬೆಳವಣಿಗೆ ಕಂಡಿದೆ. ಇದರ ಪರಿಣಾಮವಾಗಿ ಒಟ್ಟು ಸಾಲದಲ್ಲಿ ಭದ್ರತಾ ಸಾಲಗಳ ಪಾಲು ಶೇ.50.4ಕ್ಕೆ ಏರಿಕೆಯಾಗಿದೆ.

ಚಿನ್ನದ ಸಾಲ ಮತ್ತು ವಾಹನ ಸಾಲದ ವಹಿವಾಟುಗಳು ತಲಾ ರೂ.1,000 ಕೋಟಿ ಗಡಿ ದಾಟಿವೆ. ಮೊದಲ ತ್ರೈಮಾಸಿಕದಲ್ಲಿ ಒಟ್ಟು ರೂ.9,245 ಕೋಟಿ ಸಾಲ ವಿತರಿಸುವ ಮೂಲಕ ಬ್ಯಾಂಕ್ ದಾಖಲೆಯ ಸಾಧನೆ ಮಾಡಿದೆ.

# ಕೆಪಿಎಸ್‌ಸಿ 400 ಕೋಟಿ ಲಂಚದಲ್ಲಿ ಸಿಎಂ ಪಾಲೆಷ್ಟು?: ವಿಜಯೇಂದ್ರ ಪ್ರಶ್ನೆ

ಬೆಂಗಳೂರು

ಕೆಪಿಎಸ್‌ಸಿ ನಡೆಸಿದ ಪಶುವೈದ್ಯಾಧಿಕಾರಿ ನೇಮಕದಲ್ಲಿ 300 ರಿಂದ 400 ಕೋಟಿ ಲಂಚದ ವ್ಯವಹಾರ ನಡೆದಿದ್ದು, ಅದರಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಎಷ್ಟು ಪಾಲಿದೆ ಎಂಬುದನ್ನು ಅವರು ಬಹಿರಂಗ ಪಡಿಸಬೇಕು ಎಂದು ಶಾಸಕ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.

ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ನಡೆಯುತ್ತಿರುವ ಕೆ.ಪಿ.ಎಸ್.ಸಿ ವಿದ್ಯಾರ್ಥಿಗಳ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕೆಪಿಎಸ್‌ಸಿ ಮೂಲಕ ನಡೆದ ಎಲ್ಲಾ ನೇಮಕಾತಿ ಅಕ್ರಮಗಳನ್ನು ಸಿಬಿಐ ತನಿಖೆಗೆ ವಹಿಸಬೇಕು. ಸರ್ಕಾರವನ್ನು ಎಚ್ಚರಿಸಲು ವಿದ್ಯಾರ್ಥಿಗಳು ಈ ಪ್ರತಿಭಟನೆ ನಡೆಸುತ್ತಿದ್ದಾರೆ. ಅವರೊಂದಿಗೆ ಬಿಜೆಪಿ ಇರಲಿದೆ. ಸದನದ ಹೊರಗೆ ಮತ್ತು ಒಳಗೆ ವಿದ್ಯಾರ್ಥಿಗಳಿಗೆ ಬೆಂಬಲ ನೀಡಲಿದೆ ಎಂದು ಹೇಳಿದರು.

ಕಳೆದ ಹಲವಾರು ವರ್ಷಗಳಿಂದ ಕೆಪಿಎಸ್‌ಸಿ ನೇಮಕದಲ್ಲಿ ಅಕ್ರಮಗಳು ನಡೆಯುತ್ತಿವೆ. ವಿದ್ಯಾರ್ಥಿಗಳ ಜೀವದ ಜೊತೆ ಚೆಲ್ಲಾಟವಾಡುತ್ತಿರುವ ರಾಜ್ಯದ ಕಾಂಗ್ರೆಸ್ ಸರ್ಕಾರ, ಕೆಪಿಎಸ್‌ಸಿಯಲ್ಲಿ ಸುಧಾರಣೆ ಮಾಡದೆ ಕತ್ತೆ ಕಾಯುತ್ತಿದೆಯೇ ಎಂದು ಪ್ರಶ್ನಿಸಿದರು.

ಕೆಪಿಎಸ್‌ಸಿ ನೇಮಕದಲ್ಲಿ ಲಕ್ಷಗಟ್ಟಲೆ ಲಂಚ ಪಡೆದು ಯಾರು ಅರ್ಹರಿಲ್ಲವೊ ಅವರಿಗೆ ಕೆಲಸ ಕೊಡುವ ಕಾರ್ಯದಲ್ಲಿ ರಾಜ್ಯ ಸರ್ಕಾರ ಕಪಟ ನಾಟಕ ಆಡುತ್ತಿದೆ. ಎಫ್‌ಡಿಎ ಸೇರಿದಂತೆ ವಿವಿಧ ನೇಮಕಾತಿಗಳಲ್ಲಿ ವ್ಯಾಪಕ ಅವ್ಯವಹಾರಗಳು ನಡೆಯುತ್ತಿವೆ. ಪರೀಕ್ಷೆಗಳಲ್ಲಿ ಹಣ ಪಡೆದು ಅನರ್ಹ ಅಭ್ಯರ್ಥಿಗಳಿಗೆ ಸರ್ಕಾರಿ ಉದ್ಯೋಗ ಕಲ್ಪಿಸುವ ವ್ಯವಸ್ಥೆ ರೂಪುಗೊಂಡಿದೆ ಎಂದು ಹೇಳಿದರು.


**ಸಿಬಿಐ ತನಿಖೆಗೆ ಒತ್ತಾಯ:**

ಉದ್ಯೋಗಕ್ಕಾಗಿ ಯುವಜನರು ಹುಬ್ಬಳ್ಳಿ, ಧಾರವಾಡ ಕಲಬುರಗಿಯಲ್ಲಿ ಬೃಹತ್ ಹೋರಾಟ ನಡೆಸಿದ್ದರು. ಆಗಲೂ ಬಿಜೆಪಿ ವಿದ್ಯಾರ್ಥಿಗಳ ಪರವಾಗಿ ನಿಂತಿತ್ತು. ಯುವ ಜನರ ಸಮಸ್ಯೆಗಳನ್ನು ಸರ್ಕಾರ ಆಲಿಸುತ್ತಿಲ್ಲ. ಕೆಪಿಎಸ್‌ಸಿ ನಡೆಸಿದ ಎಲ್ಲಾ ನೇಮಕಗಳನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದರು.

**ಯುಪಿಎಸ್‌ಸಿ ಮಾದರಿ ಪರೀಕ್ಷೆ ಆಗಲಿ.**

ಕೆಪಿಎಸ್‌ಸಿಸಿ ಪರೀಕ್ಷೆಯಲ್ಲಿ ಅಕ್ರಮಗಳು ನಡೆಯುತ್ತಲೇ ಇವೆ. ಇದರ ಸಮಗ್ರ ತನಿಖೆಯನ್ನು ಮಾಡಲು ರಾಜ್ಯ ಸರ್ಕಾರಕ್ಕೆ ಆಗ್ತ ಇಲ್ಲ. ಕೆಪಿಎಸ್‌ಸಿಯಲ್ಲಿ ಸುಧಾರಣೆ ತರಲು ಕಾಂಗ್ರೆಸ್ ಸರ್ಕಾರಕ್ಕೆ ಮನಸ್ಸಿಲ್ಲ. ಆದ್ದರಿಂದ ಯುಪಿಎಸ್‌ಸಿ ಮಾದರಿ ಪರೀಕ್ಷೆ ಆಗಲಿ ಎಂದರು.

ಭ್ರಷ್ಟಾಚಾರ ಮುಕ್ತ ನೇಮಕಾತಿ ವ್ಯವಸ್ಥೆಯನ್ನು ಜಾರಿಗೆ ತರಬೇಕು. ಪರೀಕ್ಷಾ ಪ್ರಕ್ರಿಯೆಯಿಂದ ಫಲಿತಾಂಶದವರೆಗೆ ಸಂಪೂರ್ಣ ಪಾರದರ್ಶಕತೆ ಖಚಿತಪಡಿಸುವ ಸುಧಾರಣಾ ಕ್ರಮಗಳನ್ನು ಸರ್ಕಾರ ತಕ್ಷಣ ಕೈಗೊಳ್ಳಬೇಕು ಎಂದು ಹೇಳಿದರು.



**ಮಾನ ಮರ್ಯಾದೆ ಇಲ್ಲವೇ:**

ಈ ರಾಜ್ಯ ಸರ್ಕಾರಕ್ಕೆ ಮಾನ ಮರ್ಯಾದೆ ಇದ್ದರೆ ಪರೀಕ್ಷಾ ವ್ಯವಸ್ಥೆಯಲ್ಲಿ ಸುಧಾರಣೆ ತರಲಿ. ಗ್ಯಾರಂಟಿಗಳ ಬಗ್ಗೆ ಮಾತನಾಡುವವರು ರಾಜ್ಯದ ಲಕ್ಷಾಂತರ ಮಕ್ಕಳ ಜೊತೆ ಚೆಲ್ಲಾಟ ಆಡುವುದನ್ನು ಇನ್ನಾದರೂ ನಿಲ್ಲಿಸಲಿ. ಅವರ ಬದುಕಿಗೆ ಕೆಲಸದ ಗ್ಯಾರಂಟಿ ನೀಡಲಿ. 2.5 ಲಕ್ಷ ಹುದ್ದೆ ಖಾಲಿ ಇದ್ದರೂ ನಾಲಾಯಕ್ ಸರ್ಕಾರಕ್ಕೆ ತುಂಬಲು ಆಗಿಲ್ಲ ಎಂದು ವ್ಯಂಗ್ಯವಾಡಿದರು.

**ರಾಜ್ಯ ಸರ್ಕಾರದ ಕಿವಿ ಹಿಂಡುತ್ತೇವೆ:**

ಕೆಪಿಎಸ್‌ಸಿಅಕ್ರಮ ಸೇರಿದಂತೆ ಉದ್ಯೋಗಾಕಾಂಕ್ಷಿಗಳ ಸಮಸ್ಯೆಗಳನ್ನು ಪರಿಹಾರ ಮಾಡದ ರಾಜ್ಯ ಸರ್ಕಾರದ ಕಿವಿಯನ್ನು ಹಿಂಡುವ ಕೆಲಸವನ್ನು ಬಿಜೆಪಿ ಮಾಡಲಿದೆ. ಯುವ ಜನರ ಧ್ವನಿಯಾಗಿ ಸದನದ ಹೊರಗೆ ಮತ್ತು ಒಳಗೆ ಕೆಲಸ ಮಾಡುತ್ತೇವೆ. ಎಲ್ಲ ಶಾಸಕರು ಒಕ್ಕೊರಲಿನಿಂದ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದರು.

ಹೈಕೋರ್ಟ್ ಮೊರೆ ಹೋಗಬೇಕಾದ ಪರಿಸ್ಥಿತಿ...

ಈ ಹಿಂದೆ 2.5 ಲಕ್ಷ ಸರ್ಕಾರಿ ಹುದ್ದೆಗಳ ಭರ್ತಿಗೆ ಆಗ್ರಹಿಸಿ ಪ್ರತಿಭಟನೆ ಆದಾಗ ಮುಖ್ಯಮಂತ್ರಿಗಳನ್ನು ಭೇಟಿಯಾಗಲು ಯುವಕರಿಗೆ ಸಹ ಅವಕಾಶ ನೀಡಿರಲಿಲ್ಲ. ಆಗ ಅವರು ಹೈಕೋರ್ಟ್ ಮೊರೆ ಹೋಗಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು. ಇದು ನೋವಿನ ಸಂಗತಿ ಎಂದರು. ರಾಜ್ಯ ಸರ್ಕಾರದ ಇಂತಹ ಅಸಡ್ಡೆ ಮತ್ತು ನಿರ್ಲಕ್ಷ್ಯ ಒಳ್ಳೆಯದಲ್ಲ. ಮುಖ್ಯಮಂತ್ರಿಗಳು ಇನ್ನಾದರೂ ಎಚ್ಚೆತ್ತುಕೊಳ್ಳಲಿ. ಬಣ್ಣ ಬಣ್ಣದ ಮಾತುಗಳಿಂದ ಹೊಟ್ಟೆ ತುಂಬಿಸಲು ಸಾಧ್ಯವಿಲ್ಲ ಎಂದರು.

# 31ರಂದು ಲೋಕಾಯುಕ್ತ ಅಧಿಕಾರಿಗಳಿಂದ ಕುಂದುಕೊರತೆಗಳ ಅಹವಾಲು ಸ್ವೀಕಾರ

ರಾಮನಗರ

ಬೆಂಗಳೂರು ದಕ್ಷಿಣ ಜಿಲ್ಲಾ ಲೋಕಾಯುಕ್ತ ಠಾಣಾ ಪೊಲೀಸ್ ಅಧಿಕಾರಿಗಳು ಜು. 31ರಂದು ಬೆಳಿಗ್ಗೆ 11 ಗಂಟೆಗೆ ರಾಮನಗರ ಟೌನಿನ ರಾಮನಗರ ನಗರಸಭೆ ಕಾರ್ಯಾಲಯದಲ್ಲಿ ತಾಲ್ಲೂಕು ವ್ಯಾಪ್ತಿಯ ಸಾರ್ವಜನಿಕರಿಂದ ಕುಂದುಕೊರತೆಗಳ ಅಹವಾಲುಗಳನ್ನು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

ತಾಲ್ಲೂಕು ವ್ಯಾಪ್ತಿಯ ಸಾರ್ವಜನಿಕರು ತಮ್ಮ ಕುಂದು ಕೊರತೆಗಳ ಅಹವಾಲು ಅರ್ಜಿ ಸ್ವೀಕರಿಸಲು, ಜು. 31ರಂದು ಬೆಳಿಗ್ಗೆ 11 ಗಂಟೆಗೆ ರಾಮನಗರ ಟೌನಿನ ರಾಮನಗರ ನಗರಸಭೆ ಕಾರ್ಯಾಲಯದಲ್ಲಿ ತಮ್ಮ ಲಿಖಿತ ದೂರು ಮತ್ತು ಸಂಬಂಧಿಸಿದ ದಾಖಲಾತಿ/ಗುರುತಿನ ಚೀಟಿಯೊಂದಿಗೆ ದ್ವಿಪ್ರತಿಯಲ್ಲಿ ಹಾಜರಾಗುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಾಲ್ಲೂಕು ವ್ಯಾಪ್ತಿಯ ಸಾರ್ವಜನಿಕರು ತಮ್ಮ ಕುಂದು ಕೊರತೆಗಳ ಅಹವಾಲು ಅರ್ಜಿ ಸ್ವೀಕರಿಸಲು, ಜು. 31ರಂದು ಬೆಳಿಗ್ಗೆ 11 ಗಂಟೆಗೆ ರಾಮನಗರ ಟೌನಿನ ರಾಮನಗರ ನಗರಸಭೆ ಕಾರ್ಯಾಲಯದಲ್ಲಿ ತಮ್ಮ ಲಿಖಿತ ದೂರು ಮತ್ತು ಸಂಬಂಧಿಸಿದ ದಾಖಲಾತಿ/ಗುರುತಿನ ಚೀಟಿಯೊಂದಿಗೆ ದ್ವಿಪ್ರತಿಯಲ್ಲಿ ಹಾಜರಾಗುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರಂಭಿಕ ಬಾಲ್ಯ ಆರೈಕೆಗೆ ಯುನೈಟೆಡ್‌ವೇ ಬೆಂಗಳೂರು ಬಲ



ರಾಯಚೂರು

ಜಿಇ ಹೆಲ್ತ್‌ಕೇರ್ ಮತ್ತು ಯುನೈಟೆಡ್ ವೇ ಬೆಂಗಳೂರು ಸಂಸ್ಥೆಗಳು ಹತ್ತು ವರ್ಷಗಳ ಯಶಸ್ವಿ ಸಹಭಾಗಿತ್ವವನ್ನು ಆಚರಿಸುತ್ತಿದ್ದು, ರಾಯಚೂರು ಜಿಲ್ಲಾಡಳಿತದ ಸಹಯೋಗದೊಂದಿಗೆ ಕರ್ನಾಟಕದಲ್ಲಿ ಆರಂಭಿಕ ಬಾಲ್ಯ ಆರೈಕೆ ಮತ್ತು ಶಿಕ್ಷಣ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಕಾರ್ಯಗಳನ್ನು ಕೈಗೊಂಡಿವೆ.

ಯುನೈಟೆಡ್ ವೇ ಬೆಂಗಳೂರು ಸಂಸ್ಥೆಯ ಪ್ರಮುಖ ಉಪಕ್ರಮವಾದ 'ಬೋರ್ನ್ ಲರ್ನಿಂಗ್ ಕ್ಯಾಂಪೇನ್' ಮೂಲಕ ಅಂಗನವಾಡಿ ವ್ಯವಸ್ಥೆಗಳನ್ನು ಬಲಪಡಿಸುವುದರ ಜೊತೆಗೆ, ರಾಜ್ಯದಾದ್ಯಂತ ಆರಂಭಿಕ ಶಿಕ್ಷಣದ ಗುಣಮಟ್ಟ ಮತ್ತು ಫಲಿತಾಂಶಗಳನ್ನು ಸುಧಾರಿಸುವ ಗುರಿಯನ್ನು ಹೊಂದಲಾಗಿದೆ. ಕರ್ನಾಟಕದ ಮಹತ್ವಾಕಾಂಕ್ಷಿ ಜಿಲ್ಲೆಗಳಲ್ಲಿ ಒಂದಾಗಿರುವ ರಾಯಚೂರಿನಲ್ಲಿ ಜಾರಿಗೊಂಡಿರುವ ಈ ಅಭಿಯಾನವು ಮಕ್ಕಳ ಜೀವನದ ಅತ್ಯಂತ ಮಹತ್ವದ ಆರಂಭಿಕ ವರ್ಷಗಳಲ್ಲಿ ಸಮಗ್ರ ಬೆಳವಣಿಗೆಗೆ ಪೂರಕವಾಗುವಂತೆ ಅಂಗನವಾಡಿ ಕೇಂದ್ರಗಳನ್ನು ಮಕ್ಕಳ ಸ್ನೇಹಿ ಹಾಗೂ ಚೈತನ್ಯಮಯ ಕಲಿಕಾ ವಾತಾವರಣಗಳಾಗಿ ಪರಿವರ್ತಿಸುವತ್ತ ಗಮನಹರಿಸಿದೆ.

# ಕೆಪಿಎಸ್‌ಸಿ ಲಂಚಾವತಾರ: ಸಿಬಿಐ ತನಿಖೆಗೆ ಒತ್ತಾಯ

ಬೆಂಗಳೂರು



ಕೆಪಿಎಸ್‌ಸಿ ಉದ್ಯೋಗಾಕಾಂಕ್ಷಿಗಳ ಹೋರಾಟದಲ್ಲಿ ಬಿಜೆಪಿ ಸದಾ ಪಾಲ್ಗೊಂಡಿದೆ. ಇನ್ನು ಮುಂದೆಯೂ ಹೋರಾಟಕ್ಕೆ ಬೆಂಬಲ ನೀಡಲಿದ್ದೇವೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ತಿಳಿಸಿದ್ದಾರೆ.

ಕೆಪಿಎಸ್‌ಸಿ ವಿದ್ಯಾರ್ಥಿಗಳು ತಮ್ಮ ವಿವಿಧ ಬೇಡಿಕೆ ಮುಂದಿಟ್ಟು ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆ ನಡೆಸುತ್ತಿದ್ದು, ಅವರಿಗೆ ಬೆಂಬಲ ನೀಡುವ ದೃಷ್ಟಿಯಿಂದ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ಇಂದು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಇದೇವೇಳೆ ಮಾತನಾಡಿದ ಛಲವಾದಿ ನಾರಾಯಣಸ್ವಾಮಿ ಅವರು, ಹಿಂದೆ ತರ್ಜುಮೆ ಮಾಡಿದ ಅರ್ಥಹೀನ ಪ್ರಶ್ನೆಗಳನ್ನು ಕೇಳಲಾಗಿತ್ತು. ಆದರೂ ಪರೀಕ್ಷೆ ಮಾಡಿ ಆಯ್ಕೆ ಮಾಡಿದ್ದಾರೆ. ಎಂಥ ಸರಕಾರ ಇದು ಎಂದು ಆಶ್ಚರ್ಯ ವ್ಯಕ್ತಪಡಿಸಿದರು.

ನಿನ್ನೆ ಆರ್.ಅಶೋಕ್ ಮತ್ತು ನಾನು ಕೆಪಿಎಸ್‌ಸಿ ಲಂಚಾವತಾರದ ಸಂಬಂಧ ಪ್ರಮುಖ ಅಧಿಕಾರಿಗಳನ್ನು ಭೇಟಿ ಮಾಡಿದ್ದೇವೆ.

ತಕ್ಷಣ ಈ ಕೇಸನ್ನು ಸಿಬಿಐಗೆ ಕೊಡಬೇಕೆಂದು ಹೇಳಿರುವುದಾಗಿ ತಿಳಿಸಿದರು. ಇದು ಲಂಚಪ್ರಿಯ ಮತ್ತು ಭೂಮಿಪ್ರಿಯ ಸರಕಾರ ಎಂದು ಟೀಕಿಸಿದರು. ಮೊದಲು ವಿದ್ಯೆಯ ಮಾರಾಟ ಆಗುತ್ತಿತ್ತು. ಈಗ ಅದರ ಜೊತೆ ಹುದ್ದೆಗಳ ಮಾರಾಟ ಆಗುತ್ತಿದೆ ಎಂದು ಆಕ್ಷೇಪಿಸಿದರು.

# ಜಿಲ್ಲಾಧಿಕಾರಿಗಳಿಂದ ಭೂಸ್ವಾಧೀನ ಪ್ರಗತಿ ಪರಿಶೀಲನೆ

ತುಮಕೂರು

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿಂದು ಜರುಗಿದ ಸಭೆಯಲ್ಲಿ ರಾಷ್ಟ್ರೀಯ ಹೆದ್ದಾರಿ–206 ಯೋಜನೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಮಂಗಳವಾರ ಭೂಸ್ವಾಧೀನ ಪ್ರಗತಿಯನ್ನು ಪರಿಶೀಲಿಸಿದರು.

ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ತುಮಕೂರು ಬೈಪಾಸ್ ರಸ್ತೆ ಯೋಜನೆ ಹಾಗೂ ರಾಷ್ಟ್ರೀಯ ಹೆದ್ದಾರಿ–206 ಯೋಜನೆಗೆ ಸಂಬಂಧಿಸಿದ ವಿವಿಧ ವಿಷಯಗಳ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚಿಸಿದರು.

ತುಮಕೂರು ಬೈಪಾಸ್ ರಸ್ತೆ ಯೋಜನೆಯಡಿ ದೊಡ್ಡಸಾರಂಗಿ ಹಾಗೂ ಸಾರಂಗಿಪಾಳ್ಯ ಗ್ರಾಮಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆಯನ್ನು ಸುಗಮವಾಗಿ ಕೈಗೊಳ್ಳಲು ಪೊಲೀಸ್ ರಕ್ಷಣೆ ಒದಗಿಸುವಂತೆ ರಾಷ್ಟ್ರೀಯ ಹೆದ್ದಾರಿ–206ರ ವಿಶೇಷ ಭೂಸ್ವಾಧೀನಾಧಿಕಾರಿ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದಾಗ ಪೊಲೀಸ್ ರಕ್ಷಣೆ ಸಂಬಂಧ ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅದೇ ರೀತಿ, ಜಯಂತಿ ಗ್ರಾಮ, ಕರಡಿಕೋಡಿ ಗ್ರಾಮ ಹಾಗೂ ದೊಡ್ಡಗುಣಿ ಗ್ರಾಮಗಳಲ್ಲಿ ಯೋಜನೆಗೆ ಇರುವ ತೊಡಕುಗಳನ್ನು ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಇತ್ಯರ್ಥಪಡಿಸುವಂತೆ ರಾಷ್ಟ್ರೀಯ ಹೆದ್ದಾರಿ ಅಭಿಯಂತರರಿಗೆ ಸೂಚನೆ ನೀಡಿದರು.

ಕೆಪಿಟಿಸಿಎಲ್‌ಗೆ ಅಗತ್ಯವಿರುವ ಜಮೀನಿಗೆ ಸಂಬಂಧಿಸಿದಂತೆ ಈಗಾಗಲೇ ಒದಗಿಸಲಾದ ಭೂಮಿ ಕುರಿತು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಭೆಯಲ್ಲಿ ವಿವಿಧ ನೀರಾವರಿ ಯೋಜನೆಗಳ ಮುಖ್ಯಸ್ಥರು, ರಾಷ್ಟ್ರೀಯ ಹೆದ್ದಾರಿ ಇಲಾಖೆಯ ಅಧಿಕಾರಿಗಳು ಹಾಗೂ ಕೆಪಿಟಿಸಿಎಲ್ ಅಧಿಕಾರಿಗಳು ಭಾಗವಹಿಸಿದ್ದರು.

# ವಾಲ್ಮೀಕಿ ವಿದ್ಯಾವರ್ಧಕ ಸಂಘದಿಂದ ವೀರಣ್ಣನವರಿಗೆ ಶ್ರದ್ಧಾಂಜಲಿ

ತುಮಕೂರು

ಇತ್ತೀಚೆಗೆ ನಿಧನರಾದ ಮಾಜಿ ಸಚಿವ ಸಿ.ವೀರಣ್ಣನವರಿಗೆ ಜಿಲ್ಲಾ ವಾಲ್ಮೀಕಿ ವಿದ್ಯಾವರ್ಧಕ ಸಂಘದಿಂದ ಮಂಗಳವಾರ ಶ್ರದ್ಧಾಂಜಲಿ ಸಲ್ಲಿಸಿ, ಅವರ ಸೇವೆ ಸ್ಮರಿಸಲಾಯಿತು.

ನಗರದ ವಾಲ್ಮೀಕಿ ವಿದ್ಯಾವರ್ಧಕ ಸಂಘದ ಆವರಣದಲ್ಲಿ ಸಂಘದ ಅಧ್ಯಕ್ಷ ಹೆಚ್.ಜಿ. ಪುರುಷೋತ್ತಮ್ ಹಾಗೂ ಪದಾಧಿಕಾರಿಗಳು ಮೌನಾಚರಣೆ ಮಾಡಿ ಸಿ. ವೀರಣ್ಣನವರ ಆತ್ಮಕ್ಕೆ ಶಾಂತಿ ಕೋರಿದರು. ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ನಮನ ಸಲ್ಲಿಸಿದರು.

ನಂತರ ಮಾತನಾಡಿದ ಅಧ್ಯಕ್ಷ ಹೆಚ್.ಜಿ. ಪುರುಷೋತ್ತಮ್, ಜನಾನುರಾಗಿ ರಾಜಕಾರಣಿಯಾಗಿದ್ದ ವೀರಣ್ಣನವರು ವಾಲ್ಮೀಕಿ ಸಮಾಜದ ಪ್ರಮುಖ ನಾಯಕರಾಗಿದ್ದರು. ಕ್ಷೇತ್ರದಿಂದ ಜನತಾಪಕ್ಷದ ಅಭ್ಯರ್ಥಿಯಾಗಿ ಆಯ್ಕೆಯಾಗಿ ವಿಧಾನಸಭೆ ಪ್ರವೇಶಿಸಿದ್ದ ವೀರಣ್ಣನವರು 1983ರಲ್ಲಿ ಉಪಸಭಾಪತಿಯಾಗಿದ್ದರು. ರಾಮಕೃಷ್ಣ ಹೆಗಡೆ ಹಾಗೂ ಎಸ್. ಆರ್. ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದ ಸಂಪುಟದಲ್ಲಿ ಸಚಿವರಾಗಿದ್ದರು. ಸಾರಿಗೆ, ಸಣ್ಣ ಉಳಿತಾಯ, ಕೈಗಾರಿಕೆ ಹಾಗೂ ವಾಣಿಜ್ಯ ಸೇರಿ ವಿವಿಧ ಖಾತೆಗಳನ್ನು ಸಮರ್ಥವಾಗಿ ನಿರ್ವಹಿಸಿದ್ದರು ಎಂದರು.

ಸಂಘದ ನಿರ್ದೇಶಕ ಶಿವಸ್ವಾಮಿಯವರು ಶಾಲಾ ವಿದ್ಯಾರ್ಥಿಗಳಿಗೆ ವೀರಣ್ಣನವರ ಜೀವನಚರಿತ್ರೆ ತಿಳಿಸಿಕೊಟ್ಟರು. ನಿರ್ದೇಶಕರಾದ ತಿಪ್ಪೇಸ್ವಾಮಿ, ಉಮೇಶ್, ಜಿ.ಆರ್. ನಾಗರಾಜ್, ಶಾಲೆ ಮುಖ್ಯ ಶಿಕ್ಷಕಿ ಪಂಕಜ ಮತ್ತಿತರರು ಭಾಗವಹಿಸಿದ್ದರು.

# 30ರಂದು ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ

ರಾಮನಗರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಾರ್ಮಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಜಿಲ್ಲಾ ವಕೀಲರ ಸಂಘ, ಶಾಂತ ಜೀವ ಜ್ಯೋತಿ ಹಾಗೂ ಜಿಲ್ಲೆಯ ಎಲ್ಲಾ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ–2026 ಕಾರ್ಯಕ್ರಮವನ್ನು ಇದೇ 30ರಂದು ಬೆಳಿಗ್ಗೆ 10.30ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.ಕಾರ್ಯಕ್ರಮವನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ನ್ಯಾ. ಎಂ.ಎಚ್. ಅಣ್ಣಯ್ಯನವರ ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್, ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್, ಆರ್. ಶ್ರೀನಿವಾಸ ಗೌಡ ಘನ ಉಪಸ್ಥಿತರಿರುವರು.

# ಧಾರ್ಮಿಕ ಕಾರ್ಯಗಳಿಂದ ಶಾಂತಿ ನೆಮ್ಮದಿ: ಚಿನ್ನಪ್ಪ

ದೇವನಹಳ್ಳಿ

ವಿಷ್ಣುದೇವನಿಗೆ ಸಮರ್ಪಿತವಾದ ಅತ್ಯಂತ ಮಹತ್ವವಾದ ಏಕಾದಶಿ ವ್ರತದಲ್ಲಿ ಆಶಾಢಶುದ್ಧ ಪ್ರಥಮ ಪ್ರತಿ ವರ್ಷದಂತೆ ಈ ವರ್ಷವೂ ಮೂರು ದಿನಗಳ ಕಾಲ ಮಾರಮ್ಮ ಗಂಗಮ್ಮ ದೊಡ್ಡಮ್ಮ ಮತ್ತು ಕಾಳಿಕಾದೇವಿ ಅಮ್ಮನವರನ್ನು ಮಾರಮ್ಮ ದೇವಿ ದೇವಾಲಯದಲ್ಲಿ ಪ್ರತಿಷ್ಠಾಪಿಸಿ ಜಾತ್ರಾ ಮಹೋತ್ಸವ ಮಾಡಲಾಗುತ್ತಿದೆ ಎಂದು ಕೆಪಿಸಿಸಿ ಸದಸ್ಯ ಚಿನ್ನಪ್ಪ ತಿಳಿಸಿದರು.

ಪಟ್ಟಣದ ಪುಟ್ಟಪ್ಪನಗುಡಿ ಬೀದಿಯಲ್ಲಿರುವ ಮಾರಮ್ಮ ದೇವಾಲಯದಲ್ಲಿ ದೇವಿಯವರ 14ನೇ ವರ್ಷದ ವಾರ್ಷಿಕೋತ್ಸವ ವಿಜೃಂಭಣೆಯಿಂದ ನಡೆಯಿತು ಜಿಲ್ಲಾ ಪಂಚಾಯತ್ ಮಾಜಿ ಉಪಾಧ್ಯಕ್ಷೆ ಅನಂತಕುಮಾರಿ ಚಿನ್ನಪ್ಪ ಮಾತನಾಡಿ 14 ನೇ ವರ್ಷದ ವಾರ್ಷಿಕೊತ್ಸವಕ್ಕೆ ಈ ಭಾಗದ ಮುತ್ತೈದೆಯರು ದೇವಿಗೆ ಮೂರು ದಿನಗಳ ಕಾಲ ಪೂಜೆ ಸಲ್ಲಿಸಿ ಜಾತ್ರಾ ಮಹೋತ್ಸವಕ್ಕೆ ಕಳೆ ತಂದಿದ್ದಾರೆ. ದೇವಿ ಎಲ್ಲರಿಗೂ ಒಳ್ಳೆಯದನ್ನು ಮಾಡಿ ಕಾಲಕಾಲಕ್ಕೆ ಮಳೆಬೆಳೆ ನೀಡಿ ಬರಗಾಲ ಬಾರದಂತೆ ದೇವಿ ಕಾಪಾಡಲಿ ಎಂದು ಹೇಳಿದರು.



ಊರಿನ ಪ್ರಮುಖ ಬೀದಿಗಳಲ್ಲಿ ದೇವರುಗಳನ್ನು ಮೆರವಣಿ ಮಾಡಲಾಯಿತು.

ನಿವೃತ್ತ ಪುರಸಭಾ ಮುಖ್ಯಾಧಿಕಾರಿ ಮುನಿರಾಜು, ಕಂದಾಯ ಅಧಿಕಾರಿ ಮಂಜುನಾಥ, ನಾರಾಯಣ ಸ್ವಾಮಿ, ಬಾನು, ಗೋಪಾಲ್, ನಾಗರಾಜು, ಮುನಿರಾಜು, ವಾಟರ್ ಮನ್ ಗಂಗರಾಜು, ಮಂಜುನಾಥ, ಮುನಿಯಪ್ಪ, ಅಣ್ಣಪ್ಪ ದೇವಾಲಯದ ಪ್ರಧಾನ ಅರ್ಚಕರು ಉಪಸ್ಥಿತರಿದ್ದರು.

## ರಸ್ತೆ ಕುಸಿತದಿಂದ ಅಪಾಯದ ಭೀತಿ; ದುರಸ್ತಿಗೆ ನಾಗರಿಕರ ಆಗ್ರಹ



ವಿಜಯಪುರ

ಪಟ್ಟಣದಿಂದ ದೊಡ್ಡ ಮೋರಿಯ ಸಮೀಪದಿಂದ ಮೇಲೂರಿನ ಕಡೆಗೆ ಸಂಚರಿಸುವ ಮುಖ್ಯ ರಸ್ತೆಯ ದುಸ್ಥಿತಿ ವಾಹನ ಸವಾರರಲ್ಲಿ ಆತಂಕ ಮೂಡಿಸಿದೆ.

ರಸ್ತೆಯ ಪಕ್ಕದಲ್ಲಿ ನಿರ್ಮಿಸಿರುವ ಚರಂಡಿಯ ಬಳಿ ರಸ್ತೆ ಕುಸಿದು ಬೀಳುತ್ತಿದ್ದು, ಅದರ ಪಕ್ಕದಲ್ಲಿ ಕಸದ ರಾಶಿ ತುಂಬಿಕೊಂಡಿದೆ. ಚರಂಡಿಯ ಅಂಚು ಮುರಿದು ರಸ್ತೆಯೊಂದಿಗೆ ಬೆರೆತು ಹೋಗುತ್ತಿದೆ, ದೂರದಿಂದ ನೋಡಿದರೆ ರಸ್ತೆ ಕುಸಿಯುತ್ತಿರುವುದು ಕಾಣಿಸುವುದಿಲ್ಲ. ಚರಂಡಿ ಎಲ್ಲಿದೆ ಎಂದು ತಿಳಿಯುವುದೇ ಕಷ್ಟ. ಚರಂಡಿಯ ಸಮೀಪದಲ್ಲೇ ಇಟ್ಟಿಗೆಗಳನ್ನು ಜೋಡಿಸಿದ್ದು, ರಸ್ತೆ ಇನ್ನಷ್ಟು ಕಿರಿದಾಗಿದೆ.

ಈ ರಸ್ತೆಯಲ್ಲಿ ದಿನನಿತ್ಯ ನೂರಾರು ದ್ವಿಚಕ್ರ ವಾಹನ, ಆಟೋ, ಶಾಲಾ ವಾಹನಗಳು ಸಂಚರಿಸುತ್ತವೆ. ರಾತ್ರಿ ವೇಳೆ ಹಾಗೂ ಮಳೆಗಾಲದಲ್ಲಿ ಕುಸಿದ ಚರಂಡಿ ಗಮನಕ್ಕೆ ಬಾರದೆ ವಾಹನಗಳು ಚರಂಡಿಗೆ ಬೀಳುವ ಸಾಧ್ಯತೆ ಹೆಚ್ಚಾಗಿದೆ. ಜೊತೆಗೆ ಚರಂಡಿಯಲ್ಲಿ ಸಂಗ್ರಹವಾಗಿರುವ ಕಸದಿಂದ ದುರ್ವಾಸನೆ ಬೀರುತ್ತಿದ್ದು, ಸಾಂಕ್ರಾಮಿಕ ರೋಗ ಹರಡುವ ಭೀತಿಯೂ ಇದೆ.

ಇದು ಒಂದೆರಡು ದಿನದ ಸಮಸ್ಯೆಯಲ್ಲ. ಹಲವು ದಿನಗಳಿಂದ ಚರಂಡಿ ಕುಸಿಯುತ್ತಿದ್ದರೂ ಪುರಸಭೆ ಅಥವಾ ಲೋಕೋಪಯೋಗಿ ಇಲಾಖೆಯವರು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಸ್ಥಳೀಯ ನಾಗರಿಕರು ಆರೋಪಿಸಿದ್ದಾರೆ.

ನಾಗರಿಕರ ಒತ್ತಾಯ: ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲಿಸಿ, ಕುಸಿದಿರುವ ಚರಂಡಿಯನ್ನು ದುರಸ್ತಿ ಪಡಿಸಬೇಕು, ಕಸದ ರಾಶಿಯನ್ನು ತೆರವುಗೊಳಿಸಿ ಸೂಚನಾ ಫಲಕ ಅಳವಡಿಸಬೇಕು ಎಂದು ನಾಗರಿಕರು ಒತ್ತಾಯಿಸಿದ್ದಾರೆ. ಅವಘಡ ಸಂಭವಿಸುವ ಮುನ್ನ ಎಚ್ಚೆತ್ತುಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

## ಅನಧಿಕೃತ ಬ್ಯಾನರ್, ಫ್ಲೆಕ್ಸ್ ಅಳವಡಿಸಿದರೆ ಕಾನೂನು ಕ್ರಮ

ತಿಪಟೂರು

ನಗರಸಭೆ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಸ್ಥಳಗಳಲ್ಲಿ ಹೋರ್ಡಿಂಗ್, ಬ್ಯಾನರ್, ಬಂಟಿಂಗ್, ಫ್ಲೆಕ್ಸ್ ಹಾಗೂ ಪೋಸ್ಟರ್ ಅಳವಡಿಕೆಗೆ ಸಂಬಂಧಿಸಿದಂತೆ ನಗರಸಭೆ ಸಾರ್ವಜನಿಕ ಪ್ರಕಟಣೆ ಹೊರಡಿಸಿದಲಾಗಿದ್ದು, ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶ ಹಾಗೂ ನಗರಾಭಿವೃದ್ಧಿ ಇಲಾಖೆಯ ನಿರ್ದೇಶನದಂತೆ, ನಗರ ಸೌಂದರ್ಯೀಕರಣ ಮತ್ತು ಸಾರ್ವಜನಿಕರ ಸುರಕ್ಷತೆಯ ದೃಷ್ಟಿಯಿಂದ ನಗರದ ನೀಲಕಂಠಸ್ವಾಮಿ ವೃತ್ತ, ಡಾ..ಬಿ.ಆರ್. ಅಂಬೇಡ್ಕರ್ ವೃತ್ತ ಮತ್ತು ಹಾಸನ ರಸ್ತೆ ವೃತ್ತ ಸೇರಿದಂತೆ ಒಟ್ಟು ಮೂರು ಸ್ಥಳಗಳಲ್ಲಿ ಮಾತ್ರ ನಗರಸಭೆಯ ಅನುಮತಿ ಪಡೆದು, ನಿಗದಿತ ಶುಲ್ಕ ಪಾವತಿಸಿ ಫ್ಲೆಕ್ಸ್ ಹಾಗೂ ಬ್ಯಾನರ್ ಅಳವಡಿಸಲು ಅವಕಾಶವಿದೆ ನಗರಸಭೆಯ ಪೌರಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಗರದ ಪ್ರಮುಖ ರಸ್ತೆಗಳಲ್ಲಿ ಇರುವ ಡಿವೈಡರ್‌ಗಳು ಹಾಗೂ ವಿದ್ಯುತ್ ಕಂಬಗಳಿಗೆ ಯಾವುದೇ ರೀತಿಯ ಬ್ಯಾನರ್, ಫ್ಲೆಕ್ಸ್ ಅಥವಾ ಪೋಸ್ಟರ್ ಅಳವಡಿಸುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ. ರಾಜಕೀಯ ಪಕ್ಷಗಳು, ಸಂಘ-ಸಂಸ್ಥೆಗಳು, ಸಹಕಾರ ಸಂಘಗಳು, ಎನ್‌ಜಿಒಗಳು, ಸರ್ಕಾರಿ ಹಾಗೂ ಖಾಸಗಿ ಕಚೇರಿಗಳು, ಕಂಪನಿಗಳು ಸೇರಿದಂತೆ ಎಲ್ಲಾ ಸಾರ್ವಜನಿಕರು ಈ ನಿಯಮವನ್ನು ಕಡ್ಡಾಯವಾಗಿ ಪಾಲಿಸುವಂತೆ ನಗರಸಭೆ ಮನವಿ ಮಾಡಿದೆ.

ನಿಯಮ ಉಲ್ಲಂಘಿಸಿ ಅನಧಿಕೃತವಾಗಿ ಬ್ಯಾನರ್, ಫ್ಲೆಕ್ಸ್, ಪೋಸ್ಟರ್ ಅಥವಾ ಬಂಟಿಂಗ್‌ಗಳನ್ನು ಅಳವಡಿಸಿದರೆ, ಸಾರ್ವಜನಿಕರಿಗೆ ಅಥವಾ ವಾಹನ ಸವಾರರಿಗೆ ಉಂಟಾಗುವ ಅನಾಹುತಗಳಿಗೆ ಸಂಬಂಧಪಟ್ಟವರನ್ನೇ ನೇರ ಹೊಣೆಗಾರರನ್ನಾಗಿ ಪರಿಗಣಿಸಿ ದಂಡ ವಿಧಿಸುವುದರ ಜೊತೆಗೆ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ತಿಳಿಸಿದ್ದಾರೆ.

## ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಕ್ರೀಡೆ ಅತ್ಯಂತ ಅವಶ್ಯಕ: ಭವ್ಯಾಮಹೇಶ್

ವಿಜಯಪುರ

ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ವಿಜಯಪುರ ಹೋಬಳಿ ಮಟ್ಟದ ಕ್ರೀಡಾಕೂಟಕ್ಕೆ ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್ ಅವರು ಚಾಲನೆ ನೀಡಿದರು.

14 ರಿಂದ 17 ವರ್ಷದೊಳಗಿನ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಈ ಕ್ರೀಡಾಕೂಟದಲ್ಲಿ ಹೋಬಳಿ ವ್ಯಾಪ್ತಿಯ 28 ಶಾಲೆಗಳ ನೂರಾರು ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉತ್ಸಾಹದಿಂದ ಭಾಗವಹಿಸಿದ್ದರು.

ಪುರಸಭಾ ಅಧ್ಯಕ್ಷೆ ಎಸ್. ಭವ್ಯಾಮಹೇಶ್ ಅವರು ಮಾತನಾಡಿ, ಕ್ರೀಡೆಯು ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಅತ್ಯಂತ ಅವಶ್ಯಕ. ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡೆಯಲ್ಲೂ ತೊಡಗಿಸಿಕೊಂಡಾಗ ಮಾತ್ರ ಪರಿಪೂರ್ಣ ವ್ಯಕ್ತಿತ್ವ ವಿಕಸನ ಸಾಧ್ಯ. ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸುವುದೇ ನಿಜವಾದ ಕ್ರೀಡಾ ಮನೋಭಾವ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಲಲಿತಮ್ಮ ಅವರು ವಿದ್ಯಾರ್ಥಿಗಳಿಗೆ ಶುಭ ಹಾರೈಸಿ ಮಾತನಾಡಿ, ಇಂತಹ ಹೋಬಳಿ ಮಟ್ಟದ ಕ್ರೀಡಾಕೂಟಗಳು ಗ್ರಾಮೀಣ ಪ್ರತಿಭೆಗಳನ್ನು ಗುರುತಿಸಿ ಮುಂದಿನ ಹಂತಕ್ಕೆ ಕೊಂಡೊಯ್ಯಲು ವೇದಿಕೆಯಾಗುತ್ತವೆ. ಎಲ್ಲಾ ವಿದ್ಯಾರ್ಥಿಗಳು ಕ್ರೀಡಾ ಸ್ಪೂರ್ತಿಯಿಂದ ಭಾಗವಹಿಸಿ ಯಶಸ್ಸು ಗಳಿಸಬೇಕು ಎಂದು ಕರೆ ನೀಡಿದರು.

ಮೈದಾನದಲ್ಲಿ ಓಟ, ಗುಂಡು ಎಸೆತ, ಉದ್ದ ಜಿಗಿತ ಸೇರಿದಂತೆ ವಿವಿಧ ಕ್ರೀಡಾ ಸ್ಪರ್ಧೆಗಳು ಜರುಗಿದವು.

ಪುರಸಭಾ ಸದಸ್ಯ ಎ.ಆರ್. ಹನೀಫುಲ್ಲಾ, ಪ್ರಗತಿ ಶಿಕ್ಷಣ ಸಮೂಹ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕ ಎಸ್. ಕೃಪಾಶಂಕರ್, ಪುರಸಭೆ ಮಾಜಿ ಸದಸ್ಯ ಸಿ.ನಾರಾಯಣಸ್ವಾಮಿ, ನಾರಾಯಣಪುರ ಪ್ರೌಢಶಾಲೆಯ ಮುಖ್ಯಶಿಕ್ಷಕ ಪಿ.ಎಂ. ಕೊಟ್ರೇಶ್, ಸಿ.ಆರ್.ಪಿ.ವಿ. ಮುನಿಯಪ್ಪ, ರಾಜುಹವಳೇಕರ್, ಪ್ರಗತಿ ಪ್ರೌಢಶಾಲೆಯ ಮುಖ್ಯಶಿಕ್ಷಕ ವಿ.ಬಸವರಾಜ್, ಶ್ರೀನಿವಾಸ್, ಯತೀಶ್ ಕುಮಾರ್, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಯರಪ್ಪ, ದೈಹಿಕ ಶಿಕ್ಷಕ ವೆಂಕಟೇಶ್, ಬಾಲಚಂದ್ರ, ಬಿ.ಎಸ್.ನಾರಾಯಣ್, ತಾಲೂಕು ದೈಹಿಕ ಶಿಕ್ಷಣ ಅಧಿಕಾರಿ ಜಿ.ಆರ್.ರಾಮಾಂಜಿನಪ್ಪ, ನಿವೃತ್ತ ದೈಹಿಕ ಶಿಕ್ಷಕ ರಾಮಾಂಜು, ಮುಂತಾದವರು ಹಾಜರಿದ್ದರು.

# ಮಾಜಿ ಶಾಸಕ ವಿರುದ್ಧ ಆರೋಪಗಳಿಗೆ ಬಿಜೆಪಿ ಗರಂ



ಬೇತಮಂಗಲ

ಮಾಜಿ ಶಾಸಕ ವೈ. ಸಂಪಂಗಿ ಅವರ ವಿರುದ್ಧ ಆಧಾರರಹಿತ ಹಾಗೂ ರಾಜಕೀಯ ಪ್ರೇರಿತ ಆರೋಪಗಳನ್ನು ಮಾಡುತ್ತಿರುವ ಕೆಜಿಎಫ್ ಶಾಸಕಿ ರೂಪಕಲಾ ಶಶಿಧರ್ ಹಾಗೂ ಕಾಂಗ್ರೆಸ್ ನಾಯಕರ ನಡೆಯನ್ನು ಬಿಜೆಪಿ ಮುಖಂಡರು ತೀವ್ರವಾಗಿ ಖಂಡಿಸಿದ್ದಾರೆ.

ಪಟ್ಟಣದ ಬಳಿಯ ನಾಗಶೆಟ್ಟಿಹಳ್ಳಿಯ ತೋಟದ ಮನೆಯಲ್ಲಿ ಬಿಜೆಪಿ ಮುಖಂಡರು ಸುದ್ದಿಗೋಷ್ಠಿಯಲ್ಲಿ ಮಾತನಾಡಿ, "ಕ್ಷೇತ್ರದಲ್ಲಿ ನಿರಂತರವಾಗಿ ಕೆಲಸ ಮಾಡಿದ ಮಾಜಿ ಶಾಸಕ ಸಂಪಂಗಿ ಅವರ ವಿರುದ್ಧ ಇಲ್ಲಸಲ್ಲದ ಆರೋಪಗಳನ್ನು ಹೊರಿಸಲಾಗುತ್ತಿದೆ. ಶಾಸಕರು ಕ್ಷೇತ್ರದಲ್ಲಿ ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳುವುದನ್ನು ಬಿಟ್ಟು ರಾಜಕೀಯ ವೈಷಮ್ಯ ಸಾಧಿಸುತ್ತಿದ್ದಾರೆ" ಎಂದು ದೂರಿದರು.

ಕ್ಷೇತ್ರದ ಸಾವಿರಾರು ಬಡಜನರ ಪಿಂಚಣಿ ಹಾಗೂ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಗೊಳಿಸಿ ಜನರಿಗೆ ಸಂಕಷ್ಟ ತಂದೊಡ್ಡಲಾಗಿದೆ. ಮಾಜಿ ಶಾಸಕರ ಮೇಲಿನ ಸುಳ್ಳು ಆರೋಪಗಳನ್ನು ನಿಲ್ಲಿಸದಿದ್ದರೆ ಮುಂಬರುವ ದಿನಗಳಲ್ಲಿ ಉಗ್ರ ಹೋರಾಟ ರೂಪಿಸಲಾಗುವುದು" ಎಂದು ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಈಗಾಗಲೇ ಪಿಂಚಣಿ ಹಾಗೂ ಬಿಪಿಎಲ್ ಕಾರ್ಡ್ ರದ್ದತಿಯಾಗಿರುವ ಬಗ್ಗೆ ಆ. 5ರಂದು ತಾಲೂಕಿನಲ್ಲಿ ಬೃಹತ್ ಮಟ್ಟದಲ್ಲಿ ಅರ್ಹ ಫಲಾನುಭವಿಗಳೊಂದಿಗೆ ಹೋರಾಟವನ್ನು ಹಮ್ಮಿಕೊಳ್ಳಲು ಕರೆ ನೀಡಲಾಗಿದೆ ಎಂದು ಹೇಳಿದರು.

ಆರೋಪಗಳ ಖಂಡನೆ: ಮಾಜಿ ಶಾಸಕ ವೈ. ಸಂಪಂಗಿ ಅವರ ವಿರುದ್ಧ ಕಾಂಗ್ರೆಸ್ ನಾಯಕರು ಮತ್ತು ಶಾಸಕರು ಮಾಡುತ್ತಿರುವ ಆರೋಪಗಳು ಆಧಾರರಹಿತ ಹಾಗೂ ರಾಜಕೀಯ ಪ್ರೇರಿತ ಎಂದು ದೂರಿದರು.

ಶಾಸಕರ ವಿರುದ್ಧ ಆರೋಪ: ಕ್ಷೇತ್ರದಲ್ಲಿ ಜನರ ಅಭಿವೃದ್ಧಿ ಕೆಲಸಗಳನ್ನು ಮಾಡುವುದನ್ನು ಬಿಟ್ಟು, ಪಿಂಚಣಿ ಮತ್ತು ಪಡಿತರ ಚೀಟಿ ರದ್ದುಗೊಳಿಸುವುದು ಹಾಗೂ ಮಾಜಿ ಶಾಸಕರ ವಿರುದ್ಧ ನಿರಂತರವಾಗಿ ವಾಗ್ದಾಳಿ ನಡೆಸುವುದೇ ಹಾಲಿ ಶಾಸಕರ ಹಾಗೂ ಮುಖಂಡರ ಕಾಯಕವಾಗಿದೆ ಎಂದು ಮುಖಂಡರು ಆರೋಪಿಸಿದ್ದಾರೆ.

ಇತಿಹಾಸ ಮತ್ತು ಅಭಿವೃದ್ಧಿ: ವೈ. ಸಂಪಂಗಿ ಅವರ ಅವಧಿಯಲ್ಲಿ ನಡೆದ ಅಭಿವೃದ್ಧಿ ಕಾರ್ಯಗಳನ್ನು ಮತ್ತು ಕ್ಷೇತ್ರದ ಜನರಿಗೆ ಅವರು ನೀಡಿದ ಕೊಡುಗೆಗಳನ್ನು ಬಿಜೆಪಿ ಮುಖಂಡರು ಸುದ್ದಿಗೋಷ್ಠಿಯಲ್ಲಿ ಪ್ರತಿಪಾದಿಸಿದರು.

ತೋಟಿ ಇನಾಮ್ತಿ ಜಮೀನನ್ನು ನಮ್ಮ ನಾಯಕರಾದ ಸಂಪಂಗಿಯವರು ಸಕ್ರಮವಾಗಿ ಬೇರೆಯವರಿಂದ ಖರೀದಿ ಮಾಡಿದ್ದಾರೆ ಹೊರತು ಅಕ್ರಮವಾಗಿ ಯಾವುದೇ ದಬ್ಬಾಳಿಕೆಯಿಂದ ಕಬ್ಬಳಿಸಿಕೊಂಡಿದ್ದಲ್ಲ. ಹಾಗೇನಾದರೂ ಸರ್ಕಾರವನ್ನು ವಂಚಿಸಿ ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿದ್ದಲ್ಲಿ ತಕ್ಷಣ ಸರ್ಕಾರಕ್ಕೆ ಬಿಟ್ಟುಕೊಡಲು ಸಿದ್ದರಿದ್ದೇವೆ ಎಂದು ಸ್ಪಷ್ಟಪಡಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಗ್ರಾಮಾಂತರ ಅಧ್ಯಕ್ಷ ಲಕ್ಷ್ಮೀನಾರಾಯಣ ಶರ್ಮ, ವೆಂಕಟಾಚಲಪತಿ, ಸುನೀಲ್ ಕುಮಾರ್, ಲಕ್ಷ್ಮೀಪತಿ ಮಂಜುನಾಥ, ಪ್ರಸಾದ್, ನಾರಾಯಣಸ್ವಾಮಿ, ತಿಪ್ಪಣ್ಣ, ದೇವರಾಜ್, ಜೆಸಿಬಿ ಮುನಿಯಪ್ಪ, ರವಿ ಮುಖಂಡರು ಉಪಸ್ಥಿತರಿದ್ದರು.

# ಶ್ರೀಶಿರಡಿ ಸಾಯಿಬಾಬಾ ಪ್ರತಿಮೆಯೊಂದಿಗೆ ಭಿಕ್ಷಾಟನೆ



ತುಮಕೂರು

ನಗರದ ಕುಣಿಗಲ್ ರಸ್ತೆಯಲ್ಲಿರುವ ರಾಮಕೃಷ್ಣ ನಗರದ ಶ್ರೀಶಿರಡಿ ಸಾಯಿನಾಥ ಸೇವಾ ಸಮಿತಿ ವತಿಯಿಂದ ಗುರುಪೂರ್ಣಿಮೆ ಅಂಗವಾಗಿ ಶಿರಡಿ ಸಂಸ್ಥಾನದ ಸಂಪ್ರದಾಯದಂತೆ ಭಿಕ್ಷಾಟನೆ ನಡೆಸಲಾಯಿತು.

ಗುರುಪೂರ್ಣಿಮೆಯಂದು ಬೆಳಿಗ್ಗೆ 9 ರಿಂದ 11.30ರ ವರೆಗೂ ಗಾಂಧಿನಗರ, ಅಮರ ಜ್ಯೋತಿನಗರ, ಬನಶಂಕರಿ, ಸದಾಶಿವನಗರದ ರಾಜ ಬೀದಿಗಳಲ್ಲಿ ಶ್ರೀಶಿರಡಿ ಸಾಯಿಬಾಬಾ ಪ್ರತಿಮೆಯೊಂದಿಗೆ ಭಿಕ್ಷಾಟನೆ ನಡೆಸಲಾಯಿತು.

ಭಿಕ್ಷಾಟನೆಗೆ ಬಂದ ಬಾಬಾ ಪ್ರತಿಮೆಯನ್ನು ಭಕ್ತಾದಿಗಳು ಆದರಿಂದ ಬರ ಮಾಡಿಕೊಂಡು ಭಿಕ್ಷೆ ಸಮರ್ಪಿಸಿ ಪುನೀತರಾದರು. ಸಾಯಿಬಾಬ ಅವರು ತಮ್ಮ ಜೀವಿತಾವಧಿ 60 ವರ್ಷಗಳ ಕಾಲ ಭಿಕ್ಷಾಟನೆ ಮಾಡಿ ಜೀವನ ನಡೆಸಿದರು.

ಶಿರಡಿಯಲ್ಲಿ ಮಂಗಳವಾರ ಸಹ ಭಿಕ್ಷಾಟನೆ ಮಾಡಿ ದಾಸೋಹ ನಡೆಸುವ ಪದ್ದತಿ ರೂಢಿಯಲ್ಲಿದೆ. ಅದೇ ಸಂಪ್ರದಾಯದಂತೆ ನಗರದಲ್ಲೂ ಸಹ ಭಿಕ್ಷಾಟನೆ ಮಾಡಿ ಅದರಿಂದ ಬರುವ ದವಸ ಧಾನ್ಯವನ್ನು ಬಳಸಿ ಸಾಯಿಬಾಬ ಮಂದಿರದಲ್ಲಿ ದಾಸೋಹ ನಡೆಸಲಾಗುತ್ತಿದೆ ಎಂದು ಸಾಯಿಬಾಬ ಮಂದಿರದ ಕಾರ್ಯದರ್ಶಿ ಕೆ.ಎಸ್. ಗುರುಸಿದ್ದಪ್ಪ ತಿಳಿಸಿದರು.

ಶಿರಡಿ ಸಾಯಿ ಮಂದಿರದಲ್ಲಿ ಇಡೀ ದಿನ ನಿರಂತರವಾಗಿ ವಿಷ್ಣು ಸಹಸ್ರನಾಮ ಪಠಿಸಲಾಯಿತು.

ಭಿಕ್ಷಾಟನೆಯಲ್ಲಿ ಶಿರಡಿಯ ಅರ್ಚಕರಾದ ಉಲ್ಲಾಸ್ ಪಂಡಿತ್, ಸಾಯಿಬಾಬಾ ಮಂದಿರದ ಕಾರ್ಯದರ್ಶಿ ಕೆ.ಎಸ್. ಗುರುಸಿದ್ದಪ್ಪ, ಟಿ.ಬಿ. ಹರೀಶ್, ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ, ಯೋಗ ಗುರು ಎಂ.ಕೆ. ನಾಗರಾಜರಾವ್, ಸಿದ್ದೇಶ್, ರಂಗನಾಥ್, ನಿಸರ್ಗ ರಮೇಶ್, ರೇಣುಕಪ್ಪ ಭಕ್ತಾದಿಗಳು ಭಾಗವಹಿಸಿದ್ದರು.

# ಜಾನಪದ ಕಲೆಗಳನ್ನು ಉಳಿಸಲು ಯುವಕರಿಗೆ ಕರೆ



ಕೋಲಾರ

"ಗಡಿನಾಡು ಭಾಗದಲ್ಲಿ ನಮ್ಮ ನಾಡಿನ ಅಪ್ಪಟ ಸಂಪ್ರದಾಯ ಹಾಗೂ ಜಾನಪದ ಕಲೆಯನ್ನು ಉಳಿಸಿ ಬೆಳೆಸುವುದು ನಮ್ಮೆಲ್ಲರ ಪ್ರಮುಖ ಕರ್ತವ್ಯವಾಗಿದೆ. ಯುವ ಜನತೆ ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವುದರಿಂದ ನಮ್ಮ ಪ್ರಾಚೀನ ಕಲೆಗಳು ಮುಂದಿನ ಪೀಳಿಗೆಗೆ ಉಳಿಯುತ್ತವೆ" ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ ತಿಳಿಸಿದರು.

ಸೀಗೆಪುರ ಕೋಡಿಹಳ್ಳಿ ಬಳಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಹಾಗೂ ಗಾನಸುಧಾ ಸಾಂಸ್ಕೃತಿಕಕ ಕಲಾ ಸಂಸ್ಥೆ ಜಯಮಂಗಲ ಇವರ ಸಹಯೋಗದಲ್ಲಿ ವಿಶೇಷ ಘಟಕ ಯೋಜನೆಯಡಿಯಲ್ಲಿ 'ಗಡಿನಾಡು ಸಾಂಸ್ಕೃತಿಕ ಕಲಾ ಸಂಭ್ರಮ' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕೋಡಿಹಳ್ಳಿ ಹಿರಿಯ ಮುಖಂಡ ಕೆಂಪಣ್ಣ ಮಾತನಾಡಿ "ಸಂಸ್ಕೃತಿಯು ನಮ್ಮ ಸಮಾಜದ ಜೀವನಾಡಿಯಾಗಿದ್ದು, ಗ್ರಾಮೀಣ ಪ್ರದೇಶದ ಪ್ರತಿಭೆಗಳಿಗೆ ಹಾಗೂ ಕಲಾ ತಂಡಗಳಿಗೆ ಸರ್ಕಾರದಿಂದ ಸೂಕ್ತ ಪ್ರೋತ್ಸಾಹ ನೀಡಲಾಗುತ್ತಿದೆ. ಗಡಿನಾಡು ಕಲಾ ಸಂಭ್ರಮದಂತಹ ವೇದಿಕೆಗಳು ಸ್ಥಳೀಯ ಕಲಾವಿದರ ಪ್ರತಿಭಾ ಅನಾವರಣಕ್ಕೆ ಉತ್ತಮ ಅವಕಾಶ ಕಲ್ಪಿಸುತ್ತವೆ" ಎಂದು ಅಭಿಪ್ರಾಯಪಟ್ಟರು. ತಾಳಕುಂಟೆಹಿರಿಯ ಮುಖಂಡ ವೆಂಕಟಸ್ವಾಮಿ ಮಾತನಾಡಿ, "ಕಲೆ ಮತ್ತು ಸಾಹಿತ್ಯವು ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಮತ್ತು ಐಕ್ಯತೆಯನ್ನು ಮೂಡಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತವೆ. ಇಂತಹ ಸಾರ್ಥಕ ಕಾರ್ಯಕ್ರಮಗಳು ಮಾಲೂರು ತಾಲ್ಲೂಕಿನಲ್ಲಿ ಆಯೋಜನೆಗೊಳ್ಳುತ್ತಿರುವುದು ಹೆಮ್ಮೆಯ ವಿಷಯ" ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವಿವಿಧ ಕಲಾ ತಂಡಗಳು ಹಾಗೂ ಕಲಾವಿದರು ತಮ್ಮ ಕಲೆಗಳನ್ನು ಪ್ರದರ್ಶಿಸಿದರು. ಗಾರುಡಿಗೊಂಬೆಯನ್ನು ಗಗನ್ ಕುಮಾರ್, ಸೋಮನ ಕುಣಿತವನ್ನು ಬಲರಾಮ್ ಮತ್ತು ಸಂಗಡಿಗರು, ಕೀಲುಕುದುರೆಯನ್ನು ಮಾದಯ್ಯ ಮತ್ತು ಸಂಗಡಿಗರು, ಹಾಗೂ ಡ್ರಮ್ಸ್ ವಾದನವನ್ನು ಮನೋಹರ ಮತ್ತು ಸಂಗಡಿಗರು ಪ್ರದರ್ಶಿಸಿ ನೆರೆದಿದ್ದ ಪ್ರೇಕ್ಷಕರನ್ನು ರಂಜಿಸಿದರು. ವೇದಿಕೆಯಲ್ಲಿ ಬಿ. ವೆಂಕಟಾಚಲಪತಿ - ಸುಗಮ ಸಂಗೀತ, ಅನುಷ ಮತ್ತು ತಂಡ-ಭರತನಾಟ್ಯ ಮೈತ್ರಿ ಮತ್ತು ತಂಡ - ಸಮೂಹ ನೃತ್ಯ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಪ್ರದೀಪ್, ಹೋರಾಟಗಾರ ಕೆ.ಮುನಿರಾಜು, ಸೇರಿದಂತೆ ಅನೇಕ ಗಣ್ಯರು ವಿಶೇಷ ಆಹ್ವಾನಿತರಾಗಿ, ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

# ಸಮೃದ್ಧಿ ಸೇವಾ ಟ್ರಸ್ಟ್ ಮಹಿಳಾ ಘಟಕ ಅಸ್ತಿತ್ವಕ್ಕೆ



ತುಮಕೂರು

ಸಮಾಜಸೇವಾ ಕಾರ್ಯಗಳಲ್ಲಿ ತೊಡಗಿಕೊಂಡಿರುವ ನಗರದ ಸಮೃದ್ಧಿ ಶಿಕ್ಷಣ ಟ್ರಸ್ಟ್‌ನ ಮಹಿಳಾ ಘಟಕ ಆರಂಭವಾಯಿತು.

ನಗರದ ಪ್ರೆಸ್ ಕ್ಲಬ್ ಸಭಾಂಗಣದಲ್ಲಿ ಟ್ರಸ್ಟ್ ಅಧ್ಯಕ್ಷ ಬೆಳಗುಂಬ ವೆಂಕಟೇಶ್ ಅಧ್ಯಕ್ಷತೆಯಲ್ಲಿ ನಡೆದ ಸಮಾರಂಭದಲ್ಲಿ ಮಹಿಳಾ ಘಟಕದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಟ್ರಸ್ಟ್ ಅಧ್ಯಕ್ಷ ಬೆಳಗುಂಬ ವೆಂಕಟೇಶ್ ಮಾತನಾಡಿ, ಟ್ರಸ್ಟ್‌ನ ಮಹಿಳಾ ಘಟಕವನ್ನು ಸಕ್ರಿಯಗೊಳಿಸಿ, ಮಹಿಳೆಯರ ಪರವಾದ ಸೇವಾಕಾರ್ಯಕ್ರಮಗಳಿಗೆ ಒತ್ತು ನೀಡಲಾಗುವುದು. ಮಹಿಳೆಯರನ್ನು ಸಾಮಾಜಿಕ, ಶೈಕ್ಷಣಿಕ ಹಾಗೂ ಸೇವಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಮಾಡುವ ಕುರಿತು ಸಲಹೆ ನೀಡಿದರು.

ಮಹಿಳಾ ಘಟಕದ ಮುಂದಿನ ಕಾರ್ಯ ಯೋಜನೆಗಳ ಬಗ್ಗೆ ಸದಸ್ಯರೊಂದಿಗೆ ಚರ್ಚಿಸಿ, ಆದ್ಯತಾ ಕಾರ್ಯಕ್ರಮಗಳನ್ನು ರೂಪಿಸುವ ಬಗ್ಗೆ ನಿರ್ಧಾರಗಳನ್ನು ಕೈಗೊಳ್ಳಲಾಯಿತು. ಮಹಿಳಾ ಘಟಕದ ಅಧ್ಯಕ್ಷರಾಗಿ ಹೆಗ್ಗೆರೆ ಸವಿತಾ, ಕಾರ್ಯದರ್ಶಿಯಾಗಿ ಮಮತಾ (ಊರುಕೆರೆ) ಹಾಗೂ ಸಂಘಟನಾ ಕಾರ್ಯದರ್ಶಿಯಾಗಿ ಸಿದ್ದಗಂಗಾ (ಪಾಲಸಂದ್ರ) ಅವರನ್ನು ಆಯ್ಕೆ ಮಾಡಲಾಯಿತು. ನೂತನ ಪದಾಧಿಕಾರಿಗಳನ್ನು ಟ್ರಸ್ಟ್‌ನ ಪದಾಧಿಕಾರಿಗಳು ಹಾಗೂ ಸದಸ್ಯರು ಅಭಿನಂದಿಸಿ, ಮಹಿಳಾ ಘಟಕದ ಮೂಲಕ ಸಮಾಜಮುಖಿ, ಶೈಕ್ಷಣಿಕ ಹಾಗೂ ಜನಪರ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ನಡೆಸಲು ಬೆಂಬಲ ನೀಡುವುದಾಗಿ ಹೇಳಿದರು.

ಸಭೆಯಲ್ಲಿ ಟ್ರಸ್ಟ್‌ನ ಉಪಾಧ್ಯಕ್ಷ ನಂಜುಂಡಯ್ಯ, ಕಾರ್ಯದರ್ಶಿ ಭೈರಸಂದ್ರ ಹರೀಶ್, ವಡ್ಡರಹಳ್ಳಿ ರಾಜು, ಹೆಬ್ಬಾಕ ಕುಮಾರ್, ಮುದೀಗೆರೆ ಪ್ರದೀಪ್, ದೊಡ್ಡರಿ ಕಾಂತರಾಜು, ನಾಗರಾಜು ನಂದಿಹಳ್ಳಿ ಭಾಗವಹಿಸಿದ್ದರು.

# ಕೊಪ್ಪಲ್ ಕುಟುಂಬದಿಂದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಣೆ



ತುಮಕೂರು

ಕೊಪ್ಪಲ್ ಸಿದ್ಧವೀರಯ್ಯ ಮತ್ತು ಪಾರ್ವತಮ್ಮನವರ ಸ್ಮರಣಾರ್ಥ ಪ್ರತಿಷ್ಠಾನದಿಂದ ಇದರ ಅಧ್ಯಕ್ಷ ಕೊಪ್ಪಲ್ ನಾಗರಾಜ್ ಅವರು ಸಿದ್ಧಗಂಗಾ ಮಠದ 42 ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಿಸಿದರು. ಇವರಲ್ಲಿ ಮೂವರು ಅಂಧ ವಿದ್ಯಾರ್ಥಿಗಳಿದ್ದಾರೆ.

ಸಿದ್ಧಗಂಗಾ ಮಠದಲ್ಲಿ ನಡೆದ ಸಮಾರಂಭದಲ್ಲಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ವಿತರಿಸಿ ಮಾತನಾಡಿದ ಶ್ರೀಮಠದ ಅಧ್ಯಕ್ಷರಾದ ಸಿದ್ಧಲಿಂಗ ಸ್ವಾಮೀಜಿಗಳು, ಕೊಪ್ಪಲ್ ಕುಟುಂಬದವರು ಹಲವಾರು ವರ್ಷಗಳಿಂದ ಶ್ರೀಮಠಕ್ಕೆ ವಿವಿಧ ರೀತಿಯ ಸೇವೆಗಳನ್ನು ಮಾಡಿಕೊಂಡು ಬರುತ್ತಿದ್ದಾರೆ. ಅವರ ಕುಟುಂಬದ ಕೊಪ್ಪಲ್ ನಾಗರಾಜ್ ಹಾಗೂ ಚಂದ್ರ ನಾಗರಾಜ್ ಅವರು ಕಳೆದ 12 ವರ್ಷಗಳಿಂದ ತಮ್ಮ ತಂದೆತಾಯಿ ಹೆಸರಿನಲ್ಲಿ ವಿದ್ಯಾರ್ಥಿಗಳಿಗೆ ನೆರವು ನೀಡುತ್ತಾ ಬಂದಿದ್ದಾರೆ. ಸೇವೆ ಎಂಬುದು ಅವರ ಕುಟುಂಬದ ಆದರ್ಶ ಗುಣವಾಗಿದೆ ಎಂದು ಶ್ಲಾಘಿಸಿದರು.

ಪ್ರಸ್ತುತ ಹೈಕೋರ್ಟ್‌ನ ಹಿರಿಯ ನ್ಯಾಯವಾದಿಗಳಾಗಿರುವ ನಿಟ್ಟೂರಿನ ಕುಮಾರಸ್ವಾಮಿಯವರು ಸಿದ್ಧಗಂಗಾ ಮಠದ ಹಳೆ ವಿದ್ಯಾರ್ಥಿ, 1963ರಿಂದ 66ರವರೆಗೆ ಸಿದ್ಧಗಂಗಾ ಮಠದ ಪ್ರೌಢಶಾಲೆಯಲ್ಲಿ ಓದಿದ್ದರು, ಅವರು ಆಗ ಎಸ್‌ಎಸ್‌ಎಲ್‌ಸಿಯಲ್ಲಿ ರಾಜ್ಯಕ್ಕೆ ಮೊದಲ ರ್‍ಯಾಂಕ್ ಪಡೆದಿದ್ದರು. ಅವರು ಈ ಸಮಾರಂಭದಲ್ಲಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಪ್ರೇರಣಾ ನುಡಿ ನುಡಿದರು. ಕುಮಾರಸ್ವಾಮಿಯವರು ಎರಡು ಪಿಹೆಚ್‌ಡಿ. ವಿವಿಧ ವಿಷಯಗಳಲ್ಲಿ 9 ಪದವಿಗಳನ್ನು ಗಳಿಸಿದ್ದಾರೆ. ಅಮೆರಿಕಾದ ವಾಷಿಂಗ್‌ಟನ್ ವಿಶ್ವವಿದ್ಯಾಲಯದಲ್ಲಿ ಹೆಚ್‌ಆರ್‌ಡಿ ವಿಷಯದಲ್ಲಿ ಹಾಗೂ ಬೆಂಗಳೂರು ವಿವಿಯಲ್ಲಿ ಕಾನೂನು ವಿಷಯದಲ್ಲಿ ಪಿಹೆಚ್‌ಡಿ ಪದವಿ ಪಡೆದಿದ್ದಾರೆ. ಡಾ.ಶಿವಕುಮಾರ ಸ್ವಾಮೀಜಿಗಳ ಪರಮಭಕ್ತರಾಗಿರುವ ಕುಮಾರಸ್ವಾಮಿಯವರು ಶಾಲೆಯಲ್ಲಿ ಓದುತ್ತಿದ್ದಾಗ ಸ್ವಾಮೀಜಿಯವರು ಕೊಟ್ಟಿದ್ದ ಎರಡು ಜೊತೆ ಸಮವಸ್ತ್ರವನ್ನೂ ಈಗಲೂ ಇಟ್ಟುಕೊಂಡಿರುವುದಾಗಿ ಹೇಳಿದರು.

ವಿಶ್ವದ ಎಲ್ಲೇ ಹೋದರೂ ನಾನು ಸಿದ್ಧಗಂಗಾ ಮಠದ ಪ್ರಾಡೆಕ್ಟ್ ಎಂದು ಅಭಿಮಾನದಿಂದ ಹೇಳುತ್ತೇನೆ. ಡಾ. ಶಿವಕುಮಾರಸ್ವಾಮಿಜಿಯವರು ನನಗೆ ಎಲ್ಲವೂ ಆಗಿ ನನ್ನ ಭವಿಷ್ಯ ಬೆಳಗಿದರು. ನನ್ನಂತಹ ಸಾಮಾನ್ಯ ಕುಟುಂಬದಲ್ಲಿ ಹುಟ್ಟಿದ ಹಲವಾರು ಜನರಿಗೆ ಸ್ವಾಮೀಜಿಗಳು ಅಕ್ಷರ, ಅನ್ನ, ಆಶ್ರಯ ನೀಡಿ ಬದುಕು ಕಟ್ಟಿಕೊಳ್ಳಲು ಮಾರ್ಗದರ್ಶನ ಮಾಡಿದರು ಎಂದು ಗೌರವದಿಂದ ಸ್ಮರಿಸಿದರು.

ಈ ವೇಳೆ ಕೊಪ್ಪಲ್ ನಾಗರಾಜ್ ಮಾತನಾಡಿ, ಕುಮಾರ ಸ್ವಾಮಿಯವರು ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ದೊಡ್ಡ ವಿದ್ವಾಂಸರು, ಎಲ್.ಜಿ. ಹಾವನೂರು ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲರಾಗಿ, ಹೆಸರಾಂತ ಕೈಗಾರಿಕಾ ಸಂಸ್ಥೆಗಳಲ್ಲಿ ಮಾನವಸಂಪನ್ಮೂಲ ವಿಭಾದಲ್ಲಿ ಸೇವೆ ಸಲ್ಲಿಸಿರುವ 78 ವರ್ಷ ವಯಸ್ಸಿನ ಕುಮಾರಸ್ವಾಮಿಯವರು ಸದ್ಯ ಹೈಕೋರ್ಟ್ ನ್ಯಾಯವಾದಿಯಾಗಿದ್ದರೆ ಎಂದು ಹೇಳಿದರು.

## ಎಸ್‌ಐಆರ್‌ನಲ್ಲಿ ಪ್ರತಿಯೊಬ್ಬರು ಭಾಗವಹಿಸಿ: ಶಾಂತಕುಮಾರ್

ದೇವನಹಳ್ಳಿ

ಪ್ರತಿಯೊಬ್ಬ ಮತದಾರರು ಎಸ್‌ಐಆರ್ ನಲ್ಲಿ ಸಕ್ರಿಯವಾಗಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಪ್ರಾಧಿಕಾರದ ಅಧ್ಯಕ್ಷ ಶಾಂತಕುಮಾರ್ ಹೇಳಿದರು.

ನಗರದ ಹೊರವಲಯದಲ್ಲಿ ಸ್ಕೈ ಬಲೂನ್ ಹಾರಿಬಿಡುವ ಮೂಲಕ ಎಸ್ ಐಆರ್ ಕುರಿತು ಜಾಗೃತಿ ಮೂಡಿಸಿ ಮಾತನಾಡಿ, ಅರ್ಹ ಮತದಾರರ ಪಟ್ಟಿಯಿಂದ ಹೊರಗೂಳಿಯಬಾರ ದು, ಈಗಾಗಲೇ ಎಲ್ಲಾ ಅರ್ಹ ಮತದಾರರಿಗೆ ಬಿಎಲ್‌ಒಗಳು ಎನ್ಯುಮರೇಷನ್ ಅರ್ಜಿಗಳನ್ನು ಕೊಟ್ಟಿದ್ದು, ಕೆಲವರು ಅಗತ್ಯ ಮಾಹಿತಿಗಳೊಂದಿಗೆ ಹಿಂದಿರುಗಿಸಿದ್ದಾರೆ. ಕೆಲವರು ಹಿಂದಿರುಗಿಸಿಲ್ಲ ಹಾಗಾಗಿ ಮತದಾರರು ಕೊನೆಯ ದಿನಾಂಕದವರೆಗೆ ಕಾಯಿದೆ ಸಕಾಲಕ್ಕೆ ಅರ್ಜಿಗಳನ್ನು ವಾಪಸ್ಸು ನೀಡಬೇಕು ಮತದಾರರ ಪಟ್ಟಿ ಹರೀಶ್ ಕರನೆಗೆ ಎಲ್ಲರೂ ಸಹನೆಯಿಂದ ಸಹಕರಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಬೈಯಪ್ಪ ಸದಸ್ಯರಾದ ಪ್ರಶಾಂತ್ ಕುಮಾರ್, ಕನ್ನಮಂಗಲ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ ಆರ್ ನಾಗೇಶ್, ಮುಖಂಡ ಎಸ್ ನಾಗೇಗೌಡ, ವೆಂಕಟೇಶ್, ಜಿಲ್ಲಾ ಪಂಚಾಯಿತಿ ಉಪವಿಭಾಗದ ಅಭಿಯಂತಕರ ಸುನಿಲ್, ಕ್ಷೇತ್ರ ಶಿಕ್ಷಣಾಧಿಕಾರಿ ಲಲಿತಮ್ಮ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಕವಿತಾ ಹಾಜರಿದ್ದರು.

## ಚೆನ್ನಮ್ಮನವರಿಗೆ ನುಡಿ ನಮನ

ದೇವನಹಳ್ಳಿ

ನಗರದ ಜೆಡಿಎಸ್ ಕಚೇರಿಯಲ್ಲಿ ದಿವಂಗತ ಚೆನ್ನಮ್ಮ ಅವರ ನುಡಿ ನಮನ ಕಾರ್ಯಕ್ರಮವನ್ನು ಸೋಮವಾರ ಜೆಡಿಎಸ್ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಮಾಜಿ ಶಾಸಕ ನಿಸರ್ಗ ನಾರಾಯಣಸ್ವಾಮಿ ಮಾತನಾಡಿ ಜೆಡಿಎಸ್ ವರಿಷ್ಠ ಹಾಗೂ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡರ ಪತ್ನಿ ಚೆನ್ನಮ್ಮ ಅವರು ಸಮಾಜಮುಖಿ ಮಾನವೀಯ ಮೌಲ್ಯಗಳು ಮತ್ತು ಸಾರ್ವಜನಿಕ ಸೇವಾ ಮೂಲಕ ಜನರ ಮನಸ್ಸಿನಲ್ಲಿ ಅಗ್ರಸ್ಥಾನ ಪಡೆದಿದ್ದಾರೆ ಎಂದು ಹೇಳಿದರು.

ದೇವೇಗೌಡರ ರಾಜಕೀಯ ಜೀವನದ ಯಶಸ್ಸಿನ ಹಿಂದೆ ಚೆನ್ನಮ್ಮನವರ ಪ್ರೋತ್ಸಾಹ ಮತ್ತು ಉತ್ತೇಜನ ತ್ಯಾಗದ ಮಹತ್ವದ ಪಾತ್ರ ಇತ್ತು. ಅವರ ಆದರ್ಶಮಯ ಜೀವನ ಹಾಗೂ ಮೌಲ್ಯಗಳು ಇಂದಿನ ಸಮಾಜಕ್ಕೆ ಅತ್ಯಂತ ಪ್ರೇರಣೆ. ಇಂತಹ ಮಹಾನ್ ತಾಯಿಯ ನೆನಪು ಚಿರಕಾಲ ಜನರ ಮನಸ್ಸಿನಲ್ಲಿ ಅಚ್ಚಳಿಯದೆ ಶಾಶ್ವತವಾಗಿ ಉಳಿಯಬೇಕು ಎಂದರು. ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷ ಕೊಡಗುರ್ಕಿ ಮಂಜುನಾಥ್ ಕೆ.ವಿ. ಮಾತನಾಡಿ ಉತ್ತಮ ಸದ್ಗುಣಗಳಿಂದ ಜನಮಾನ್ಯ ಅಚ್ಚಳಿ ಇದೆ ಉಳಿಯುವವರು ಚೆನ್ನಮ್ಮನವರು ಇದಕ್ಕೆ ಅವರ ಆದರ್ಶ ಜೀವನವೇ ಉದಾಹರಣೆ ಎಂದು ಚೆನ್ನಮ್ಮನ ಅವರನ್ನು ನಿದರ್ಶನವಾಗಿ ತಿಳಿಸಿದರು.

ಇದೇ ವೇಳೆ ಪಕ್ಷದ ಮುಖಂಡರಾದ ತಾಲೂಕು ಅಧ್ಯಕ್ಷ ಸಾದಳ್ಳಿ ಮಹೇಶ್, ಕಾರ್ಯಧ್ಯಕ್ಷ ಜೀವಿ ರವೀಂದ್ರ, ವೆಂಕಟೇಶ್ ಮೂರ್ತಿ, ಪುರಸಭಾ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷಕೊಡಿ ಮಂಚೇನಹಳ್ಳಿ ನಾಗೇಶ್, ಲಕ್ಷ್ಮೀನಾರಾಯಣ (ಲಚ್ಚಿ), ದಂಡಿಗನಹಳ್ಳಿ ಸುನಿಲ್, ಮಹಿಳಾ ಘಟಕದ ಅಧ್ಯಕ್ಷ ಮೀನಾಕ್ಷಿ ಮುನ್ ಕೃಷ್ಣಪ್ಪ, ಮಹಿಳಾ ಮತ್ತು ಪುರುಷ ಪದಾಧಿಕಾರಿಗಳು,ಇನ್ನು ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಜಲೋತ್ಸವ ಯೋಜನೆ ಅಡಿಯಲ್ಲಿ ಅಳವಡಿಸಿರುವ ನಲ್ಲಿಗಳಲ್ಲಿ ನೀರೇ ಬರುತ್ತಿಲ್ಲ.!



ಚಿಂತಾಮಣಿ

ತಾಲೂಕಿನ ದೊಡ್ಡ ಗಂಜೂರು ಗ್ರಾಮದಲ್ಲಿ ಸುಮಾರು ಎರಡು ವರ್ಷಗಳ ಹಿಂದೆ ಜಲೋತ್ಸವ (ಮನೆ ಮನೆಗೆ ನಲ್ಲಿ) ಯೋಜನೆ ಅಡಿಯಲ್ಲಿ ನಲ್ಲಿಗಳನ್ನು ಅಳವಡಿಸಲಾಗಿದೆ.

ಆದರೆ ಅಂದಿನಿಂದ ಇಂದಿನವರೆಗೂ ಸಹ ಈ ನಲ್ಲಿಗಳಲ್ಲಿ ನೀರೇ ಬಂದಿಲ್ಲ ಎಂಬುದಾಗಿ ಗ್ರಾಮಸ್ಥರು ತಮ್ಮ ಅಳಲು ತೋಡಿಕೊಂಡಿದ್ದಾರೆ.

ಸಂಬಂಧ ಪಟ್ಟವರಿಗೆ ಫೋನ್ ಕರೆ ಮಾಡಿದರೆ ಕರೆಯನ್ನು ಸ್ವೀಕರಿಸದೆ ಉದಾಸೀನ ತೋರುತ್ತಿದ್ದಾರೆ. ಸದರಿ ಗ್ರಾಮವು ದೊಡ್ಡ ಗ್ರಾಮವಾಗಿದ್ದು, ಇಲ್ಲಿ ಕುಡಿಯುವ ನೀರಿಗೆ ಬಹಳ ತೊಂದರೆಯಾಗುತ್ತಿದೆ ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಈಗಲಾದರೂ ಈ ಬಗ್ಗೆ ಗಮನಹರಿಸಿ ಗ್ರಾಮದ ಜನತೆಗೆ ಕುಡಿಯುವ ನೀರಿನ ಅನುಕೂಲ ಕಲ್ಪಿಸಿ ಕೊಡಬೇಕೆಂದು ಗ್ರಾಮಸ್ಥರು ಆಗ್ರಸಿದ್ದಾರೆ.

ಭಾರತ ಸಾರಥಿ
30/07/2026
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಚಿರತೆ ಆತಂಕ: ಗ್ರಾಮಸ್ಥರ ದಿನನಿತ್ಯದ ಚಟುವಟಿಕೆಗೆ ಪರದಾಟ

ಬಂಗಾರಪೇಟೆ

ಕಸಬಾ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿ ಚಿರತೆ ಸಂಚಾರದ ಆತಂಕ ಹೆಚ್ಚುತ್ತಿದ್ದು, ಸ್ಥಳೀಯರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಮಾಗೊಂದಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಾರೋಹಳ್ಳಿ ಹಾಗೂ ವರದಾಪುರ ಕೆರೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆ ಕಾಣಿಸಿಕೊಂಡಿದೆ ಎನ್ನುವ ಮಾಹಿತಿ ಹರಡಿದ್ದು, ಗ್ರಾಮಸ್ಥರು ಆತಂಕಗೊಂಡಿದ್ದಾರೆ.

ಕೆಲವು ದಿನಗಳ ಹಿಂದೆ ಹಾರೋಹಳ್ಳಿ ಗ್ರಾಮದ ಸಮೀಪ ಚಿರತೆ ಕಾಣಿಸಿಕೊಂಡಿರುವ ಬಗ್ಗೆ ಗ್ರಾಮಸ್ಥರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದರು. ಮಾಹಿತಿ ಪಡೆದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಪಟಾಕಿ ಸಿಡಿಸುವ ಮೂಲಕ ಚಿರತೆಯನ್ನು ಅರಣ್ಯದ ಕಡೆಗೆ ಓಡಿಸುವ ಪ್ರಯತ್ನ ಮಾಡಿದ್ದರು. ಆದರೆ ಈ ಕ್ರಮದ ಬಳಿಕವೂ ಚಿರತೆಯ ಚಲನವಲನ ಸಂಪೂರ್ಣವಾಗಿ ನಿಂತಿಲ್ಲ ಎಂಬುದು ಗ್ರಾಮಸ್ಥರ ಆತಂಕಕ್ಕೆ ಕಾರಣವಾಗಿದೆ.

ಮಂಗಳವಾರ ಬೆಳಿಗ್ಗೆ ವರದಾಪುರ ಕೆರೆ ಸಮೀಪ ಮತ್ತೆ ಚಿರತೆ ಪ್ರತ್ಯಕ್ಷವಾಗಿದೆ ಎಂಬ ಸುದ್ದಿ ಹರಡಿದೆ. ಚಿರತೆಯನ್ನು ಕಂಡಿದ್ದಾಗಿ ಹೇಳಲಾಗಿರುವ ಗ್ರಾಮಸ್ಥರು ಭಯದಿಂದ ಸ್ಥಳದಿಂದ ಓಡಿ ಬಂದಿದ್ದಾರೆ ಎನ್ನಲಾಗಿದೆ. ಈ ಘಟನೆ ಗ್ರಾಮಸ್ಥರಲ್ಲಿ ಮತ್ತಷ್ಟು ಆತಂಕವನ್ನುಂಟು ಮಾಡಿದೆ.



ಇದೇ ವ್ಯಾಪ್ತಿಯಲ್ಲಿ ಇತ್ತೀಚೆಗೆ ಜಿಂಕೆಯೊಂದನ್ನು ಚಿರತೆ ಕಚ್ಚಿ ಸಾಯಿಸಿರುವ ಘಟನೆ ಬೆಳಕಿಗೆ ಬಂದಿದ್ದು, ಈ ಭಾಗದಲ್ಲಿ ಚಿರತೆಯ ನಿರಂತರ ಸಂಚಾರವಿರುವ ಸಾಧ್ಯತೆಯನ್ನು ಬಲಪಡಿಸಿದೆ. ಇದರಿಂದ ರೈತರು ತಮ್ಮ ಜಮೀನುಗಳಿಗೆ ತೆರಳಲು ಹಾಗೂ ಜಾನುವಾರುಗಳನ್ನು ಮೇಯಿಸಲು ಹಿಂದೇಟು ಹಾಕುವಂತಾಗಿದೆ.

ಸಂಜೆ ಮತ್ತು ಮುಂಜಾನೆ ವೇಳೆಯಲ್ಲಿ ಹೊರಗೆ ಓಡಾಡಲು ಗ್ರಾಮಸ್ಥರು ಹೆದರುತ್ತಿದ್ದಾರೆ.

ಗ್ರಾಮಸ್ಥರು ತಕ್ಷಣವೇ ಅರಣ್ಯ ಇಲಾಖೆ ಬೋನು ಅಳವಡಿಸಿ ಚಿರತೆಯನ್ನು ಸೆರೆಹಿಡಿಯಬೇಕು, ಅರಣ್ಯ ಸಿಬ್ಬಂದಿಯಿಂದ ನಿರಂತರ ಗಸ್ತು ವ್ಯವಸ್ಥೆ ಮಾಡಬೇಕು ಹಾಗೂ ಸಾರ್ವಜನಿಕರಿಗೆ ಸುರಕ್ಷತಾ ಕ್ರಮಗಳ ಕುರಿತು ಜಾಗೃತಿ ಮೂಡಿಸಬೇಕು ಎಂದು ಒತ್ತಾಯಿಸಿದ್ದಾರೆ.

ಚಿರತೆಯ ಚಲನವಲನದ ಮೇಲೆ ನಿಗಾ ವಹಿಸಿ, ಜನರ ಜೀವ ಮತ್ತು ಆಸ್ತಿಪಾಸ್ತಿಗೆ ಯಾವುದೇ ಅಪಾಯವಾಗದಂತೆ ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಸ್ಥಳೀಯರು ಆಗ್ರಹಿಸಿದ್ದಾರೆ.

"ಕಳೆದ ಕೆಲವು ದಿನಗಳಿಂದ ನಮ್ಮ ಗ್ರಾಮದ ಸುತ್ತಮುತ್ತ ಚಿರತೆ ಕಾಣಿಸಿಕೊಳ್ಳುತ್ತಿರುವುದು ಗ್ರಾಮಸ್ಥರಲ್ಲಿ ಭಯದ ವಾತಾವರಣ ಸೃಷ್ಟಿಸಿದೆ. ಬೆಳಗ್ಗೆ ಮತ್ತು ಸಂಜೆ ವೇಳೆಯಲ್ಲಿ ಹೊಲಗಳಿಗೆ ಹೋಗಲು ಸಹ ಆತಂಕವಾಗುತ್ತಿದೆ. ಮಕ್ಕಳು ಶಾಲೆಗೆ ಹೋಗುವಾಗ ಮತ್ತು ಮಹಿಳೆಯರು ಒಬ್ಬರೇ ಸಂಚರಿಸುವಾಗ ಭಯಪಡುತ್ತಿದ್ದಾರೆ. ಇತ್ತೀಚೆಗೆ ಜಿಂಕೆಯನ್ನು ಚಿರತೆ ಬೇಟೆಯಾಡಿರುವುದು ನಮ್ಮ ಆತಂಕವನ್ನು ಇನ್ನಷ್ಟು ಹೆಚ್ಚಿಸಿದೆ. ಅರಣ್ಯ ಇಲಾಖೆ ಕೇವಲ ಪಟಾಕಿ ಸಿಡಿಸಿ ಹೋಗುವುದಕ್ಕಿಂತ ಶಾಶ್ವತ ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕು. ಕೂಡಲೇ ಬೋನು ಅಳವಡಿಸಿ ಚಿರತೆಯನ್ನು ಸೆರೆಹಿಡಿದು, ಗ್ರಾಮದಲ್ಲಿ ನಿರಂತರ ಗಸ್ತು ನಡೆಸಿ ಸಾರ್ವಜನಿಕರ ಸುರಕ್ಷತೆಯನ್ನು ಖಚಿತಪಡಿಸಬೇಕು."

ಚಂಗಾರೆಡ್ಡಿ, ಮಾಜಿ ಗ್ರಾಪಂ ಸದಸ್ಯ,
ಹಾರೋಹಳ್ಳಿ, ಬಂಗಾರಪೇಟೆ.

ಚಿರತೆ ಕಾಣಿಸಿಕೊಂಡಿರುವ ಬಗ್ಗೆ ಮಾಹಿತಿ ದೊರೆತ ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದೇವೆ. ಮುಂಜಾಗ್ರತೆಯಾಗಿ ಪಟಾಕಿ ಸಿಡಿಸಿ ಓಡಿಸುವ ಪ್ರಯತ್ನಿಸಲಾಗಿದೆ. ಚಿರತೆಯ ಚಲನವಲನದ ಮೇಲೆ ಇಲಾಖೆ ನಿರಂತರ ನಿಗಾ ವಹಿಸಿದೆ. ಸಾರ್ವಜನಿಕರ ಸುರಕ್ಷತೆಗೆ ಇಲಾಖೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುತ್ತಿದೆ.

ಸಿಬ್ಬಂದಿ, ಅರಣ್ಯ ಇಲಾಖೆ,
ಬಂಗಾರಪೇಟೆ.

# 'ಸಹಾಯ ಕೇಂದ್ರ ತೆರೆದು ಸಾರ್ವಜನಿಕರಿಗೆ ಅರಿವು ಮೂಡಿಸಿ'



ತುಮಕೂರು

ನಗರದ 17ನೇ ವಾರ್ಡ್ ವ್ಯಾಪ್ತಿಯ ರೈಲ್ವೆ ನಿಲ್ದಾಣದ ಸಮೀಪದಲ್ಲಿರುವ ಶಾಂತಿನಗರದ ಅಬಿಬಿಯಾ ಮಸೀದಿ ಬಳಿ ಜಿಲ್ಲಾ ಕಾಂಗ್ರೆಸ್ ಹಾಗೂ ಹಾಲಪ್ಪ ಪ್ರತಿಷ್ಠಾನದ ವತಿಯಿಂದ ವಿಶೇಷ ಸಮಗ್ರ ಮತಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕುರಿತು ಜಾಗೃತಿ ಆಂದೋಲನ ನಡೆಸುವ ಮೂಲಕ ಸಹಾಯ ಕೇಂದ್ರ ತೆರೆದು ಸಾರ್ವಜನಿಕರಿಗೆ ಅರಿವು ಮೂಡಿಸಿ ಸೇವೆ ಒದಗಿಸಲಾಯಿತು.

17ನೇ ವಾರ್ಡ್‌ನಲ್ಲಿ ಎಸ್‌ಐಆರ್ ಪ್ರಕ್ರಿಯೆ ಕುರಿತ ಆಂದೋಲನದ ವೇಳೆ ಮಾತನಾಡಿದ ಮಾಜಿ ಮಹಾಪೌರ ಗೀತಾ ರುದ್ರೇಶ್ ಅವರು, ರಾಜ್ಯದಲ್ಲಿ ಸರ್ಕಾರ ಹಾಗೂ ಸಂಘ ಸಂಸ್ಥೆಗಳ ಸಹಕಾರದಿಂದ ಎಸ್‌ಐಆರ್ ಪ್ರಕ್ರಿಕೆಯ ಚುರುಕಿನಿಂದ ನಡೆಯುತ್ತಿದೆ. ಹಾಗೆಯೇ ನಗರದಲ್ಲೂ ಸಹ ಜಿಲ್ಲಾ ಕಾಂಗ್ರೆಸ್ ಮತ್ತು ಹಾಲಪ್ಪ ಪ್ರತಿಷ್ಠಾನದ ವತಿಯಿಂದ ಪ್ರತಿದಿನ ವಿವಿಧ ವಾರ್ಡ್‌ಗಳನ್ನು ಒಗ್ಗೂಡಿಸಿ ಮತದಾರರಿಗೆ ಗಣತಿ ನಮೂನೆ ತುಂಬುವ ಸೇವೆ ಒದಗಿಸಲಾಗುತ್ತಿದೆ ಎಂದರು.

ನಗರದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಚಂದ್ರ ಶೇಖರಗೌಡ, ಹಾಲಪ್ಪ ಪ್ರತಿಷ್ಠಾನದ ಮುರುಳೀಧರ ಹಾಲಪ್ಪ, ಮಾಜಿ ಶಾಸಕ ಎಸ್. ಷಫಿ ಅಹಮದ್, ಡಾ. ರಫೀಕ್ ಅಹಮದ್, ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯ ಅಧ್ಯಕ್ಷ ಇಕ್ಬಾಲ್ ಅಹಮದ್ ರವರ ನೇತೃತ್ವದಲ್ಲಿ ಎಸ್‌ಐಆರ್ ಕುರಿತ ಜಾಗೃತಿ ಆಂದೋಲನ ನಡೆಯುತ್ತಿದೆ. ನಗರದ ಅರ್ಹ ಮತದಾರರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಎಸ್.ಐ.ಆರ್. ಎಂಬುದು ಒಂದು ಪ್ರಮುಖ ಕಾರ್ಯಕ್ರಮ ನಮ್ಮ ಸಂವಿಧಾನ ಬದ್ದ ಹಕ್ಕನ್ನು ಉಳಿಸಿಕೊಳ್ಳುವ ನಿಟ್ಟಿನಲ್ಲಿ ಬಹಳ ಮಹತ್ವ ಪಡೆದಿದೆ. ನಮ್ಮ ವಾರ್ಡ್ ಮತದಾರರಿಂದ ಒಳ್ಳೆಯ ಸ್ಪಂದನೆ ವ್ಯಕ್ತವಾಗಿದೆ. ಚುನಾವಣಾ ಆಯೋಗದಿಂದ ನೇಮಕವಾಗಿರುವ ಬಿಎಲ್‌ಓಗಳು ಹಾಗೂ ರಾಜಕೀಯ ಪಕ್ಷಗಳ ವತಿಯಿಂದ ನೇಮಕವಾಗಿರುವ ಬಿಎಲ್‌ಎ–02 ಗಳು ಸಕ್ರಿಯರಾಗಿ ಕೆಲಸ ಮಾಡುತ್ತಿದ್ದಾರೆ. ಎಸ್.ಐ.ಆರ್. ಪ್ರಕ್ರಿಯೆಗೆ ಆಗಸ್ಟ್ 8 ಕೊನೆಯ ದಿನವಾಗಿದ್ದು, ಮತದಾರರು ಅಲ್ಲಿಯವರೆಗೆ ಕಾಯದೆ, ಆದಷ್ಟು ಶೀಘ್ರವಾಗಿ ತಮ್ಮ ಎನ್ಮರೇಷನ್ ಫಾರಂ ತುಂಬಿ ಬಿಎಲ್‌ಓ ಗಳಿಗೆ ನೀಡಿ, ಸ್ವೀಕೃತಿ ಪತ್ರ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ನಂತರ ಯಾವುದೇ ಕುಟುಂಬ ಹಾಗೂ ವ್ಯಕ್ತಿ ಮತದಾರರ ಪಟ್ಟಿಯಿಂದ ಹೊರಗೆ ಉಳಿದರೆ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಗಳು ಸೇರಿದಂತೆ ಸರ್ಕಾರದ ವತಿಯಿಂದ ಸಿಗುವ ಆರ್ಥಿಕ, ಶೈಕ್ಷಣಿಕ ಸವಲತ್ತುಗಳಿಂದಲೂ ವಂಚಿತರಾಗಲಿದ್ದೀರಿ, ಹಾಗಾಗಿ ಎಲ್ಲರೂ ಎಚ್ಚೆತ್ತು ಎಸ್.ಐ.ಆರ್‌ನಲ್ಲಿ ಪಾಲ್ಗೊಳ್ಳುವಂತೆ ಕೋರಿದರು.

ಮಾಜಿ ಶಾಸಕ ಎಸ್. ಷಫಿಅಹಮದ್, ಡಾ. ರಫೀಕ್ ಅಹಮದ್, ಶಿವಾಜಿ, ರುದ್ರೇಶ್, ಗೀತಮ್ಮ ಪಾಲ್ಗೊಂಡಿದ್ದರು.

# 'ಕಸ ಮುಕ್ತ ನಗರವನ್ನಾಗಿಸಲು ಪುರಸಭೆಯೊಂದಿಗೆ ಕೈಜೋಡಿಸಿ ಸಹಕರಿಸಿ'

ದೇವನಹಳ್ಳಿ

ಪುರಸಭೆ ವ್ಯಾಪ್ತಿಯಲ್ಲಿರುವ ಕಸದ ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ಸ್ವಚ್ಛಗೊಳಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದ್ದು ಸಾರ್ವಜನಿಕರು ಪುರಸಬೆಒಂದಿಗೆ ಕೈಜೋಡಿಸಿ ಕಸಮುಕ್ತ ನಗವನ್ನಾಗಿಸಲು ಸಹಕರಿಸಿ ಎಂದು ಮೂಡಿಸಲಾಗುತ್ತಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಎ.ಶಿವಮೂರ್ತಿ ತಿಳಿಸಿದರು.

ದೇವನಹಳ್ಳಿ ಪಟ್ಟಣದ ದೊಡ್ಡಬಳ್ಳಾಪುರ ರಸ್ತೆಯ ಪರ್ವತಪುರದಲ್ಲಿ ಸಾರ್ವಜನಿಕರು ರಾಜಕಾಲುವೆ ಪಕ್ಕದಲ್ಲೇ ಕಸ ಹಾಕಿ ಬ್ಲಾಕ್ ಸ್ಪಾಟ್ ಆಗಿಮಾರ್ಪಡಿಸಿದ್ದರು ಅದನ್ನೆಲ್ಲ ತೆರವುಗೊಳಿಸಿ ಕಸ ಹಾಕದಂತೆ ಕೊಡೆಬರಗಳನ್ನು ಬರೆಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗಿದೆ. ಕಸವನ್ನು ನಾಲ್ಕು ವಿದಗಳಾಗಿ ವಿಂಗಡಿಸಿ ಪುರಸಭೆ ಕಸ ಸಂಗ್ರಹಣೆ ವಾಹನ ಬಂದಾಗ ನೀಡಿ ಸಹಕರಿಸಿ ಎಂದರು.

ಇದೆ ವೇಳೆ ಪೌರಸೇವಾನೌಕರರ ಸಂಘದ ಅಧ್ಯಕ್ಷ ಮಂಜಪ್ಪ ಹಿರಿಯ ಆರೋಗ್ಯ ನಿರೀಕ್ಷಕಿ ಶ್ರೀದೇವಿ, ಪ್ರಥಮ ದರ್ಜೆ ಸಹಾಯಕ ಶ್ರೀನಿವಾಸ್, ಪುರಸಸಭೆ ಸಿಬ್ಬಂದಿ ಗೋಪಾಲ್ ಪೌರಕಾರ್ಮಿಕರು ನೀರಿಗಂಟಿಗಳು ಇದ್ದರು.

# ರೇಷ್ಮೆ ಕೃಷಿ ಕುರಿತು ಗುಂಪು ಚರ್ಚೆ: ರೈತರಿಗೆ ರೇಷ್ಮೆ ಕೃಷಿ ಅಳವಡಿಸಿಕೊಳ್ಳಲು ಕರೆ

ತುಮಕೂರು

ತಾಲ್ಲೂಕಿನ ಚಿನಗ ಗ್ರಾಮದಲ್ಲಿ ರೈತರಿಗಾಗಿ ರೇಷ್ಮೆ ಕೃಷಿ ಹಾಗೂ ರೇಷ್ಮೆ ಹುಳು ಸಾಕಾಣಿಕೆ ಕುರಿತು ಗುಂಪು ಚರ್ಚೆ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಜಿ.ಪಂ. ತುಮಕೂರಿನ ರೇಷ್ಮೆ ಇಲಾಖೆಯ ಉಪ ನಿರ್ದೇಶಕರು ಲಕ್ಷ್ಮಿನರಸಯ್ಯ ಟಿ. ರವರು ರೈತರಿಗೆ ರೇಷ್ಮೆ ಕೃಷಿಯ ಮಹತ್ವ, ಹಿಪ್ಪುನೇರಳೆ ಬೆಳೆ ಬೆಳೆಯುವ ವೈಜ್ಞಾನಿಕ ವಿಧಾನ, ರೇಷ್ಮೆ ಹುಳು ಸಾಕಾಣಿಕೆಯ ಆಧುನಿಕ ತಂತ್ರಜ್ಞಾನ, ಗುಣಮಟ್ಟದ ಕೋಕೂನ್ ಉತ್ಪಾದನೆ ಹಾಗೂ ರೇಷ್ಮೆ ಕೃಷಿಯಿಂದ ಹೆಚ್ಚಿನ ಆದಾಯ ಗಳಿಸುವ ಸಾಧ್ಯತೆಗಳ ಕುರಿತು ಸಮಗ್ರ ಮಾಹಿತಿ ನೀಡಿದರು. ಈಗಾಗಲೇ ರೇಷ್ಮೆ ಕೃಷಿಯಲ್ಲಿ ತೊಡಗಿಸಿಕೊಳ್ಳದ ರೈತರು ಸಹ ಇಲಾಖೆಯ ವಿವಿಧ ಯೋಜನೆಗಳ ಪ್ರಯೋಜನ ಪಡೆದು ರೇಷ್ಮೆ ಕೃಷಿಯನ್ನು ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

ಸರ್ಕಾರದಿಂದ ರೇಷ್ಮೆ ಕೃಷಿಗೆ ಲಭ್ಯವಿರುವ ವಿವಿಧ ಸಹಾಯಧನಗಳ ಕುರಿತು ವಿವರಿಸಿದ ಅವರು, *ವಿಬಿಜಿ–ರಾಮ್‌ಜಿ ಯೋಜನೆಯಡಿ ಹಿಪ್ಪುನೇರಳೆ ತೋಟ ಅಭಿವೃದ್ಧಿಗೆ ಕೊಡುವ ಸಹಾಯಧನ ಬಗ್ಗೆ ಮಾಹಿತಿ ನೀಡಿದರು, ಹನಿ ನೀರಾವರಿ (ಡ್ರಿಪ್ ಇರಿಗೇಷನ್) ವ್ಯವಸ್ಥೆ ಅಳವಡಿಸಿಕೊಳ್ಳಲು ಶೇ.90ರಷ್ಟು ಸಹಾಯಧನ, ರೇಷ್ಮೆ ಹುಳು ಸಾಕಾಣಿಕೆ ಮನೆ ನಿರ್ಮಾಣಕ್ಕೆ 225 ಚದರ ಅಡಿ ವಿಸ್ತೀರ್ಣದ ಮನೆಗೆ ಸಾಮಾನ್ಯ ವರ್ಗದ ರೈತರಿಗೆ 67,500 ಹಾಗೂ ಎಸ್‌ಸಿ/ಎಸ್‌ಟಿ ರೈತರಿಗೆ 81,000, 600 ಚದರ ಅಡಿ ಮನೆಗೆ ಕ್ರಮವಾಗಿ 2.4375 ಲಕ್ಷ ಹಾಗೂ 2.925 ಲಕ್ಷ ಮತ್ತು 1000 ಚದರ ಅಡಿ ಮನೆಗೆ ಕ್ರಮವಾಗಿ 3.375 ಲಕ್ಷ ಹಾಗೂ 4.05 ಲಕ್ಷ ಸಹಾಯಧನ ಸರ್ಕಾರದಿಂದ ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

100 ಮೊಟ್ಟೆಗಳಿಗೆ 1,000 ಚಾಕಿ ಪ್ರೋತ್ಸಾಹಧನ, ಬೈವೋಲ್ಟೈನ್ ಗೂಡುಗಳಿಗೆ ಪ್ರತಿ ಕೆ.ಜಿ.ಗೆ 30 ಪ್ರೋತ್ಸಾಹಧನ ಹಾಗೂ ರೇಷ್ಮೆ ಇಲಾಖೆಯಿಂದ ಸೋಂಕು ನಿವಾರಕ ಔಷಧಿಯನ್ನು ಉಚಿತವಾಗಿ ವಿತರಿಸಲಾಗುತ್ತಿದೆ ಎಂದು ತಿಳಿಸಿದರು.

ಸರ್ಕಾರದಿಂದ ಸಲಕರಣೆಗಳ ಖರೀದಿಗೆ ಸಾಮಾನ್ಯ 56250 ಮತ್ತು ಛಿ/ಣ ಗಳಿಗೆ 67500 ರೂಗಳ ಸಹಯಾಧನ ರೈತರಿಗೆ ನೀಡಲಾಗುತ್ತಿದೆ.ಒಂದು ಎಕರೆ ಹಿಪ್ಪುನೇರಳೆ ತೋಟದಲ್ಲಿ ವರ್ಷಕ್ಕೆ ಸುಮಾರು 200 ರಿಂದ 250 ಮೊಟ್ಟೆಗಳ* ರೇಷ್ಮೆ ಹುಳು ಸಾಕಾಣಿಕೆ ನಡೆಸಬಹುದಾಗಿದ್ದು, ಸೂಕ್ತ ನಿರ್ವಹಣೆ ಮಾಡಿದರೆ ಒಂದು ಎಕರೆಯಿಂದ ವರ್ಷಕ್ಕೆ ಸುಮಾರು 1 ಲಕ್ಷ ಅಥವಾ ಅದಕ್ಕಿಂತ ಹೆಚ್ಚಿನ ನಿವ್ವಳ ಆದಾಯ ಗಳಿಸಬಹುದೆಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ರೈತರು ರೇಷ್ಮೆ ಕೃಷಿಗೆ ಸಂಬಂಧಿಸಿದ ತಮ್ಮ ಸಂದೇಹಗಳನ್ನು ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹಾರ ಪಡೆದುಕೊಂಡರು. ಕಾರ್ಯಕ್ರಮದಲ್ಲಿ ಚಿನಗ ಗ್ರಾಮದ ರೈತರು, ರೇಷ್ಮೆ ಇಲಾಖೆಯ ರೇಷ್ಮೆ ವಿಸ್ತರಣಾ ಅಧಿಕಾರಿ ಪೂಜಾ ಎಲ್ ಉಪಸ್ಥಿತರಿದ್ದರು.

# ಮಧುಮೇಹ ತಡೆಗೆ ಸಾಮಾಜಿಕ ಜಾಗೃತಿ ಅಗತ್ಯ

ದೊಡ್ಡಬಳ್ಳಾಪುರ

ಇಲ್ಲಿನ ಲಯನ್ಸ್ ಕ್ಲಬ್ ಆಫ್ ದೊಡ್ಡಬಳ್ಳಾಪುರ ಆರ್.ಎಲ್.ಜಾಲಪ್ಪ ಇನ್ಸ್‌ಟಿಟ್ಯೂಷನ್ಸ್, ಶ್ರೀದೇವರ ದಾಸಿಮಯ್ಯ ಮಿತ್ರ ಮಂಡಲಿ ನೇಕಾರರ ಸಂಘ, ವಸಂತ ಡಯಾಗ್ನೋಸ್ಟಿಕ್ಸ್ ಸಹಯೋಗದಲ್ಲಿ 61ನೇ ಮಾಸಿಕ ಉಚಿತ ಮಧುಮೇಹ ತಪಾಸಣಾ ಶಿಬಿರ ದರ್ಗಾಜೋಗಿಹಳ್ಳಿ ಮುಖ್ಯರಸ್ತೆಯ ಗಣೇಶ ದೇವಸ್ಥಾನದ ಬಳಿ ನಡೆಯಿತು.

ದೇವರ ದಾಸಿಮಯ್ಯ ಮಿತ್ರ ಮಂಡಲಿ ನೇಕಾರರ ಸಂಘದ ಅಧ್ಯಕ್ಷ ರಾಮಮೂರ್ತಿ ಕಾರ್ಯಕ್ರಮ ಉದ್ಘಾಟಿಸಿದರು. ಅವರು ಮಾತನಾಡಿ, ಸಂಘದ ನೇತೃತ್ವದಲ್ಲಿ ಆರೋಗ್ಯ ಜಾಗೃತಿ ಮತ್ತು ತಪಾಸಣಾ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸಿಕೊಂಡು ಬರಲಾಗುತ್ತಿದೆ. ಪ್ರತಿ ತಿಂಗಳ ಎರಡನೇ ಮತ್ತು ನಾಲ್ಕನೇ ಸೋಮವಾರದಂದು ಮಧುಮೇಹ ತಪಾಸಣೆ ಮತ್ತು ರಕ್ತದೊತ್ತಡ ತಪಾಸಣೆಯ ಉಚಿತ ಶಿಬಿರಗಳನ್ನು ಲಯನ್ಸ್ ಕ್ಲಬ್ ಸಹಯೋಗದಲ್ಲಿ ನಡೆಸಿಕೊಂಡು ಬರಲಾಗುತ್ತಿದೆ ಎಂದು ವಿವರಿಸಿದರು.

ಲಯನ್ಸ್ ಕ್ಲಬ್ ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಸಂಯೋಜಕ ಪ್ರೊ.ಕೆ.ಆರ್.ರವಿಕಿರಣ್ ಮಾತನಾಡಿ, ಮಧುಮೇಹ ತಡೆಗೆ ಸಾಮಾಜಿಕ ಜಾಗೃತಿ ಅಗತ್ಯವಾಗಿದೆ. ಲಯನ್ಸ್ ಸಂಸ್ಥೆಯ ವತಿಯಿಂದ



ಪ್ರತಿ ಶನಿವಾರ ಉಚಿತ ನೇತ್ರ ತಪಾಸಣಾ ಶಿಬಿರ ಹಾಗೂ ಪ್ರತಿ ತಿಂಗಳ ಮೊದಲ ಸೋಮವಾರ ಐಓಎಲ್ ಶಸ್ತ್ರ ಚಿಕಿತ್ಸಾ ಶಿಬಿರಗಳನ್ನು ನಡೆಸಲಾಗುತ್ತಿದೆ. ಅದೇ ರೀತಿ ಪ್ರತಿ ತಿಂಗಳ ಮೊದಲ ದಿನಾಂಕದಂದು ಉಚಿತ ಸಂಪೂರ್ಣ ಆರೋಗ್ಯ ತಪಾಸಣಾ ಶಿಬಿರವನ್ನು ಕೋಲಾರದ ಆರ್.ಎಲ್.ಜಾಲಪ್ಪ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗುತ್ತಿದ್ದು, ಫಲಾನುಭವಿಗಳು ಸದುಪಯೋಗ ಪಡೆಯಬಹುದಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಲಯನ್ಸ್ ಕ್ಲಬ್ ಅಧ್ಯಕ್ಷ ಕೆ.ಸಿ.ನಾಗರಾಜ್ ಮಾತನಾಡಿ, ನೇತ್ರದಾನದ ಮಹತ್ವದ ಕೆಲಸವನ್ನು ದೊಡ್ಡಬಳ್ಳಾಪುರದಲ್ಲಿ ವ್ಯವಸ್ಥಿತವಾಗಿ ನಡೆಸಿಕೊಂಡು ಬರಲಾಗುತ್ತಿದ್ದು, ವ್ಯಕ್ತಿ ಸತ್ತ ನಂತರ ಕಣ್ಣುಗಳನ್ನು ಸುಡದೆ ಅಥವಾ ಮಣ್ಣು ಮಾಡದೆ ದಾನ ಮಾಡುವುದರಿಂದ ನಾಲ್ಕೈದು ಜನ ಅಂಧರಿಗೆ ದೃಷ್ಟಿ ನೀಡಬಹುದಾಗಿದೆ. ಈ ನಿಟ್ಟಿನಲ್ಲಿ ಈಗಾಗಲೇ ದೊಡ್ಡಬಳ್ಳಾಪುರದಲ್ಲಿ ಸುಮಾರು 3 ಸಾವಿರ ಕಣ್ಣು ಗುಡ್ಡೆಗಳ ಸಂಗ್ರಹ ನಡೆದಿದೆ. ಇದು ಇಡೀ ರಾಜ್ಯಕ್ಕೆ ಮಾದರಿಯಾಗಿದ್ದು, ಈ ಬಗ್ಗೆ ಎಲ್ಲರೂ ಅರಿವು ಮೂಡಿಸಬೇಕು. ನೇತ್ರದಾನಕ್ಕೆ ಉತ್ತೇಜನ ನೀಡಬೇಕು ಎಂದರು.

ಎಂ.ಆರ್.ಶ್ರೀನಿವಾಸ್, ಪ್ರಾಂತೀಯ ಅಧ್ಯಕ್ಷ ಜೆ.ಆರ್.ರಾಕೇಶ್, ಡಾ.ಎಂ.ಶ್ರೀನಿವಾಸರೆಡ್ಡಿ, ಎ.ಎಸ್.ಸುಮ, ಖಜಾಂಚಿ ವೈ.ಎಂ.ಹರ್ಷ, ಮಂಜುನಾಥ್, ದೇವರ ದಾಸಿಮಯ್ಯ ಮಿತ್ರ ಮಂಡಲಿ ಉಪಾಧ್ಯಕ್ಷ ರಾಮಣ್ಣ, ಸೋಮಶೇಖರ್, ಎನ್.ರಾಮಚಂದ್ರ, ಇ.ಬಾಬು, ವಿಜಯಕುಮಾರ್, ಆರ್.ಶೋಭಾ, ಖಜಾಂಚಿ ಮುನಿನಾರಾಯಣಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

# ವಿದ್ಯುತ್ ಸರಬರಾಜು ವ್ಯತ್ಯಯ

ಕೋಲಾರ

ಕೋಲಾರ 220ಕೆವಿ ಸ್ವೀಕರಣಾ ಕೇಂದ್ರದಲ್ಲಿ ಹಾಲಿ ಅಳವಡಿಸಿದ್ದ, 02 ಸಂಖ್ಯೆಯ 100 ಎಂವಿಎ ಸಾಮರ್ಥ್ಯದ ಪರಿವರ್ತಕಗಳು 66ಕೆವಿ ಮಾರ್ಗಗಳ ಬಹಳ ಹತ್ತಿರದ ದೋಷದ ಕಾರಣದಿಂದಾಗಿ ಆಕಸ್ಮಿಕವಾಗಿ ವಿಫಲವಾಗಿರುತ್ತದೆ. ಪ್ರಸ್ತುತ ಕೇವಲ 01 ಸಂಖ್ಯೆಯ 100 ಎಂವಿಎ ಪರಿವರ್ತಕದಿಂದ ಮಾತ್ರ ಕೇವಲ ಕೋಲಾರ ಮತ್ತು ನರಸಾಪುರ 66/11ಕೆವಿ ಉಪಕೇಂದ್ರಗಳಿಗೆ ಮಾತ್ರ ವಿದ್ಯುತ್ ಸರಬರಾಜು ಮಾಡಲಾ ಗುತ್ತಿರುತ್ತದೆ. ಇನ್ನುಳಿದ ತಾಲ್ಲೂಕಿನ 66/11ಕೆವಿ ವಿದ್ಯುತ್ ಉಪಕೇಂದ್ರಗಳಿಗೆ ಶ್ರೀನಿವಾಸಪುರ, ಮಾಲೂರು, ಚಿಂತಾಮಣಿ ಮತ್ತು ಟಿ.ಗೊಲ್ಲಹಳ್ಳಿ 220ಕೆವಿ ಸ್ವೀಕರಣಾ ಕೇಂದ್ರಗಳಿಂದ ವಿದ್ಯುತ್ ಸರಬರಾಜು ಮಾಡಲಾಗುತ್ತಿರುತ್ತದೆ. ವಿಫಲವಾಗಿರುವ 100ಎಂವಿಎ ಪರಿವರ್ತಕಗಳು ಬದಲಾ ಯಿಸುವವರೆಗೂ ಕೋಲಾರ ತಾಲ್ಲೂಕಿನ ವ್ಯಾಪ್ತಿಯ ವಿದ್ಯುತ್ ಗ್ರಾಹಕರಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಾಸವಾಗಲಿದೆ. ಕೋಲಾರ ತಾಲ್ಲೂಕಿನ ವ್ಯಾಪ್ತಿಯ ವಿದ್ಯುತ್ ಸಂದರ್ಭದಲ್ಲಿ ಗ್ರಾಹಕರು ಬೆ.ವಿ.ಕಂ ಜೊತೆ ಸಹಕರಿಸಬೇಕೆಂದು ವಾಣಿಜ್ಯ, ಕಾರ್ಯ ಮತ್ತು ಪಾಲನಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಮಿಳುನಾಡಿಗೆ ನೀರು ಬಿಟ್ಟರೆ ಸಿಎಂ ಸಭೆಗೆ ಅವಕಾಶವಿಲ್ಲ: ಸರ್ಕಾರಕ್ಕೆ ರೈತ ಸಂಘ ಎಚ್ಚರಿಕೆ

ಕನಕಪುರ

ತಮಿಳು ನಾಡಿಗೆ ನೀರು ಬಿಟ್ಟರೆ ಬೆಂಗಳೂರಿನಲ್ಲಿ ಆ.3 ರಂದು ಆಯೋಜಿಸಿರುವ ಕರ್ನಾಟಕ ತಮಿಳು ನಾಡು ಮುಖ್ಯಮಂತ್ರಿಗಳ ಸಭೆ ನೆಡೆಯಲು ಬಿಡುಹುದಿಲ್ಲ ಎಂದು ಜಯಕರ್ನಾಟಕ ಮಾಜಿ ರಾಜ್ಯ ಅಧ್ಯಕ್ಷ ಕುಮಾರಸ್ವಾಮಿ ಮುಖ್ಯಮಂತ್ರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

ನಗರದ ರೈತ ಸಂಘದ ಕಛೇರಿಯಲ್ಲಿ ನೆಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ದೆಹಲಿಯಲ್ಲಿ ನಡೆದ CWRC ಸಭೆಯಲ್ಲಿ ಕರ್ನಾಟಕದ ಕೆಆರ್‌ಎಸ್ ಜಲಾಶಯದಿಂದ ತಮಿಳುನಾಡಿಗೆ 15 ದಿನಗಳ ಕಾಲ ಪ್ರತಿದಿನ 3.5 ಕ್ಯೂಸೆಕ್ಸ್ ನೀರನ್ನು ಬಿಡುವಂತೆ ಆದೇಶ ಹೊರಡಿಸಲಾಗಿದ್ದು, ಈ ಆದೇಶ ಸಂಪೂರ್ಣವಾಗಿ ಅವೈಜ್ಞಾನಿಕ ಮತ್ತು ರಾಜ್ಯದ ಹಿತಕ್ಕೆ ವಿರುದ್ಧವಾಗಿದ್ದು, ಇದನ್ನು ರೈತ ಸಂಘ ತೀವ್ರವಾಗಿ ಖಂಡಿಸುತ್ತದೆ ಎಂದರು.

ನಮ್ಮ ಮುಖ್ಯಮಂತ್ರಿಗಳು ತಮಿಳು ನಾಡಿಗೆ ಒಂದಿಂಚು ನೀರನ್ನು ಬಿಡಬಾರದು, ಸರ್ಕಾರ ಬಿಟ್ಟದ್ದೇ ಆದರೆ ಆ.3 ರಂದು ಬೆಂಗಳೂರಿನಲ್ಲಿ ನಡೆಯಲಿರುವ ಕರ್ನಾಟಕ ತೆಮಿಳುನಾಡು ಮುಖ್ಯಮಂತ್ರಿಗಳ ಸಭೆ ನಡೆಯಲು ಬಿಡುಹುದಿಲ್ಲ, ಮುಂದೆ ಆಗುವ ಅನಾಹುತಕ್ಕೆ ರಾಜ್ಯ ಸರ್ಕಾರವೇ ಹೊಣೆ ಹೊರಬೇಕಾಗಿದ್ದು ತಮಿಳುನಾಡು ಮುಖ್ಯಮಂತ್ರಿ ವಿಜಯ್ ಕರ್ನಾಟಕ ಪ್ರವೇಶಿಸಲು ಬಿಡುಹುದಿಲ್ಲ ಎಂದು ಸರ್ಕಾರಕ್ಕೆ ಎಚ್ಚರಿಸಿದರು.

ಈಗಾಗಲೇ ಕರ್ನಾಟಕದ ಮಂಡ್ಯ, ಮೈಸೂರು,



ಚಾಮರಾಜನಗರ, ರಾಮನಗರ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ತೀವ್ರ ಅಭಾವ ಉಂಟಾಗಿ ಕೆರೆಗಳು, ಕೊಳವೆ ಬಾವಿಗಳು ಬತ್ತಿ ರೈತರು ಬೆಳೆದ ಬೆಳೆಗಳು ಒಣಗುತ್ತಿವೆ, ಕೆಆರ್‌ಎಸ್ ಜಲಾಶಯದ ಸಂಗ್ರಹವೂ ಅಪಾಯದ ಮಟ್ಟದಲ್ಲಿದ್ದು, ಈಗ ಇರುವ ನೀರು ಸಂಗ್ರಹ ಒಂದು ಬೆಳೆಗೂ ಸಾಕಾಗುವುದಿಲ್ಲ,ಇಂತಹ ಸಂದರ್ಭದಲ್ಲಿ 4

ಟಿಎಂಸಿ ನೀರನ್ನು ಹೊರ ರಾಜ್ಯಕ್ಕೆ ಬಿಡುವಂತೆ ಸಮಿತಿ ಹೇಳುವುದು ರೈತರ ಬದುಕಿನೊಂದಿಗೆ ಚೆಲ್ಲಾಟವಾಡಿದಂ ತಾಗಿದೆ. ತಮಿಳುನಾಡು ಕಾವೇರಿ ನೀರನ್ನು ಕೇವಲ ಕೃಷಿ ಗಷ್ಟೇ ಅಲ್ಲ, ಉದ್ಯಮಕ್ಕೂ ಬಳಸಿಕೊಂಡು ಕರ್ನಾಟಕದ ಪಾಲನ್ನು ಲೂಟಿ ಮಾಡುತ್ತಿದೆ, ಸಿಡಬ್ಲ್ಯು ಸಿ ಆದೇಶದಲ್ಲಿ ಕರ್ನಾಟಕದ ಜನರ ಬಳಕೆಗೆ ಕುಡಿಯುವ ನೀರು, ಜಾನುವಾರುಗಳ ನೀರು ಪ್ರಮಾಣದ ಅಗತ್ಯವನ್ನು ಪರಿಗಣಿಸಿಯೇ ಇಲ್ಲ. ನ್ಯಾಯಾಧಿಕರಣದ ತೀರ್ಪಿನಲ್ಲಿ "ಕರ್ನಾಟಕದ ಮೊದಲು ಕುಡಿಯುವ ನೀರು" ಎಂಬ ಸ್ಪಷ್ಟ ನಿಬಂಧನೆ ಇದ್ದರೂ ಅದನ್ನು ಗಾಳಿಗೆ ತೂರಲಾಗಿದೆ.ಈ ಅವೈಜ್ಞಾನಿಕ ಆದೇಶವನ್ನು ಕರ್ನಾಟಕ ಸರ್ಕಾರ ತಕ್ಷಣ ವಿರೋಧಿಸಿ, ಸುಪ್ರೀಂಕೋರ್ಟಿನ ಮೆಟ್ಟಿಲೇರಬೇಕು ಯಾವುದೇ ಕಾರಣಕ್ಕೂ ಏಖಖ ನಿಂದ ಒಂದು ಹನಿ ನೀರ ನ್ನು ಕೂಡ ತಮಿಳುನಾಡಿಗೆ ಬಿಡಬಾರದು., ಇಂತಹ ಬರಗಾಲದ ಸಂದರ್ಭದಲ್ಲಿ ನೀರು ಬಿಟ್ಟರೆ ಕರ್ನಾಟಕದ 40 ಲಕ್ಷ ರೈತರ ಬದುಕು ಬೀದಿಗೆ ಬೀಳುತ್ತದೆ ಎಂದು ಕಿಡಿಕಾರಿದರು.

ಈ ಸಂದರ್ಭದಲ್ಲಿ ಸರ್ಕಾರ ಯಾವುದೇ ಕಾರಣಕ್ಕೂ ನೀರು ಬಿಡಬಾರ ದೆಂದು ಒತ್ತಾಯಿಸಿದರು. ಬಳಿಕ ರೈತ ಮುಖಂಡರುಗಳಾದ

# ಕೋಲಾರ ಡಿಸಿ ವಯೋನಿವೃತ್ತಿ: 19 ತಿಂಗಳ ಸೇವೆಗೆ ತೃಪ್ತಿ, ರಾಜಕೀಯ ಪ್ರವೇಶದ ವದಂತಿ ತಳ್ಳಿಹಾಕಿದ ಡಿಸಿ

ಕೋಲಾರ

ಜಿಲ್ಲೆಯಲ್ಲಿ ಕಳೆದ 19 ತಿಂಗಳುಗಳಿಂದ ಜಿಲ್ಲಾಧಿಕಾರಿಯಾಗಿ ಸೇವೆ ಸಲ್ಲಿಸಿದ ತೃಪ್ತಿ ನನಗಿದೆ ಹಾಗೂ ಆಡಳಿತವನ್ನು ಜನಮುಖಿ ಮತ್ತು ಜನಸ್ನೇಹಿಯಾಗಿ ನೀಡಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ಅವರು ತಿಳಿಸಿದ್ದಾರೆ. ತಮ್ಮ ಸೇವಾ ಅವಧಿ ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಮಂಗಳವಾರ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 1992ರ ಡಿಸೆಂಬರ್ 26ರಂದು ಚಿಂತಾಮಣಿಯ ಸರ್ಕಾರಿ ಕಾಲೇಜಿನಲ್ಲಿ ಉಪನ್ಯಾಸಕರಾಗಿ ವೃತ್ತಿ ಜೀವನ ಆರಂಭಿಸಿದ ತಾವು, ಕಾಕತಾಳೀಯವೆಂಬಂತೆ ಕೋಲಾರದಲ್ಲಿಯೇ ಜಿಲ್ಲಾಧಿಕಾರಿಯಾಗಿ ತಮ್ಮ ಸೇವೆಯನ್ನು ಪೂರ್ಣಗೊಳಿಸುತ್ತಿರುವುದು ವಿಶೇಷವಾಗಿದೆ ಎಂದು ಸ್ಮರಿಸಿದರು. ತಮ್ಮ ಆಡಳಿತಾವಧಿಯಲ್ಲಿ ಸಹಕರಿಸಿದ ಜಿಲ್ಲೆಯ ಜನತೆ, ರಾಜ್ಯ ಸರ್ಕಾರ, ಜನಪ್ರತಿನಿಧಿಗಳು, ಸಂಘ–ಸಂಸ್ಥೆಗಳಿಗೆ ಅವರು ಕೃತಜ್ಞತೆ ಸಲ್ಲಿಸಿದರು. ಜುಲೈ 31 ರಂದು ತಮ್ಮ ಸೇವಾ ಅವಧಿ ಮುಗಿಯುತ್ತಿದ್ದು, ನೂತನ ಜಿಲ್ಲಾಧಿಕಾರಿಯಾಗಿ ಎಂ.ಆರ್. ರವಿಕುಮಾರ್ ಅವರು ಅಧಿಕಾರ ವಹಿಸಿಕೊಳ್ಳಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.



ಇದೇ ವೇಳೆ ಜಿಲ್ಲೆಯ ಅಭಿವೃದ್ಧಿ ಯೋಜನೆಗಳ ಬಗ್ಗೆ ಮಾತನಾಡಿದ ಅವರು, ಸರ್ಕಾರಿ ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ 22 ಎಕರೆ ಜಾಗ ಗುರುತಿಸಲಾಗಿದ್ದು, ಡಿಪಿಆರ್ ಸಿದ್ಧವಾಗಿದೆ ಹಾಗೂ ಅರಣ್ಯ ಇಲಾಖೆಯ ಅನುಮತಿ ಮಾತ್ರ ಬಾಕಿ ಇದೆ ಎಂದರು. ಜೊತೆಗೆ, ಕೃಷಿ ಆಧಾರಿತ ಸಂಸ್ಕರಣಾ ಕೈಗಾರಿಕಾ ವಸಾಹತು ಸ್ಥಾಪನೆಗೆ 100 ಎಕರೆ ಜಾಗ ಮೀಸಲಿಡುವ ಪ್ರಸ್ತಾವನೆ, ಎಪಿಎಂಸಿಗೆ 60 ಎಕರೆ ಜಾಗ ಮತ್ತು ಹೆದ್ದಾರಿಯಲ್ಲಿ ಅಪಘಾತಗಳ ತ್ವರಿತ ಚಿಕಿತ್ಸೆಗಾಗಿ ಟ್ರಾಮಾ ಸೆಂಟರ್ ಸ್ಥಾಪನೆಯಂತಹ ಯೋಜನೆಗಳು ಶೀಘ್ರದಲ್ಲೇ ಈಡೇರುವ ವಿಶ್ವಾಸ ವ್ಯಕ್ತಪಡಿಸಿದರು. ಅಲ್ಲದೆ ತಮ್ಮ ಅಧಿಕಾರ ಅವಧಿಯಲ್ಲಿ ಸಹಕರಿಸಿದ ಜನಪ್ರತಿನಿಧಿಗಳು, ಸಾರ್ವಜನಿಕರು, ಪತ್ರಕರ್ತರು, ಅಧಿಕಾರಿಗಳು ಸಿಬ್ಬಂದಿ ವರ್ಗ ಸೇರಿದಂತೆ ಪ್ರತಿಯೊಬ್ಬರನ್ನೂ ಸ್ಮರಿಸಿ ಧನ್ಯವಾದ ಅರ್ಪಿಸಿದರು.

# ರೈತರು ಕಡ್ಡಾಯವಾಗಿ ಬೆಳೆ ವಿಮೆ ಮಾಡಿಸಿಕೊಳ್ಳುವಂತೆ ಡಿಸಿ ಸಲಹೆ

ಗುಡಿಬಂಡೆ

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಮಳೆಯ ಕೊರತೆಯಾಗಲಿದ್ದು, ಎಲ್ಲಾ ರೈತರು ಕಡ್ಡಾಯವಾಗಿ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ನೊಂದಣಿ ಮಾಡಿಸಿಕೊಳ್ಳಬೇಕು, ಅದಕ್ಕೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಕ್ರಮ ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಪ್ರಭು ತಿಳಿಸಿದರು.

ತಾಲೂಕಿನ ನಡುವನಹಳ್ಳಿ ಗ್ರಾಮಕ್ಕೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಕಂದಾಯ, ಕೃಷಿ, ತೋಟಗಾರಿಕೆ ಇಲಾಖೆಗಳ ಸಹಯೋಗದಲ್ಲಿ ಬರ ಅಧ್ಯಯನ ನಡೆಸಿ ರೈತರೊಂದಿಗೆ ಸಂವಾದ ನಡೆಸಿದರು. ಈ ಸಮಯದಲ್ಲಿ ಸ್ಥಳದಲ್ಲಿದ್ದ ರೈತರು ಹಲವಾರು ಸಮಸ್ಯೆಗಳ ಕುರಿತು ಜಿಲ್ಲಾಧಿಕಾರಿಗಳಲ್ಲಿ ಮನವಿ ಮಾಡಿಕೊಂಡರು. ಇದೇ ಸಮಯದಲ್ಲಿ ರೈತರಿಗೆ ಸರಿಯಾಗಿ ಮಾಹಿತಿ ನೀಡದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಕ್ಷೇತ್ರ ಭೇಟಿ ಬಳಿಕ ಗುಡಿಬಂಡೆ ಪಟ್ಟಣದಲ್ಲಿರುವ ರೈತ ಸಂಪರ್ಕ ಕೇಂದ್ರ ಕ್ಕೆ ಭೇಟಿ ನೀಡಿ ಬೆಳೆ ವಿಮೆ ನೊಂದಣಿ ಪ್ರಕ್ರಿಯೆ ಕುರಿತು ಪರಿಶೀಲನೆ ನಡೆಸಿದರು. ನಂತರ ಪಟ್ಟಣದ ಹೊರವಲಯದಲ್ಲಿ ನಿರ್ಮಾಣ ಆಗುತ್ತಿರುವ ಅಂಬೇಡ್ಕರ್ ಭವನ ಕಾಮಗಾರಿಯನ್ನು ಪರಿಶೀಲನೆ ನಡೆಸಿ, ಕಳಪೆ ಕಾಮಗಾರಿಯಾಗಿದ್ದರೇ ಕ್ರಮ ಜರುಗಿಸುವುದಾಗಿ ದೂರುದಾರರಿಗೆ ಭರವಸೆ ನೀಡಿದರು.

ಹವಾಮಾನ ಇಲಾಖೆಯ ಸೂಚನೆಯಂತೆ ಈ ಬಾರಿ ಮಳೆಯಾಗುವ ಸಂಭವ ಕಡಿಮೆಯಿದೆ.



ಇದರಿಂದಾಗಿ ಬರಗಾಲ ಎದುರಾಗಲಿದೆ. ಇದರಿಂದಾಗಿ ಮಳೆಯಾಶ್ರಿತ ಬೆಳೆಗಳನ್ನು ನಂಬಿಕೊಂಡ ರೈತರಿಗೆ ನಷ್ಟ ಉಂಟಾಗಲಿದೆ. ಈ ಕಾರಣದಿಂದ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಕಡ್ಡಾಯವಾಗಿ ರೈತರು ನೊಂದಣಿ ಮಾಡಿಸಿಕೊಳ್ಳಬೇಕು. ಇದರಿಂದಾಗಿ ರೈತರಿಗೆ ಅನುಕೂಲವಾಗಲಿದೆ. ನೊಂದಣಿಗೆ ಸಮಸ್ಯೆಯಾಗಬಾರದೆಂಬ ಉದ್ದೇಶದಿಂದ ಸಹಕಾರ ಸಂಘಗಳಲ್ಲೂ ಸಹ ನೊಂದಣಿಗೆ ಬೇಕಾಗುವಂತಹ ಎಲ್ಲಾ ಸಿದ್ದತೆಗಳನ್ನು ಮಾಡಿಸಲಾಗಿದೆ. ವೆಳೆ ವಿಮೆಗೆ ನೊಂದಾಯಿಸಲು ಏನೇ ಸಮಸ್ಯೆಯಾದರೂ ಕೃಷಿ ಇಲಾಖೆಯ ಅಧಿಕಾರಿಗಳನ್ನು ಸಂಪರ್ಕ ಮಾಡಿ ಯಾವುದೇ ಕಾರಣಕ್ಕೂ ಬೆಳೆ ವಿಮೆಯಿಂದ ರೈತರು ವಂಚನೆಯಾಗಬಾರದು. ಅಧಿಕಾರಿಗಳು ಎಲ್ಲಾ ರೀತಿಯಲ್ಲೂ ಕ್ರಮ ತೆಗೆದುಕೊಳ್ಳಬೇಕು ಎಂದರು.

ಚಿಕ್ಕತಮ್ಮನಹಳ್ಳಿ ಗ್ರಾಮದ ಸಾವಯವ ಕೃಷಿಯನ್ನು ಆಧರಿಸಿ ಕೃಷಿ ಕೈಗೊಳ್ಳುತ್ತಿದ್ದ ರೈತ ಸಿ.ಎಸ್.ಗೋಪಿನಾಥ್ ರವರ ತೋಟಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ಅಲ್ಲಿನ ಸಾವಯವ ಕೃಷಿ ಪದ್ಧತಿಗಳನ್ನು ವೀಕ್ಷಣೆ ಮಾಡಿದರು. ರಾಸಾಯನಿಕ ಗೊಬ್ಬರಗಳ ಬಳಕೆಯಿಂದ ಅನೇಕ ಆರೋಗ್ಯ ಸಮಸ್ಯೆಗಳನ್ನು ನಾವೆಲ್ಲರೂ ಎದುರಿಸುತ್ತಿದ್ದೇವೆ. ಅಂತಹುದರಲ್ಲಿ ಇದೀಗ ಗೋಪಿನಾಥ್ ರವರು ಸಾವಯವ ಕೃಷಿಯನ್ನು ಅಳವಡಿಸಿಕೊಳ್ಳುವುದರ ಮೂಲಕ ಒಳ್ಳೆಯ ಆಹಾರ ಪದಾರ್ಥಗಳನ್ನು ಬೆಳೆಯುವುದರ ಜೊತೆಗೆ ಹೆಚ್ಚಿನ ಇಳುವರಿಯನ್ನು ಸಹ ಪಡೆದುಕೊಳ್ಳುತ್ತಿದ್ದಾರೆ. ಅದರಂತೆ ಎಲ್ಲಾ ರೈತರು ಸಾವಯವ ಕೃಷಿ ಪದ್ದತಿಯನ್ನು ಅಳವಡಿಸಿಕೊಳ್ಳಬೇಕು. ಈ ಸಂಬಂಧ ಕೃಷಿ ಹಾಗೂ ಕೃಷಿ ಸಂಬಂಧಿತ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ಈ ವೇಳೆ ಕೃಷಿ ಇಲಾಖೆಯ ಉಪಕೃಷಿ ನಿರ್ದೇಶಕಿ ದೀಪಶ್ರೀ, ತಹಸೀಲ್ದಾರ್ ಸಿಗ್ಬತ್ತುಲ್ಲಾ, ತಾಪಂ ಇಒ ನಾಗಮಣಿ, ಸಹಾಯಕ ಕೃಷಿ ನಿರ್ದೇಶಕ ಕೇಶವರೆಡ್ಡಿ, ಗಾಯತ್ರಿ, ದಿವಾಕರ್, ಕಂದಾಯ ಇಲಾಖೆಯ ಅಧಿಕಾರಿಗಳು, ರೈತರು ಸೇರಿದಂತೆ ಹಾಜರಿದ್ದರು.

## ಅಧಿಕಾರಿಗಳಿಗೆ ತರಾಟೆ

ಇನ್ನೂ ಈ ಭಾಗದಲ್ಲಿ ಹೆಚ್ಚು ಟಮೋಟೋ ಬೆಳೆಯನ್ನು ಬೆಳೆಯುತ್ತಿದ್ದು, ಟಮೋಟೋ ಬೆಳೆಗೆ ವಿಮೆ ನೊಂದಣಿ ಮಾಡುವ ಕುರಿತು ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಸರಿಯಾದ ಮಾಹಿತಿ ನೀಡಿಲ್ಲ. ಇದರಿಂದ ನಾವು ಬೆಳೆ ವಿಮೆ ಕಟ್ಟಲು ವಿಫಲವಾಗಿದ್ದೇವೆ ಎಂದು ರೈತರು ತೋಟಗಾರಿಕೆ ಇಲಾಖೆಯ ಅಧಿಕಾರಿಗಳ ವಿರುದ್ದ ದೂರು ನೀಡಿದರು. ಈ ವೇಳೆ ಜಿಲ್ಲಾಧಿಕಾರಿ ಜಿಲ್ಲಾ ತೋಟಗಾರಿಕೆ ಅಧಿಕಾರಿಗಳನ್ನು ದೂರವಾಣಿಯ ಮೂಲಕ ಸಂಪರ್ಕ ಮಾಡಿ ಮುಂದೆ ಈ ರೀತಿಯಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚನೆ ನೀಡಿದರು. ಸ್ಥಳೀಯ ರೈತರೊಬ್ಬರಿಗೆ ಸೇರಿದ ಜಮೀನನ್ನು ಬೇರೊಬ್ಬರಿಗೆ ಖಾತೆ ಮಾಡಿದ್ದು, ಮುಂದಿನ 15 ದಿನಗಳ ಒಳಗಾಗಿ ನಿಜವಾದ ರೈತನಿಗೆ ಜಮೀನು ಖಾತೆ ಮಾಡಿಸಬೇಕು, ಇಲ್ಲವಾದಲ್ಲಿ ಕಾನೂನು ರೀತ್ಯ ಕ್ರಮ ತೆಗೆದುಕೊಳ್ಳುವುದಾಗಿ ಕಂದಾಯ ಇಲಾಖೆಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

# ಹಡಪದ ಅಪ್ಪಣ್ಣ ಜಯಂತಿ

ತುಮಕೂರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾ ನಗರಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಬುಧವಾರ ಬೆಳಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ "ಶ್ರೀಹಡಪದ ಅಪ್ಪಣ್ಣ ಜಯಂತಿ" ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಕಾರ್ಯಕ್ರಮವನ್ನು ಹಡಪದ ಅಪ್ಪಣ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಆಚರಿಸಲಾಗುತ್ತಿದ್ದು, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಲಿದ್ದಾರೆ. ಜಿಲ್ಲೆಯ ಜನಪ್ರತಿನಿಧಿಗಳು, ವಿವಿಧ ಸಮುದಾಯದ ಮುಖಂಡರು, ಜಿಲ್ಲಾ ಮಟ್ಟದ ಅಧಿಕಾರಿ/ಸಿಬ್ಬಂದಿ ವರ್ಗದವರು, ಸಮಾಜದ ಗಣ್ಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ ಕೆ.ಮಿರ್ಜಿ ಮನವಿ ಮಾಡಿದ್ದಾರೆ.

# ರಾಜಘಟ್ಟ ಕಂಬದರಾಯಸ್ವಾಮಿ ದೇವಾಲಯದಲ್ಲಿ ಕಳ್ಳತನ



ದೊಡ್ಡಬಳ್ಳಾಪುರ

ರಾಜಘಟ್ಟ ಗ್ರಾಮದ ಹೊರ ವಲಯದ ಕಂಬದರಾಯ ಸ್ವಾಮಿ ಬಾಗಿಲು ಹೊಡೆದು ಒಳ ನುಗ್ಗಿರುವ ಕಳ್ಳರು ದೇವರ ಬೆಳ್ಳಿ ಕಿರೀಟ ಮತ್ತು ಬೆಳ್ಳಿ ವಿಗ್ರಹ ಕದ್ದೊಯ್ದಿರುವ ಘಟನೆ ನಡೆದಿದೆ.

ತಾಲೂಕಿನ ರಾಜಘಟ್ಟ ಗ್ರಾಮದ ಕಂಬದರಾಯಸ್ವಾಮಿ ದೇವಸ್ಥಾನದಲ್ಲಿ ಸೋಮವಾರ ರಾತ್ರಿ ಈ ಘಟನೆ ನಡೆದಿದೆ ಎನ್ನಲಾಗಿದೆ. ಮಂಗಳವಾರ ಬೆಳಗ್ಗೆ ದೇವಸ್ಥಾನದ ಅರ್ಚಕ ಶ್ರೀನಿವಾಸ್ ದೇವಸ್ಥಾನಕ್ಕೆ ಬಂದಾಗ ಕಳ್ಳತನ ಕೃತ್ಯ ಬೆಳಕಿಗೆ ಬಂದಿದೆ.

ಘಟನೆ ಸಂಬಂಧ ಸ್ಥಳೀಯ ಯುವ ಮುಖಂಡ ರಾಜಘಟ್ಟ ಗಣೇಶ್ ಮಾತನಾಡಿ ದೇವಸ್ಥಾನ ಗ್ರಾಮದಿಂದ ಹೊರವಲಯದಲ್ಲಿದ್ದು ದೇವಾಲಯದ ಸುತ್ತಮುತ್ತ ಯಾವುದೇ ಮನೆಗಳಿಲ್ಲ. ರಾತ್ರಿಯಾಗುತ್ತಿದ್ದಂತೆ ಯಾರು ಇಲ್ಲಿಗೆ ಬರುವುದಿಲ್ಲ. ಇಂತಹ ಸಮಯದಲ್ಲಿ ದೇವಸ್ಥಾನ ಗಾಂಜಾ ವ್ಯಾಸನಿಗಳ ತಾಣವಾಗಿದೆ. ಹೆಂಗಸರು ಮಕ್ಕಳು ದೇವಸ್ಥಾನದ ಬಳಿ ಬರುವುದಕ್ಕೂ ಜನ ಹೆದರುವಂಥ ಪರಿಸ್ಥಿತಿ ಇದೆ.

ಈ ಅವಕಾಶ ಬಳಸಿಕೊಂಡ ಕಳ್ಳರು ದೇವಸ್ಥಾನದ ಮುಖ್ಯದ್ವಾರ ಮತ್ತು ಗರ್ಭ ಗುಡಿಯ ಬಾಗಿಲ ಬೀಗ ಹೊಡೆದು ಭಕ್ತರು ಕಾಣಿಕೆ ರೂಪದಲ್ಲಿ ನೀಡಿದ ಬೆಳ್ಳಿ ಕೀರಿಟ ಮತ್ತು ಬೆಳ್ಳಿಯ ವಿಗ್ರಹ ಕದ್ದೊಯ್ದಿದ್ದಾರೆ. ಅರ್ಚಕರಾದ ಶ್ರೀನಿವಾಸ್ ರವರಿಗೆ ಕಿವಿ ಕೇಳಿಸುವುದಿಲ್ಲ ಮತ್ತು ಮಾತು ಸಹ ಬರುವುದಿಲ್ಲ.ದೇವರ ಸೇವೆ ಮಾಡಿಕೊಂಡು ಬರುತ್ತಿದ್ದಾರೆ. ಪೊಲೀಸರು ಕಳ್ಳರನ್ನ ಬಂಧಿಸುವ ಮೂಲಕ ಕಳ್ಳರಿಗೆ ತಕ್ಕ ಶಿಕ್ಷೆ ನೀಡ ಬೇಕೆಂದು ಆಗ್ರಹಿಸಿದರು.

ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸ್ ಠಾಣೆ ಪೋಲೀಸರು ಸ್ಥಳಕ್ಕೆ ದಾವಿಸಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮಾಡುತ್ತಿದ್ದಾರೆ.

# ಎಲೆಸುರಳಿ ಕೀಟದ ಹಾವಳಿ ನಿಯಂತ್ರಣಕ್ಕೆ ಪರಾವಲಂಬಿ ಕೀಟಗಳ ಬಿಡುಗಡೆ

ರಾಮನಗರ

ಜಿಲ್ಲೆಯಲ್ಲಿ ಹಿಪ್ಪುನೇರಳೆ ತೋಟಗಳಲ್ಲಿ ಇತ್ತೀಚಿನ ದಿನಗಳಲ್ಲಿ, ಎಲೆ ಸುರಳಿ ಕೀಟಗಳ ಹಾವಳಿ ಜಾಸ್ತಿಯಾಗಿದ್ದು, ಎಲೆ ಸುರಳಿ ಕೀಟದ ನಿಯಂತ್ರಣಕ್ಕಾಗಿ ಜೈವಿಕ ನಿಯಂತ್ರಣ ಕ್ರಮವಾಗಿ ಟ್ರೈಕೋಗ್ರಾಮಾ ಕೈಲೋನಿಸ್ ಎಂಬ ಮೊಟ್ಟೆ ಪರಾವಲಂಬಿ ಕೀಟಗಳನ್ನು ಪ್ರಾಯೋಗಿಕವಾಗಿ ಬಿಡಲಾಗಿದೆ ಎಂದು ಜಿಲ್ಲಾ ರೇಷ್ಮೆ ಉಪ ನಿರ್ದೇಶಕ ಎಂ.ಸಿ. ಚಂದ್ರಪ್ಪ ತಿಳಿಸಿದರು.

ಅವರು ಇತ್ತೀಚೆಗೆ ರೇಷ್ಮೆ ಇಲಾಖೆ ವತಿಯಿಂದ ಕನಕಪುರ ತಾಲ್ಲೂಕಿನ ಗೇರಹಳ್ಳಿ ಮತ್ತು ಮರಳೆ ಗ್ರಾಮಗಳಲ್ಲಿ ಎಲೆ ಸುರಳಿ ಕೀಟದ ನಿಯಂತ್ರಣಕ್ಕಾಗಿ ಜೈವಿಕ ನಿಯಂತ್ರಣ ಕ್ರಮವಾಗಿ ಟ್ರೈಕೋಗ್ರಾಮಾ ಕೈಲೋನಿಸ್ ಎಂಬ ಮೊಟ್ಟೆ ಪರಾವಲಂಬಿ ಕೀಟಗಳನ್ನು ಬಿಡುಗಡೆಗೊಳಿಸಿ ಮಾತನಾಡಿದರು.

ಮುಖ್ಯವಾಗಿ ಕರ್ನಾಟಕ, ಆಂಧ್ರಪ್ರದೇಶ ಮತ್ತು ತಮಿಳುನಾಡಿನಲ್ಲಿ ಹಿಪ್ಪುನೇರಳೆ ತೋಟಗಳಿಗೆ 'ಎಲೆ ಸುರುಳಿ ಹುಳು' (leaf roller insect) ಬಾಧೆ ಹೆಚ್ಚಾಗಿ ಕಂಡುಬರುತ್ತದೆ. ಎಲೆ ಸುರುಳಿ ಹುಳುವು ಹಿಪ್ಪುನೇರಳೆ ಗಿಡದ ತುದಿಯ ಭಾಗವನ್ನು ಪ್ರಮುಖವಾಗಿ ಬಾಧಿಸುತ್ತದೆ; ಇದರ ಬಾಧೆಯು ಮುಂಗಾರು ಮಳೆಯ ಆರಂಭದೊಂದಿಗೆ (ಅಂದರೆ ಜೂನ್ ತಿಂಗಳಲ್ಲಿ) ಕಂಡುಬಂದು ಫೆಬ್ರವರಿವರೆಗೆ ಮುಂದುವರಿಯುತ್ತದೆ ಮತ್ತು ಸೆಪ್ಟೆಂಬರ್‌ನಿಂದ ನವೆಂಬರ್ ಅವಧಿಯಲ್ಲಿ ಇದರ ಬಾಧೆ ತೀವ್ರವಾಗಿರುತ್ತದೆ ಎಂದರು. ಜೈವಿಕ ನಿಯಂತ್ರಣ ಕ್ರಮವಾಗಿ, ಟ್ರೈಕೊಗ್ರಾಮಾ ಕೈಲೋನಿಸ್' (Trichogramma chilonis) ಎಂಬ ಮೊಟ್ಟೆ ಪರಾವಲಂಬಿ ಕೀಟಗಳನ್ನು ಸೊಪ್ಪು ಕಟಾವು ಮಾಡಿದ 15ದಿನಗಳ ನಂತರ ನಾಲ್ಕು ವಾರಗಳವರೆಗೆ ಪ್ರತಿ ವಾರಕ್ಕೆ ಒಂದು 'ಟ್ರೈಕೊ ಕಾರ್ಡ್'ನಂತೆ ಒಂದು ಎಕರೆ ಪ್ರದೇಶಕ್ಕೆ ಬಿಡುಗಡೆ ಮಾಡಬೇಕು. ಹಾಗೂ ಪರಾವಲಂಭಿ ಕೀಟಗಳನ್ನು ಬಿಟ್ಟ ನಂತರ ರೇಷ್ಮೆ ಬೆಳೆಗಾರರು ತಮ್ಮ ತೋಟಗಳಿಗೆ ಯಾವುದೇ ರಾಸಯನಿಕ ಕೀಟನಾಶಕಗಳನ್ನು ಉಪಯೋಗಿಸಬಾರದೆಂದು ತಿಳಿಸಿದರು.

ಕೇಂದ್ರ ರೇಷ್ಮೆ ಮಂಡಳಿ ವಿಜ್ಞಾನಿಗಳಾದ ಡಾ. ಶಿವಕುಮಾರ್, ಶಶಿಧರ್, ರೇಷ್ಮೆ ಸಹಾಯಕ ನಿರ್ದೇಶಕರು, ಕನಕಪುರ ಗೌರಿ ಮತ್ತು ಕುಮಾರಸ್ವಾಮಿ ರೇಷ್ಮೆ ನಿರೀಕ್ಷಕರ ತಂಡ ಕನಕಪುರ ತಾಲ್ಲೂಕಿನ ಗೇರಹಳ್ಳಿ ಮತ್ತು ಮರಳೆ ಗ್ರಾಮಗಳಲ್ಲಿ ಪ್ರಾಯೋಗಿಕವಾಗಿ ಪರಾವಲಂಬಿ ಹುಳುಗಳನ್ನು ಬಿಡುಗಡೆ ಮಾಡಿದರು.

# ಕ್ರೀಡಾಕೂಟಕ್ಕೆ ತಹಶೀಲ್ದಾರ್ ಚಾಲನೆ

ಶಿಡ್ಲಘಟ್ಟ

ನಗರದ ನೆಹರೂ ಕ್ರೀಡಾಂಗಣದಲ್ಲಿ ತಾಲ್ಲೂಕಿನ ಪದವಿ ಪೂರ್ವ ಕಾಲೇಜುಗಳ ಮೂರು ದಿನಗಳ ಕ್ರೀಡಾಕೂಟಕ್ಕೆ ತಹಶೀಲ್ದಾರ್ ಗಗನಸಿಂಧು ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ವಿದ್ಯಾರ್ಥಿಗಳು ಕ್ರೀಡೆಯನ್ನು ಕೇವಲ ಸ್ಪರ್ಧೆಯಾಗಿ ನೋಡದೆ ವ್ಯಕ್ತಿತ್ವ ವಿಕಸನದ ಸಾಧನವಾಗಿ ಪರಿಗಣಿಸಬೇಕು. ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಮನೋಭಾವ ಬೆಳೆಸಿಕೊಂಡರೆ ಜೀವನದಲ್ಲಿಯೂ ಯಶಸ್ಸು ಸಾಧಿಸಲು ಸಾಧ್ಯವಾಗುತ್ತದೆ" ಎಂದು ಹೇಳಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿಯೂ ಸಾಕಷ್ಟು ಪ್ರತಿಭೆ ಅಡಗಿದೆ. ಇಂತಹ ಕ್ರೀಡಾಕೂಟಗಳು ಆ ಪ್ರತಿಭೆಯನ್ನು ಗುರುತಿಸಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಲು ಉತ್ತಮ ವೇದಿಕೆಯಾಗಿವೆ ಎಂದರು.

ಕಾರ್ಯಕ್ರಮದಲ್ಲಿ ನಿಕಟಪೂರ್ವ ಉಪನಿರ್ದೇಶಕ ಆದಿಶೇಷರಾವ್, ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ವೆಂಕಟಶಿವಾರೆಡ್ಡಿ, ಅಂತಾರಾಷ್ಟ್ರೀಯ ವಾಲಿಬಾಲ್ ಆಟಗಾರ ಹಾಗೂ ಭಾರತೀಯ ಸೇನೆಯ ಹವಾಲ್ದಾರ್ ಅಜ್ಮತ್ ಉಲ್ಲಾ, ಡಾಲ್ಫಿನ್ ಪಿಯು ಕಾಲೇಜಿನ ಪ್ರಾಂಶುಪಾಲ ಎನ್. ಶ್ರೀನಿವಾಸಮೂರ್ತಿ ಹಾಗೂ ವಿವಿಧ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಉಪಸ್ಥಿತರಿದ್ದರು.

# ಕಾನ್ಸ್‌ಟೇಬಲ್ ನೇಮಕಾತಿ ಪರೀಕ್ಷೆ: ಅಗತ್ಯ ಸಿದ್ಧತೆ ಕೈಗೊಳ್ಳಲು ಸೂಚನೆ

ರಾಮನಗರ



ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಮಿಕ್ಕುಳಿದ ವೃಂದದ 3395 ಹಾಗೂ ಸ್ಥಳೀಯ ವೃಂದದ 596 ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇರ ನೇಮಕಾತಿಗೆ ಜಿಲ್ಲೆಯಲ್ಲಿ ಆ. 2ರ ಭಾನುವಾರ ಲಿಖಿತ ಪರೀಕ್ಷೆ ನಡೆಯಲಿದೆ. ಈ ಪರೀಕ್ಷೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಯಾವುದೇ ಲೋಪದೋಷಗಳಿಗೆ ಆಸ್ಪದ ಕೊಡದಂತೆ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಅಗತ್ಯ ಪೂರ್ವ ಸಿದ್ಧತೆ ಮಾಡಿಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಮಂಗಳವಾರ ನಗರದ ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ಈ ಕುರಿತು ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನೇಮಕಾತಿಯ ಈ ಲಿಖಿತ ಪರೀಕ್ಷೆಯು ಜಿಲ್ಲೆಯ 9 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಚನ್ನಪಟ್ಟಣದಲ್ಲಿ 2, ಬಿಡದಿಯಲ್ಲಿ 1 ಹಾಗೂ ರಾಮನಗರ ಟೌನ್‌ನಲ್ಲಿ ರಚಿಸಲಾಗಿರುವ 6 ಪರೀಕ್ಷಾ ಕೇಂದ್ರಗಳಲ್ಲಿ ಆ. 2ರ ಬೆಳಿಗ್ಗೆ 10 ಗಂಟೆಗೆ ಪರೀಕ್ಷೆ ಪ್ರಾರಂಭವಾಗಲಿದೆ. ಅಂದು ಬೆಳಿಗ್ಗೆ 8.30ಕ್ಕೆ ಈ ಪರೀಕ್ಷಾ ಕೇಂದ್ರಗಳಿಗೆ ನಿಯೋಜಿಸಿರುವ ಪೊಲೀಸರು ಹಾಜರಾಗಿ ಭದ್ರತೆ ಒದಗಿಸಬೇಕು, ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಒಬ್ಬ ಮಹಿಳಾ ಹಾಗೂ ಒಬ್ಬರು ಪುರುಷ ಪೊಲೀಸ್ ಕಾನ್ಸ್‌ಟೇಬಲ್ ಇರುವುದು ಕಡ್ಡಾಯ, ಪರೀಕ್ಷಾ ಕೇಂದ್ರಗಳಲ್ಲಿ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು ಪೂರೈಸುವುದು, ಶೌಚಾಲಯಗಳಲ್ಲಿ ಸ್ವಚ್ಛತೆ ಕಾಪಾಡುವುದು, ಸಮರ್ಪಕವಾದ ಲೈಟ್ ಹಾಗೂ ಫ್ಯಾನ್‌ಗಳ ವ್ಯವಸ್ಥೆ ಮಾಡುವುದು ಸೇರಿದಂತೆ ಪರೀಕ್ಷಾರ್ಥಿಗಳಿಗೆ ಒಟ್ಟಾರೆ ಪರೀಕ್ಷಾ ವಾತಾವರಣವನ್ನು ಸೃಷ್ಟಿಸಿ ಕೊಡುವುದು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರ ಜವಾಬ್ದಾರಿಯಾಗಿದೆ ಎಂದರು. ಮುಖ್ಯವಾಗಿ 9 ಪರೀಕ್ಷಾ ಕೇಂದ್ರಗಳಲ್ಲಿ ಕಡ್ಡಾಯವಾಗಿ ಸಿಸಿಟಿವಿಯನ್ನು ಅಳವಡಿಸಲೇಬೇಕು ಹಾಗೂ ಆಯಾ ಕಾಲೇಜಿನ ಪ್ರಾಂಶುಪಾಲರಿಂದ ಸಿಸಿಟಿವಿ ಅಳವಡಿಕೆ ಹಾಗೂ ಪರೀಕ್ಷೆಗೆ ಕೈಗೊಳ್ಳಲಾದ ಅಗತ್ಯ ಸಿದ್ಧತೆಗಳ ಬಗ್ಗೆ ದೃಢೀಕರಣವನ್ನು ಲಿಖಿತವಾಗಿ ಪಡೆಯಬೇಕು, ಪರೀಕ್ಷೆ ನಡೆಯುವ ಎರಡು ದಿನಗಳ ಮೊದಲೇ ಸಿಸಿಟಿವಿ ಅಳವಡಿಕೆಯಾಗಿರಬೇಕು ಎಂದವರು ತಿಳಿಸಿದರು. ಪರೀಕ್ಷಾ ಸಮಯದಲ್ಲಿ ಬೆಸ್ಕಾಂನಿಂದ ವಿದ್ಯುತ್ ಕಡಿತ ಆಗದಂತೆ ಎಚ್ಚರ ವಹಿಸಬೇಕು, ಎಲ್ಲಕ್ಕಿಂತ ಮುಖ್ಯವಾಗಿ ವಸ್ತ್ರ ಸಂಹಿತೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಅಗತ್ಯವಾಗಿದೆ. ಈ ದಿಸೆಯಲ್ಲಿ ಎಲ್ಲಾ ಕೇಂದ್ರಗಳಿಗೂ ವಸ್ತ್ರ ಸಂಹಿತೆ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ಹಾಗೂ ಈ ವಸ್ತ್ರಸಂಹಿತೆ ಅಧಿಕಾರಿಗಳು ಡ್ರೆಸ್‌ಕೋಡ್‌ಅನ್ನು ಪರೀಶೀಲಿಸಿ ವ್ಯವಸ್ಥೆಗೆ ಮುಜುಗರ ತರದಂತೆ ಎಚ್ಚರದಿಂದ ಕಾರ್ಯನಿರ್ವಹಿಸಬೇಕು, ಯಾವುದೇ ರೀತಿಯ ಗೊಂದಲಗಳು ಕಂಡುಬಂದರೆ ಜಿಲ್ಲಾಧಿಕಾರಿಯವರು ಸೇರಿದಂತೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದು ಕಾರ್ಯನಿರ್ವಹಿಸಬೇಕೆಂದರು.

ಡ್ರೆಸ್ ಕೋಡ್ ವಿವರ ಇಂತಿದೆ: ಪರೀಕ್ಷಾರ್ಥಿಗಳು ಉದ್ದ ತೋಳುಗಳ ಡ್ರೆಸ್‌ಗಳನ್ನು ಧರಿಸಿ ಪರೀಕ್ಷೆಗೆ ಹಾಜರಾಗುವಂತಿಲ್ಲ, ಕಿವಿ, ತಲೆ ಮತ್ತು ಮುಖ ಮುಚ್ಚುವಂತಹ ಯಾವುದೇ ಉಡುಪುಗಳನ್ನು ಧರಿಸಿಕೊಂಡು ಬರಬಾರದು. ಯಾವುದೇ ಆಭರಣ ಅಥವಾ ಲೋಹದ ವಸ್ತುಗಳನ್ನು (ಅಂದರೆ ಮೂಗುತಿ ಮತ್ತು ಮಂಗಳಸೂತ್ರವನ್ನು ಹೊರತುಪಡಿಸಿ) ಧರಿಸಬಾರದು. ಚಪ್ಪಲಿಗಳು ಕಡಿಮೆ ಹಿಮ್ಮಡಿ ಇರುವ ಸ್ಯಾಂಡಲ್ಗಳನ್ನು ಧರಿಸುವುದು ಉತ್ತಮ, ಮುಖ್ಯವಾಗಿ ಶೂಗಳನ್ನು ಹಾಕಿಕೊಂಡು ಬರುವಂತಿಲ್ಲ.

ಸಭೆಯಲ್ಲಿ ಅಪರ ಪೊಲೀಸ್ ವರಿಷ್ಠಾಧಿಕಾರಿ ರಾಮಚಂದ್ರಯ್ಯ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮರಿಸ್ವಾಮಿ, ತಹಶೀಲ್ದಾರರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಬಂಧಿಸಿದವರಿದ್ದರು.

# 'ಸ್ವಾತಂತ್ರ್ಯ ಹೋರಾಟಗಾರರ ತ್ಯಾಗದ ಬಗ್ಗೆ ಅರಿವು ಮೂಡಿಸಿ'

ಚಿಕ್ಕಬಳ್ಳಾಪುರ



ಸ್ವಾತಂತ್ರ್ಯ ದಿನಾಚರಣೆಯನ್ನು ಈ ಬಾರಿ ಜಿಲ್ಲೆಯಾದ್ಯಂತ ಹಬ್ಬದ ಸಂಭ್ರಮ, ಶಿಸ್ತು ಮತ್ತು ಅರ್ಥಪೂರ್ಣತೆಯೊಂದಿಗೆ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಜಿ. ಪ್ರಭು ಅವರು ಸಂಬಂಧಿತ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಇದೇ ಆ 15 ರಂದು ಜಿಲ್ಲಾ ಮಟ್ಟದ ಮುಖ್ಯ ಕಾರ್ಯಕ್ರಮವನ್ನು ನಗರದ ಸರ್ ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲಾಗುವುದು.

ಈ ಬಾರಿಯ ಸ್ವಾತಂತ್ರ್ಯ ಮಹೋತ್ಸವವನ್ನು ಕೇವಲ ಔಪಚಾರಿಕ ಕಾರ್ಯಕ್ರಮವಾಗಿ ನಡೆಸದೇ, ಜನರಲ್ಲಿ ದೇಶಭಕ್ತಿ, ರಾಷ್ಟ್ರೀಯತೆ ಹಾಗೂ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗದ ಬಗ್ಗೆ ಅರಿವು ಮೂಡಿಸುವ ಹಬ್ಬದ ವಾತಾವರಣದಲ್ಲಿ ಆಚರಿಸಲು ಜಿಲ್ಲಾಡಳಿತ ನಿರ್ಧರಿಸಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಧ್ವಜಾರೋಹಣ, ಗೌರವ ವಂದನೆ, ಪೊಲೀಸ್ ಕವಾಯತು, ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆಗೆ ಸಂಬಂಧಿಸಿದಂತೆ ಶಿಕ್ಷಣ ಇಲಾಖೆ ಹಾಗೂ ಇತರ ಇಲಾಖೆಯ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ವಿವಿಧ ಸ್ಪರ್ಧೆಗಳ ವಿಜೇತರಿಗೆ ಕಾರ್ಯಕ್ರಮದಲ್ಲಿ ಬಹುಮಾನ ಹಾಗೂ ಪ್ರಶಸ್ತಿ ಪ್ರದಾನ ಮಾಡುವ ವ್ಯವಸ್ಥೆ ಕಲ್ಪಿಸಬೇಕು. ಕಾರ್ಯಕ್ರಮದ ಪ್ರತಿಯೊಂದು ಹಂತವೂ ಶಿಸ್ತುಬದ್ಧವಾಗಿ ಮತ್ತು ಸಮಯ ಪಾಲನೆಯೊಂದಿಗೆ ನಡೆಯುವಂತೆ ಪೂರ್ವ ಸಿದ್ಧತೆಗಳನ್ನು ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ಆ 15ರ ಸಂಜೆ ನಗರದ ಕನ್ನಡ ಭವನದಲ್ಲಿ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಈ ಕಾರ್ಯಕ್ರಮಕ್ಕೆ ಎಲ್ಲಾ ಸರ್ಕಾರಿ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಕಡ್ಡಾಯವಾಗಿ ಹಾಜರಾಗಬೇಕು. ಗೈರುಹಾಜರಾಗುವವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದರು.

ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರು ಹಾಗೂ ಗಣ್ಯರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಸಮರ್ಪಕವಾಗಿ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಅವರು, ಕ್ರೀಡಾಂಗಣದಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ, ಸಮರ್ಪಕ ಆಸನ ವ್ಯವಸ್ಥೆ, ವಾಹನ ನಿಲುಗಡೆ, ನೆರಳು ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವಂತೆ ತಿಳಿಸಿದರು.

ತುರ್ತು ಆರೋಗ್ಯ ಸೇವೆಗಳಿಗಾಗಿ ಸ್ಥಳದಲ್ಲೇ ಆಂಬುಲೆನ್ಸ್ ಹಾಗೂ ವೈದ್ಯಕೀಯ ಸಿಬ್ಬಂದಿಯನ್ನು ನಿಯೋಜಿಸಬೇಕು. ವೇದಿಕೆ ನಿರ್ಮಾಣ, ಅಲಂಕಾರ, ಧ್ವನಿವರ್ಧಕ ವ್ಯವಸ್ಥೆ, ಆಹ್ವಾನ ಪತ್ರಿಕೆಗಳ ಮುದ್ರಣ ಹಾಗೂ ವಿತರಣೆ, ಕಾರ್ಯಕ್ರಮ ನಿರೂಪಣೆ, ಕ್ರೀಡಾಂಗಣದ ಸ್ವಚ್ಛತೆ, ಸರ್ಕಾರಿ ಕಚೇರಿ ಕಟ್ಟಡಗಳಿಗೆ ದೀಪಾಲಂಕಾರ ಸೇರಿದಂತೆ ಪ್ರತಿಯೊಂದು ಜವಾಬ್ದಾರಿಯನ್ನು ಸಂಬಂಧಿತ ಇಲಾಖೆಗೆ ಹಂಚಿಕೆ ಮಾಡಿ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಅಪರ ಜಿಲ್ಲಾಧಿಕಾರಿ ಡಾ. ಎನ್.ಭಾಸ್ಕರ್, ಉಪವಿಭಾಗಾಧಿಕಾರಿ ಡಿ.ಹೆಚ್.ಅಶ್ವಿನ್, ಜಿ.ಪಂ. ಉಪಕಾರ್ಯದರ್ಶಿ ಅತಿಕ್ ಪಾಷಾ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

# ಹೈನುಗಾರಿಕೆಯಲ್ಲಿ ಮಹಿಳೆಯರೇ ಮೇಲುಗೈ: ಮೆಚ್ಚುಗೆ

ಕೊರಟಗೆರೆ



ಗ್ರಾಮೀಣ ಆರ್ಥಿಕತೆಗೆ ಹೈನುಗಾರಿಕೆ ಪ್ರಮುಖ ಆಧಾರವಾಗಿದ್ದು, ಹಾಲು ಉತ್ಪಾದನೆ ಮತ್ತು ಸಹಕಾರ ಸಂಘಗಳ ಅಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ತುಮಕೂರು ಹಾಲು ಒಕ್ಕೂಟದ ನಿರ್ದೇಶಕ ಸಿದ್ದಗಂಗಯ್ಯ ಹೇಳಿದರು.

ತಾಲೂಕಿನ ಬೋಡಬಂಡೇನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ 2025–26ನೇ ಸಾಲಿನ ವಾರ್ಷಿಕ ಸರ್ವ ಸದಸ್ಯರ ಸಾಮಾನ್ಯ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಹೈನುಗಾರಿಕೆ ರೈತ ಕುಟುಂಬಗಳಿಗೆ ವರ್ಷಪೂರ್ತಿ ಆದಾಯ ತಂದುಕೊಡುವ ಲಾಭ ದಾಯಕ ಉಪಕಸಬುವಾಗಿದೆ. ಮಹಿಳೆಯರು ಜಾನುವಾರುಗಳ ಆರೈಕೆ, ಗುಣಮಟ್ಟದ ಹಾಲು ಉತ್ಪಾದನೆ ಹಾಗೂ ಸಹಕಾರ ಸಂಘಗಳ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಜಾನುವಾರುಗಳಿಗೆ ಸಮತೋಲಿತ ಮೇವು, ನಿಯಮಿತ ಆರೋಗ್ಯ ತಪಾಸಣೆ ಹಾಗೂ ಸ್ವಚ್ಛ ಹಾಲು ಉತ್ಪಾದನೆಗೆ ಹೆಚ್ಚಿನ ಆದ್ಯತೆ ನೀಡಿದರೆ ಉತ್ಪಾದನೆ ಮತ್ತು ರೈತರ ಆದಾಯ ಎರಡನ್ನೂ ಹೆಚ್ಚಿಸಬಹುದು ಎಂದು ಅವರು ತಿಳಿಸಿದರು.

ಸಭೆಯ ಅಂಗವಾಗಿ ಸಂಘಕ್ಕೆ ಅತಿ ಹೆಚ್ಚು ಹಾಲು ಸರಬರಾಜು ಮಾಡಿದ ಮೂರು ಮಹಿಳಾ ರೈತರನ್ನು ಸಿದ್ದಗಂಗಯ್ಯ ಬಹುಮಾನ ನೀಡಿ ಸನ್ಮಾನಿಸಿದರು. ಈ ರೀತಿಯ ಪ್ರೋತ್ಸಾಹದಿಂದ ಇನ್ನಷ್ಟು ಮಹಿಳೆಯರು ಹೈನುಗಾರಿಕೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲಿದ್ದು, ಹಾಲು ಉತ್ಪಾದನೆಯೂ ಹೆಚ್ಚಾಗಲಿದೆ ಎಂದು ಅಭಿಪ್ರಾಯಪಟ್ಟರು.

ವಿಸ್ತರಣಾಧಿಕಾರಿ ಶೀರ ಮಾತನಾಡಿ, 2025–26ನೇ ಸಾಲಿನ ವಾರ್ಷಿಕ ನಡವಳಿಕೆ ವರದಿ, ಆಡಿಟ್ ವರದಿ, ಜಮಾ–ಖರ್ಚಿನ ವಿವರ, ಲಾಭ–ನಷ್ಟದ ಲೆಕ್ಕ, ಲಾಭ ಹಂಚಿಕೆ, 2026–27ನೇ ಸಾಲಿನ ಲೆಕ್ಕಪರಿಶೋಧಕರ ನೇಮಕ ಹಾಗೂ ಅಂದಾಜು ಬಜೆಟ್ ಸೇರಿದಂತೆ ವಿವಿಧ ವಿಷಯಗಳನ್ನು ಸರ್ವ ಸದಸ್ಯರಿಗೆ ವಿವರಿಸಿದರು. ಸದಸ್ಯರು ಸಂಘದ ಅಭಿವೃದ್ಧಿಗೆ ಸಹಕಾರ ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬೋಡಬಂಡೇನಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷೆ ಉಮಾದೇವಿ, ಉಪಾಧ್ಯಕ್ಷೆ ರಂಗಮ್ಮ, ನಿರ್ದೇಶಕರಾದ ರೇಣುಕಮ್ಮ, ಅನುಸೂಯಮ್ಮ, ಮಧು, ಶ್ರೀದೇವಿ, ರಾಜೇಶ್ವರಿ, ಮಂಜಮ್ಮ, ಜ್ಯೋತಿ, ಜಯಮ್ಮ, ಆರತಿ, ಗುರುರಾಜ್, ತುಮಕೂರು ಹಾಲು ಒಕ್ಕೂಟದ ತಾಲೂಕು ಮುಖ್ಯಸ್ಥೆ ಪುಷ್ಪಲತಾ, ತಾಲೂಕು ವಿಸ್ತರಣಾಧಿಕಾರಿ ರಂಜಿತ್ ಹಾಗೂ ಬಶೀರ, ವಿಸ್ತರಣಾ ಸಮಾಲೋಚಕ ಹನುಮಂತರಾಜು, ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಮ್ಯಾ ಅರುಣ್, ಹಾಲು ಪರೀಕ್ಷಕಿ ನೇತ್ರಮ್ಮ, ಸದಸ್ಯರು, ಗ್ರಾಮಸ್ಥರು ಹಾಗೂ ಮುಖಂಡರು ಭಾಗವಹಿಸಿದ್ದರು.

# ಎಸ್‌ಐಆರ್: ಮುಂಚೂಣಿ

## ಕಾಯ್ದುಕೊಂಡ ಚಿಕ್ಕಬಳ್ಳಾಪುರ ಜಿಲ್ಲೆ

ಚಿಕ್ಕಬಳ್ಳಾಪುರ

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯು ಆರಂಭದಿಂದಲೂ ಮುಂಚೂಣಿಯನ್ನು ಕಾಯ್ದುಕೊಂಡಿದ್ದು, ಇದುವರೆಗೆ 9,51,985 ಮತದಾರರ ಮಾಹಿತಿಯನ್ನು ಆನ್‌ಲೈನ್ ಮೂಲಕ ಗಣಕೀಕರಣ ಮಾಡಲಾಗಿದೆ. ಈ ಮೂಲಕ ಜಿಲ್ಲೆಯಲ್ಲಿ ಶೇ.89ರಷ್ಟು ಪ್ರಗತಿ ಸಾಧಿಸಲಾಗಿದ್ದು, ರಾಜ್ಯದಲ್ಲಿಯೇ ಚಿಕ್ಕಬಳ್ಳಾಪುರ ಜಿಲ್ಲೆ ಮೊದಲ ಸ್ಥಾನವನ್ನು ಗಳಿಸಿದೆ ಎಂದು ಜಿಲ್ಲಾಧಿಕಾರಿ ಪ್ರಭು ಜಿ. ಅವರು ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ "ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ" ಕುರಿತ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವು ಆರಂಭದಿಂದಲೇ ಚುರುಕುಗೊಂಡಿದ್ದು, ಮತಗಟ್ಟೆ ಮಟ್ಟದ ಅಧಿಕಾರಿಗಳ (ಬಿಎಲ್‌ಒ) ಕ್ರಿಯಾಶೀಲ ಕಾರ್ಯನಿರ್ವಹಣೆ, ಬಿಎಲ್‌ಎ–2 ರಾಜಕೀಯ ಪ್ರತಿನಿಧಿಗಳ ಸಹಕಾರ ಹಾಗೂ ಜಿಲ್ಲೆಯ ಸಾರ್ವಜನಿಕರ ಸಕ್ರಿಯ ಭಾಗವಹಿಸುವಿಕೆಯಿಂದ ಉತ್ತಮ ಪ್ರಗತಿ ಸಾಧಿಸಲು ಸಾಧ್ಯವಾಗಿದೆ ಎಂದು ಹೇಳಿದರು.

ಜಿಲ್ಲೆಯ ಒಟ್ಟು 9,51,985 ಮತದಾರರ ವಿವರಗಳನ್ನು ಭಾರತ ಚುನಾವಣಾ ಆಯೋಗವು ನಿಗದಿಪಡಿಸಿರುವ ತಂತ್ರಾಂಶದಲ್ಲಿ ಯಶಸ್ವಿಯಾಗಿ ದಾಖಲಿಸಲಾಗಿದೆ. ಈ ಪೈಕಿ 1,17,519 ಮತದಾರರ ವಿವರಗಳ ಪರಿಶೀಲನೆ ಮತ್ತು ಪರಿಷ್ಕರಣೆ ಕಾರ್ಯವು ಪ್ರಗತಿಯಲ್ಲಿದೆ ಎಂದು ಜಿಲ್ಲಾಧಿಕಾರಿಗಳು ಮಾಹಿತಿ ನೀಡಿದರು.

ಪರಿಷ್ಕರಣೆ ಹಂತದಲ್ಲಿರುವ 1,17,519 ಮತದಾರರ ಪೈಕಿ 72,694 ಮತದಾರರು ಬೇರೆ ಸ್ಥಳಗಳಿಗೆ ವಲಸೆ ಹೋಗಿರುವುದು ಕಂಡುಬಂದಿದೆ. ಅಲ್ಲದೆ, 28,368 ಮತದಾರರು ಮೃತಪಟ್ಟಿರುವ ಕುರಿತು ಮಾಹಿತಿ ಲಭ್ಯವಾಗಿದೆ. 7,050 ಮತದಾರರು ಎರಡು ಅಥವಾ ಅದಕ್ಕಿಂತ ಹೆಚ್ಚಿನ ಸ್ಥಳಗಳಲ್ಲಿ ನೋಂದಣಿಯಾಗಿರುವುದು ಪರಿಶೀಲನೆಯ ವೇಳೆ ಪತ್ತೆಯಾಗಿದೆ. ಉಳಿದ 7,253 ಮತದಾರರ ಮಾಹಿತಿ ಸಂಗ್ರಹಿಸಲು ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಂಡಿದ್ದು, ಅವರ ವಿವರಗಳನ್ನು ಪತ್ತೆಹಚ್ಚುವ ಕಾರ್ಯ ಮುಂದುವರಿದಿದೆ ಎಂದು ತಿಳಿಸಿದರು.

ಮತದಾರರ ಪಟ್ಟಿಯು ನಿಖರ, ದೋಷರಹಿತ ಹಾಗೂ ಸಮಗ್ರವಾಗಿರಬೇಕು ಎಂಬ ಉದ್ದೇಶದಿಂದ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಕೈಗೊಳ್ಳಲಾಗಿದೆ. ಮತದಾರರು ನೀಡಿರುವ ಗಣತಿ ನಮೂನೆಗಳಲ್ಲಿನ ಮಾಹಿತಿಯನ್ನು ಆನ್‌ಲೈನ್‌ನಲ್ಲಿ ದಾಖಲಿಸುವ ಕಾರ್ಯಕ್ಕೆ ಜಿಲ್ಲಾಡಳಿತ ಆದ್ಯತೆ ನೀಡಿದ್ದು, ಈವರೆಗೆ ನಮೂನೆ ಸಲ್ಲಿಸಿರುವ ಎಲ್ಲ ಮತದಾರರ ಮಾಹಿತಿಯನ್ನು ಗಣಕೀಕರಣ ಮಾಡುವ ಮೂಲಕ ಚಿಕ್ಕಬಳ್ಳಾಪುರ ಜಿಲ್ಲೆ ರಾಜ್ಯದಲ್ಲಿಯೇ ಮೊದಲ ಸ್ಥಾನವನ್ನು ಪಡೆದಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು. ಇನ್ನೂ ಮತದಾರರ ಪಟ್ಟಿಯ ಪರಿಷ್ಕರಣೆ ಕಾರ್ಯದಲ್ಲಿ ಭಾಗವಹಿಸದೆ ಬಾಕಿ ಉಳಿದಿರುವ ಮತದಾರರ ವಿವರಗಳನ್ನು ಸಂಗ್ರಹಿಸಲು ಹಾಗೂ ಅಗತ್ಯ ಗಣಕೀಕರಣ ಮತ್ತು ಪರಿಷ್ಕರಣೆ ಕಾರ್ಯ ಕೈಗೊಳ್ಳಲು ಜುಲೈ 29ರಿಂದ ಆಗುಸ್ಟ್ 8 ರವರೆಗೆ ಎರಡನೇ ಸುತ್ತಿನ ಮನೆ ಮನೆ ಭೇಟಿ ಹಾಗೂ ಮರುಪರಿಶೀಲನೆ ಕಾರ್ಯವನ್ನು ಆರಂಭಿಸಲಾಗುವುದು ಈ ಕಾರ್ಯವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಸಂಬಂಧಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಜುಲೈ 28ರಂದು ವಿಶೇಷ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಈ ವೇಳೆ ಅಪರ ಜಿಲ್ಲಾಧಿಕಾರಿ ಡಾ.ಎನ್ ಭಾಸ್ಕರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪ್ರಭಾರಿ ಸಹಾಯಕ ನಿರ್ದೇಶಕ ಮಂಜುನಾಥ್ ಎಂ ಆರ್ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಇದ್ದರು.

# ಜಿಲ್ಲೆಯಲ್ಲೇ ಮೊದಲ ಸ್ಥಾನಕ್ಕೇರಿಸಲು ಶಿಕ್ಷಕರ ಸಹಕಾರ ಅಗತ್ಯ: ಶಾಸಕ

ಶಿಡ್ಲಘಟ್ಟ

ತಾಲ್ಲೂಕನ್ನು ಜಿಲ್ಲೆಯಲ್ಲಿಯೇ ಶೈಕ್ಷಣಿಕವಾಗಿ ಮೊದಲ ಸ್ಥಾನಕ್ಕೇರಿಸುವ ಗುರಿಯನ್ನು ಹೊಂದಿದ್ದು, ಅದನ್ನು ಸಾಕಾರಗೊಳಿಸಲು ಸರ್ಕಾರಿ ಶಾಲಾ ಶಿಕ್ಷಕರು ಪ್ರಾಮಾಣಿಕವಾಗಿ ಸಹಕರಿಸಬೇಕು ಎಂದು ಶಾಸಕ ಬಿ.ಎನ್.ರವಿಕುಮಾರ್ ಹೇಳಿದರು.

ಮೇಲೂರಿನ ತಮ್ಮ ಗೃಹ ಕಚೇರಿಯಲ್ಲಿ ಸರ್ಕಾರಿ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಹಿಂದುಳಿದಿರುವ ಶಿಡ್ಲಘಟ್ಟ ತಾಲ್ಲೂಕನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಅಮೂಲ್ಯವಾಗಿದೆ. ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಅವರಲ್ಲಿ ಜ್ಞಾನ, ಮೌಲ್ಯಗಳು ಹಾಗೂ ಉತ್ತಮ ವ್ಯಕ್ತಿತ್ವವನ್ನು ಬೆಳೆಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಅವರ ಮಾರ್ಗದರ್ಶನದಿಂದ ವಿದ್ಯಾರ್ಥಿಗಳು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ನಾಡಿಗೆ ಕೀರ್ತಿ ತರುವಂತಾಗಬೇಕು ಎಂದು ಹೇಳಿದರು.

ಶಿಕ್ಷಕರಲ್ಲಿ ಗುಂಪುಗಾರಿಕೆಗೆ ಅವಕಾಶ ಇರಬಾರದು. ಪರಸ್ಪರ ಸಹಕಾರ, ಸಮನ್ವಯ ಹಾಗೂ ಕರ್ತವ್ಯನಿಷ್ಠೆಯಿಂದ ಕಾರ್ಯನಿರ್ವಹಿಸಿದರೆ ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಸಾಧ್ಯವಾಗುತ್ತದೆ. ತಾಲ್ಲೂಕಿನ ಶೈಕ್ಷಣಿಕ ಪ್ರಗತಿಗೆ ಶಿಕ್ಷಕರ ಸಹಕಾರ ಮತ್ತು ಸಮರ್ಪಣಾ ಮನೋಭಾವ ಅತ್ಯಗತ್ಯ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ಶಾಲಾ ಶಿಕ್ಷಕರ ಸಂಘದ ಪದಾಧಿಕಾರಿಗಳನ್ನು ಶಾಸಕ ಬಿ.ಎನ್.ರವಿಕುಮಾರ್ ಸನ್ಮಾನಿಸಿದರು.

ಸರ್ಕಾರಿ ನೌಕರರ ಸಂಘದ ರಾಜ್ಯ ಕಾರ್ಯದರ್ಶಿ ಕೆ.ಎನ್.ಸುಬ್ಬಾರೆಡ್ಡಿ, ಕೆಂಪೇಗೌಡ, ಗೌರವಾಧ್ಯಕ್ಷ ಅಕ್ಕಲರೆಡ್ಡಿ, ಮಂಜುನಾಥ್, ನರಸಿಂಹ ರೆಡ್ಡಿ, ಸಿ.ಎಂ.ಮುನಿರಾಜು ಬಿ.ಆರ್.ನಾರಾಯಣಸ್ವಾಮಿ, ಸರಸ್ವತಮ್ಮ, ಸುಂದರಾಚಾರಿ, ನಾಗರಾಜ್, ಖಜಾಂಚಿ ಬಾಲಚಂದ್ರ, ಸುದರ್ಶನ್, ಲಕ್ಷ್ಮೀಕಾಂತಮ್ಮ, ಸಹ ಕಾರ್ಯದರ್ಶಿ ಪದ್ಮಾವತಮ್ಮ, ಸದಸ್ಯರಾದ ಪಿಳ್ಳಣ್ಣ, ಸುಮಾ, ಸುರೇಶ್, ಶಿಕ್ಷಕರಾದ ಅಹಲ್ಯ, ತಿರುಮಲೇಶ್, ವೇಣುಗೋಪಾಲ್, ಅನ್ಸರ್ ಪಾಷಾ, ಸಿ.ಆರ್.ಪಿ ಮಂಜುನಾಥ್, ಎನ್.ಪಿ.ಎಸ್ ನೌಕರರ ಸಂಘದ ಅಧ್ಯಕ್ಷ ಗಜೇಂದ್ರ, ಕಾರ್ಯದರ್ಶಿ ನರಸಿಂಹರಾಜು ಹಾಜರಿದ್ದರು.

# ಹೈಮಾಸ್ಟ್ ದೀಪಗಳ ಉದ್ಘಾಟನೆ: ಜನತೆಗೆ ಸುರಕ್ಷತೆಯ ಭರವಸೆ ನೀಡಿದ ಶಾಸಕಿ

ಕೆಜಿಎಫ್



ನಗರದ ವಿವಿಧ ವಾರ್ಡ್‌ಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ನಿರ್ಮಿಸಲಾಗಿರುವ ಹೈಮಾಸ್ಟ್ ವಿದ್ಯುತ್ ದ್ವೀಪಗಳನ್ನು ಕೆಜಿಎಫ್ ಶಾಸಕಿ ಎಂ. ರೂಪಕಲಾ ಅವರು ಉದ್ಘಾಟಿಸಿದರು.

ಹೆಂಡ್ರೀಸ್ ಡ್ರೈವರ್ಸ್ ಲೈನ್ ಹಾಗೂ ಸ್ಕೂಲ್ ಆಫ್ ಮೈನ್ಸ್ ಎದುರುಗಡೆಯ ಬೃಹತ್ ಮೈದಾನದ ಬಳಿ ನಿರ್ಮಿಸಲಾದ ಹೈಮಾಸ್ಟ್ ದೀಪಗಳನ್ನು ಉದ್ಘಾಟಿಸಿ ಮಾತನಾಡಿದ ಶಾಸಕರು, "ಸ್ಕೂಲ್ ಆಫ್ ಮೈನ್ಸ್ ಮೈದಾನ ಹಾಗೂ ಪಾರ್ಕ್ ಭಾಗಗಳಿಗೆ ಸುಂದರ ವಿದ್ಯುತ್ ದೀಪಗಳ ಅಲಂಕಾರ ಮಾಡಲಾಗಿದ್ದು, ರಾತ್ರಿ ವೇಳೆಯಲ್ಲಿ ಕತ್ತಲೆಯಿಂದ ಕೂಡಿದ್ದ ಈ ಪ್ರದೇಶಗಳು ಈಗ ಬೆಳಕಿನಿಂದ ಕಂಗೊಳಿಸುವಂತೆ ಮಾಡಲಾಗಿದೆ" ಎಂದು ತಿಳಿಸಿದರು.

ನಗರದ ವಿವಿಧ ಪ್ರಮುಖ ಬೇಡಿಕೆಗಳು ಮತ್ತು ಜನದಟ್ಟಣೆಯ ಪ್ರದೇಶಗಳಲ್ಲಿ ಕತ್ತಲೆಯ ಸಮಸ್ಯೆ ನಿವಾರಿಸಲು ಹಾಗೂ ರಾತ್ರಿ ವೇಳೆ ಓಡಾಡುವ ಸಾರ್ವಜನಿಕರಿಗೆ ಮತ್ತು ವಾಹನ ಸವಾರರಿಗೆ ಅನುಕೂಲ ಕಲ್ಪಿಸಲು ಈ ಹೈಮಾಸ್ಟ್ ದೀಪಗಳನ್ನು ಅಳವಡಿಸಲಾಗಿದೆ.

ಕೆಜಿಎಫ್ ನಗರವನ್ನು ಸುರಕ್ಷಿತ ಮತ್ತು ಸುಂದರ ನಗರವನ್ನಾಗಿ ರೂಪುಗೊಳಿಸಲು ಹಂತ ಹಂತವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ ಎಂದು ತಿಳಿಸಿದರು. ಸ್ಥಳೀಯ ನಿವಾಸಿಗಳು ಶಾಸಕರ ಈ ಜನಪರ ಕಾರ್ಯಕ್ಕೆ ಹರ್ಷ ವ್ಯಕ್ತಪಡಿಸಿದ್ದಾರೆ.

<u>ಪಿಂಚಣಿ ಹಾಗೂ ಬಿಪಿಎಲ್ ಕಾರ್ಡ್ ಸಮಸ್ಯೆ ಪರಿಹಾರಕ್ಕೆ ಭರವಸೆ:</u> ರದ್ದಾಗಿರುವ ಪಿಂಚಣಿ ಹಾಗೂ ಬಿಪಿಎಲ್ ಕಾರ್ಡ್‌ಗಳ ಕುರಿತು ಮಾತನಾಡಿದ ಶಾಸಕರು, "ಶೀಘ್ರದಲ್ಲೇ ವಾರ್ಡ್‌ವಾರು ಸಭೆಗಳನ್ನು ಹಮ್ಮಿಕೊಂಡು ಸಾರ್ವಜನಿಕರಲ್ಲಿ ಸಂಪೂರ್ಣ ಅರಿವು ಮೂಡಿಸಲಾಗುವುದು. ಅರ್ಹ ಫಲಾನುಭವಿಗಳಿಂದ ಸೂಕ್ತ ದಾಖಲೆಗಳನ್ನು ಸಂಗ್ರಹಿಸಿ, ರದ್ದಾಗಿರುವ ಯೋಜನೆಗಳು ಹಾಗೂ ಸೌಲಭ್ಯಗಳು ಪುನಃ ಆರಂಭವಾಗುವಂತೆ ಮಾಡಲು ತಕ್ಷಣದ ಕ್ರಮ ಕೈಗೊಳ್ಳಲಾಗುವುದು" ಎಂದು ಭರವಸೆ ನೀಡಿದರು.

<u>ನಗರದ ಮೂಲಭೂತ ಸೌಕರ್ಯಕ್ಕೆ ಒತ್ತು:</u> ಕೆಜಿಎಫ್ ನಗರ ಪ್ರದೇಶದಲ್ಲಿ ರಾತ್ರಿ ವೇಳೆಯ ಸಂಚಾರವನ್ನು ಸುರಕ್ಷಿತವಾಗಿಸಲು ಮತ್ತು ಸಾರ್ವಜನಿಕರ ದೂರುಗಳಿಗೆ ಸ್ಪಂದಿಸಲು ಹೈಮಾಸ್ಟ್ ದೀಪಗಳ ಅಳವಡಿಕೆ ಮಹತ್ವದ ಹೆಜ್ಜೆಯಾಗಿದೆ. ಇದು ಕೇವಲ ಬೆಳಕಿನ ವ್ಯವಸ್ಥೆಯಲ್ಲ, ಬದಲಿಗೆ ನಗರದ ಸೌಂದರ್ಯೀಕರಣ ಮತ್ತು ಸುರಕ್ಷತೆಗೆ ನೀಡುತ್ತಿರುವ ಆದ್ಯತೆಯಾಗಿದೆ ಎಂದು ಕೆಜಿಎಫ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸನ್ ಹೇಳಿದರು.

<u>ಮಹಿಳಾ, ಜನಪ್ರತಿನಿಧಿಯ ಸಕ್ರಿಯತೆ:</u> ಶಾಸಕಿ ಎಂ. ರೂಪಕಲಾ ಅವರು ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳಿಗೆ ನಿರಂತರವಾಗಿ ಚಾಲನೆ ನೀಡುತ್ತಿರುವುದು ಅವರ ಕಾರ್ಯತತ್ಪರತೆಯನ್ನು ಬಿಂಬಿಸುತ್ತದೆ. ಸ್ಥಳೀಯ ಜನರಿಗೆ ಕೊಟ್ಟ ಮಾತಿನಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಲ್ಲಿ ಮುಂಚೂಣಿಯಲ್ಲಿದ್ದಾರೆ ಎಂಬುದಕ್ಕೆ ಈ ಕಾರ್ಯಕ್ರಮ ಉದಾಹರಣೆಯಾಗಿದೆ ಎಂದು ನಗರಸಭೆ ಮಾಜಿ ಅಧ್ಯಕ್ಷೆ ಇಂದಿರಾ ಗಾಂಧಿ ಹೇಳಿದರು.

ಸಾರ್ವಜನಿಕ ಸುರಕ್ಷತೆ ಮತ್ತು ಅಪರಾಧ ತಡೆ: ಪ್ರಮುಖ ವೃತ್ತಗಳು ಮತ್ತು ಜನದಟ್ಟಣೆ ಇರುವ ಪ್ರದೇಶಗಳಲ್ಲಿ ಹೈಮಾಸ್ಟ್ ದೀಪಗಳ ಅಳವಡಿಕೆಯಿಂದ ರಾತ್ರಿ ವೇಳೆ ಸಂಚರಿಸುವ ಮಹಿಳೆಯರು, ಮಕ್ಕಳು ಹಾಗೂ ಸಾರ್ವಜನಿಕರಿಗೆ ಹೆಚ್ಚಿನ ಭದ್ರತೆ ದೊರೆಯಲಿದೆ. ಇದು ಅಪರಾಧ ಚಟುವಟಿಕೆಗಳಿಗೆ ಕಡಿವಾಣ ಹಾಕಲು ಸಹಕಾರಿಯಾಗುತ್ತದೆ ಎಂದು ನಗರಸಭೆ ಮಾಜಿ ಅಧ್ಯಕ್ಷ ವಳ್ಳಲ್ ಮುನಿಸ್ವಾಮಿ ಹೇಳಿದರು.ಸ್ಥಳೀಯ ಮುಖಂಡರು, ವಿವಿಧ ಇಲಾಖೆಯ ಅಧಿಕಾರಿಗಳು, ವಾರ್ಡ್‌ನ ನಾಗರಿಕರು ಉಪಸ್ಥಿತರಿದ್ದರು.

30/07/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಇಂದಿನಿಂದ ರಾಘವೇಶ್ವರ ಶ್ರೀಗಳ ಚಾತುರ್ಮಾಸ್ಯ

ಗೋಕರ್ಣ

ಶ್ರೀ ರಾಮಚಂದ್ರಾಪುರ ಮಠದ ಪರಮಪೂಜ್ಯ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳವರ 33ನೇ ಚಾತುರ್ಮಾಸ್ಯ ವ್ರತವು ಜುಲೈ 29ರಿಂದ ಸೆಪ್ಟೆಂಬರ್ 26ರವರೆಗೆ 60 ದಿನಗಳ ಕಾಲ ಗೋಕರ್ಣದ ಅಶೋಕೆಯಲ್ಲಿ ನಡೆಯಲಿದೆ. ಈ ಬಾರಿ 'ಅನ್ನಬ್ರಹ್ಮ' ಎಂಬ ಪರಿಕಲ್ಪನೆಯೊಂದಿಗೆ ಚಾತುರ್ಮಾಸ್ಯ ಆಚರಿಸಲಾಗುತ್ತಿದ್ದು, ಅನ್ನದ ಮಹತ್ವ, ಆಹಾರದ ಮೌಲ್ಯ ಹಾಗೂ ಅನ್ನವನ್ನು ವ್ಯರ್ಥ ಮಾಡದಿರುವ ಕುರಿತು ಸಮಾಜಕ್ಕೆ ಜಾಗೃತಿ ಮೂಡಿಸುವ ಉದ್ದೇಶ ಹೊಂದಿದೆ.



ಜಗದ್ಗುರು ಆದಿಶಂಕರಾಚಾರ್ಯರು ಅನ್ನದ ಮಹತ್ವವನ್ನು ಸಾರಿರುವ ಹಿನ್ನೆಲೆಯಲ್ಲಿ, ಈ ಬಾರಿಯ ಚಾತುರ್ಮಾಸ್ಯದಲ್ಲಿ 'ಅನ್ನಂ ಬ್ರಹ್ಮೇತಿ ವ್ಯಜಾನಾತ್' ಎಂಬ ವೈದಿಕ ಸಂದೇಶವನ್ನು ಜನರಿಗೆ ತಲುಪಿಸಲಾಗುತ್ತಿದೆ. ಅನ್ನವನ್ನು ದೇವರಂತೆ ಪೂಜಿಸಿ ಗೌರವಿಸುವ ಸಂಸ್ಕೃತಿಯನ್ನು ಪುನರುಜ್ಜೀವನಗೊಳಿಸುವುದು ಚಾತುರ್ಮಾಸ್ಯದ ಪ್ರಮುಖ ಆಶಯವಾಗಿದೆ.

ಆಷಾಢ ಶುಕ್ಲ ಪೂರ್ಣಿಮೆಯಿಂದ ಭಾದ್ರಪದ ಶುಕ್ಲ ಪೂರ್ಣಿಮೆಯವರೆಗೆ ಸಾಂವತ್ಸರಿಕ ಆಚರಣೆಯಂತೆ ಚಾತುರ್ಮಾಸ್ಯ ವ್ರತ ಕೈಗೊಳ್ಳಲಿರುವ ಶ್ರೀಗಳು, ಅನ್ನವು ಕೇವಲ ಹಸಿವು ನೀಗಿಸುವ ಆಹಾರವಲ್ಲ; ಅದು ಜೀವನದ ಆಧಾರ, ಆರೋಗ್ಯದ ಮೂಲ ಹಾಗೂ ದೈವಸ್ವರೂಪ ಎಂಬ ಸಂದೇಶವನ್ನು ಸಾರಲಿದ್ದಾರೆ. ಅನ್ನ ಬೆಳೆಯಲು ದೀರ್ಘಕಾಲದ ಶ್ರಮ ಬೇಕಾಗುತ್ತದೆ. ಆದರೆ ಅದನ್ನು ವ್ಯರ್ಥ ಮಾಡಲು ಕ್ಷಣ ಸಾಕು. ಅನ್ನವನ್ನು ನಷ್ಟಪಡಿಸುವುದರಿಂದ ಉಂಟಾಗುವ ಪರಿಣಾಮಗಳ ಕುರಿತು ಜನರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳೂ ನಡೆಯಲಿವೆ.

ಕಳೆದ ವರ್ಷ 'ಸ್ವಭಾಷಾ ಚಾತುರ್ಮಾಸ'ದ ಮೂಲಕ ತಾಯ್ನುಡಿಯನ್ನು ತಪ್ಪಿಲ್ಲದೆ, ಶುದ್ಧವಾಗಿ ಮಾತನಾಡುವ ಮಹತ್ವವನ್ನು ಸಮಾಜಕ್ಕೆ ತಿಳಿಸಲಾಗಿತ್ತು. ಈ ಬಾರಿ ಆಹಾರವನ್ನು ಕೇಂದ್ರವಾಗಿಟ್ಟುಕೊಂಡು 'ಅನ್ನಬ್ರಹ್ಮ' ಚಾತುರ್ಮಾಸ್ಯವನ್ನು ಆಯೋಜಿಸಲಾಗಿದೆ.

ಚಾತುರ್ಮಾಸ್ಯದ 60 ದಿನಗಳ ಅವಧಿಯಲ್ಲಿ ಆಹಾರದ ವೈಜ್ಞಾನಿಕತೆ, ಸಾತ್ವಿಕ ಆಹಾರದ ಮಹತ್ವ, ಸರಿಯಾದ ಸಮಯದಲ್ಲಿ ಭೋಜನ ಮಾಡುವ ವಿಧಾನ, ಜಲಪಾನದ ನಿಯಮಗಳು, ಉಪವಾಸದ ವೈಜ್ಞಾನಿಕ ಮತ್ತು ಆಧ್ಯಾತ್ಮಿಕ ಮಹತ್ವ, ಊಟದ ನಂತರ ಪಾಲಿಸಬೇಕಾದ ಜೀವನಶೈಲಿ, ಆಹಾರವನ್ನು ವ್ಯರ್ಥ ಮಾಡದಿರುವುದು ಹಾಗೂ ಸಾಂಪ್ರದಾಯಿಕ ಮತ್ತು ಸಾವಯವ ಆಹಾರ ಪದ್ಧತಿಗಳ ಕುರಿತು ವಿಶೇಷ ಪ್ರವಚನಗಳು ಮತ್ತು ಜಾಗೃತಿ ಕಾರ್ಯಕ್ರಮಗಳು ನಡೆಯಲಿವೆ.

ಆಧುನಿಕ ಜೀವನಶೈಲಿಯಿಂದ ಹೆಚ್ಚುತ್ತಿರುವ ಅನಾರೋಗ್ಯ ಸಮಸ್ಯೆಗಳಿಗೆ ಸಾತ್ವಿಕ ಹಾಗೂ ಸಮತೋಲನದ ಆಹಾರ ಪದ್ಧತಿ ಪರಿಹಾರವಾಗಬಲ್ಲದು ಎಂಬ ಸಂದೇಶವನ್ನು ಚಾತುರ್ಮಾಸ್ಯದ ಮೂಲಕ ಸಾರಲಾಗುತ್ತಿದೆ. ಜಂಕ್ ಫುಡ್ ಸೇರಿದಂತೆ ಅನಾರೋಗ್ಯಕರ ಆಹಾರ ಪದ್ಧತಿಗಳು ಹೆಚ್ಚುತ್ತಿರುವ ಸಂದರ್ಭದಲ್ಲಿ, ಆರೋಗ್ಯಕರ ಆಹಾರದ ಮಹತ್ವದ ಕುರಿತು ಸಮಾಜದಲ್ಲಿ ಜಾಗೃತಿ ಮೂಡಿಸುವ ಪ್ರಯತ್ನ ಇದಾಗಿದೆ.

# ಖಾಸಗಿ ಹಣಕಾಸು ಸಂಸ್ಥೆಗಳ ಸಾಲದ ಒತ್ತಡಕ್ಕೆ ಕುಟುಂಬ ಬಲಿ

ಕೋಲಾರ

ಖಾಸಗಿ ಹಣಕಾಸು ಸಂಸ್ಥೆಗಳು ಹಾಗೂ ಸಾಲದ ಒತ್ತಡಕ್ಕೆ ಹೆದರಿ ಒಂದೇ ಕುಟುಂಬದ ನಾಲ್ವರು ಆತ್ಮಹತ್ಯೆಗೆ ಶರಣಾಗಿರುವ ದಾರುಣ ಘಟನೆ ಕೋಲಾರದಲ್ಲಿ ನಡೆದಿದೆ.

ಸಾಲದ ಬಾಧೆಯಿಂದ ಬೇಸತ್ತಿದ್ದ ತಾಯಿ ತನ್ನ ಇಬ್ಬರು ಮಕ್ಕಳೊಂದಿಗೆ ಜುಲೈ 25ರಂದು ಆತ್ಮಹತ್ಯೆ ಮಾಡಿಕೊಂಡಿದ್ದರು. ಕುಟುಂಬದ ಸದಸ್ಯರ ಸಾವಿನಿಂದ ತೀವ್ರವಾಗಿ ನೊಂದಿದ್ದ ತಂದೆಯೂ ಆತ್ಮಹತ್ಯೆಗೆ ಯತ್ನಿಸಿದ್ದರು. ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿತ್ತಾದರೂ, ಚಿಕಿತ್ಸೆ ಫಲಕಾರಿಯಾಗದೆ ಅವರು ಕೂಡ ಮೃತಪಟ್ಟಿದ್ದಾರೆ.

ಬೆಗ್ಲಿ ಬೆಣಜೇನಹಳ್ಳಿ ಗ್ರಾಮದ ಕುಟುಂಬವೊಂದು ದುರಂತದಲ್ಲಿ ಸಂಪೂರ್ಣವಾಗಿ ಸಾವಿಗೀಡಾಗಿದ್ದು, ಗ್ರಾಮದಲ್ಲಿ ಸೂತಕದ ಛಾಯೆ ಆವರಿಸಿದೆ. ಮೃತರನ್ನು ಪ್ರಮೀಳಾ (36), ಪುತ್ರಿ ಸ್ವಪ್ನ (22) ಹಾಗೂ ಪುತ್ರ ಚರಣ್ (18) ಎಂದು ಗುರುತಿಸಲಾಗಿದೆ. ಕುಟುಂಬದ ಮತ್ತೊಬ್ಬ ಸದಸ್ಯರೂ ಮೃತಪಟ್ಟಿರುವುದಾಗಿ ತಿಳಿದುಬಂದಿದೆ.

ಘಟನೆಗೆ ಸಂಬಂಧಿಸಿದಂತೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಕುಟುಂಬದ ಆತ್ಮಹತ್ಯೆಗೆ ನಿಖರ ಕಾರಣ ಹಾಗೂ ಸಾಲದ ಒತ್ತಡದ ಕುರಿತು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಅರ್ಜಿಸಲ್ಲಿಕೆ ಅವಧಿ ವಿಸ್ತರಣೆ

ಬೆಂಗಳೂರು

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಅರ್ಹ ಸಾಧಕ ಕ್ರೀಡಾಪಟುಗಳು ಹಾಗೂ ಇತರರಿಂದ ವಿವಿಧ ಪ್ರಶಸ್ತಿ ಮತ್ತು ಪ್ರೋತ್ಸಾಹಧನ ಯೋಜನೆಗಳಿಗೆ ಅರ್ಜಿ ಸಲ್ಲಿಸುವ ಅವಧಿಯನ್ನು ಆಗಸ್ಟ್ 31ರವರೆಗೆ ವಿಸ್ತರಿಸಿದೆ.



2025-26ನೇ ಸಾಲಿನ ಕ್ರೀಡಾ ವಿದ್ಯಾರ್ಥಿ ವೇತನ ಹಾಗೂ 2026-27ನೇ ಸಾಲಿನ ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಸಲು ಈ ಹಿಂದೆ ಜುಲೈ 31 ಕೊನೆಯ ದಿನವಾಗಿತ್ತು. ಇದೀಗ ಅರ್ಜಿ ಸಲ್ಲಿಕೆ ಅವಧಿಯನ್ನು ಆಗಸ್ಟ್ 31ರವರೆಗೆ ವಿಸ್ತರಿಸಲಾಗಿದೆ. ಅರ್ಹ ಕ್ರೀಡಾಪಟುಗಳು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಯುಕ್ತರಾದ ಎಂ.ಎನ್. ಅನುಚೇತ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.



ಹೆಬ್ಬಾಳ ಶಾಸಕರು ಆಗಿರುವ ಸಾರಿಗೆ ಸಚಿವರಾದ ಬೈರತಿ ಸುರೇಶ ರವರು ಹೆಬ್ಬಾಳ ಕ್ಷೇತ್ರದ ಕನಕನಗರ, ಭುವನೇಶ್ವರಿ ನಗರ, ಹೆಬ್ಬಾಳ 6ನೇ ಅಡ್ಡರಸ್ತೆ, ಹೆಬ್ಬಾಳ ಹಳೆ ಪೋಲೀಸ್ ಠಾಣೆ ರಸ್ತೆ, ಬಸವೇಶ್ವರ ಬಡಾವಣೆ 2ನೇ ಅಡ್ಡರಸ್ತೆ ಮತ್ತು ಭೂಪಸಂದ್ರದ ಪೋಸ್ಟಲ್ ಕಾಲೋನಿಯಲ್ಲಿ ಮಂಗಳವಾರ ಕಾಂಕ್ರೀಟ್ ರಸ್ತೆ, ಒಳಚರಂಡಿ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಕ್ಷೇತ್ರದ ಹಿರಿಯ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಹಾಗೂ ಜಿ.ಬಿ.ಎ ಅಧಿಕಾರಿಗಳು ಇದ್ದರು.

# ಸಿಬ್ಬಂದಿ ಬಲವರ್ಧನೆಗೆ ಕ್ರಮ

ಬೆಂಗಳೂರು

ಪಾಲಿಕೆಯಲ್ಲಿ ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ಸುಧಾರಿಸುವ ನಿಟ್ಟಿನಲ್ಲಿ ವಾರ್ಡ್ ಮಟ್ಟದಲ್ಲಿ ಸಿಬ್ಬಂದಿ ಬಲವರ್ಧನೆಗೆ ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವೃಂದ ಮತ್ತು ನೇಮಕಾತಿ ನಿಯಮಾವಳಿ ಸಮಿತಿಯ ಅಧ್ಯಕ್ಷರಾದ ಟಿ.ಎಂ. ವಿಜಯಭಾಸ್ಕರ್, ಐಎಎಸ್ (ನಿವೃತ್ತ) ಅವರ ಅಧ್ಯಕ್ಷತೆಯಲ್ಲಿ ಹಾಗೂ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಅವರ ನೇತೃತ್ವದಲ್ಲಿ ಪಾಲಿಕೆಯಲ್ಲಿ ಮಂಜೂರಾಗಿರುವ, ಖಾಲಿ ಇರುವ ಹಾಗೂ ಹೆಚ್ಚುವರಿಯಾಗಿ ಅಗತ್ಯವಿರುವ ಹುದ್ದೆಗಳ ಕುರಿತು ಅಧಿಕಾರಿಗಳೊಂದಿಗೆ ಮಹತ್ವದ ಸಭೆ ನಡೆಯಿತು.



ಬೆಂಗಳೂರಿನಲ್ಲಿ ಈ ಹಿಂದೆ 198 ವಾರ್ಡ್‌ಗಳಿದ್ದ ಸಂಖ್ಯೆ ಇದೀಗ 369ಕ್ಕೆ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ವಾರ್ಡ್ ಮಟ್ಟದಲ್ಲಿ ನೇರ ಕಾರ್ಯಾಚರಣೆ ಮತ್ತು ಮೇಲ್ವಿಚಾರಣೆ ನಡೆಸಲು ಎದುರಾಗಿರುವ ಸಿಬ್ಬಂದಿ ಕೊರತೆಯನ್ನು ನಿವಾರಿಸುವುದು ಸಭೆಯ ಪ್ರಮುಖ ಉದ್ದೇಶವಾಗಿತ್ತು ಎಂದು ಸಮಿತಿಯ ಅಧ್ಯಕ್ಷರು ತಿಳಿಸಿದರು.

ಪಾಲಿಕೆಯ ವಿವಿಧ ವಿಭಾಗಗಳ ಮುಖ್ಯಸ್ಥರು ತಮ್ಮ ಇಲಾಖೆಯಲ್ಲಿ ಮಂಜೂರಾಗಿರುವ ಹುದ್ದೆಗಳು, ಖಾಲಿ ಇರುವ ಹುದ್ದೆಗಳು ಹಾಗೂ ಪಾಲಿಕೆಗೆ ಹೆಚ್ಚುವರಿ ಆರ್ಥಿಕ ಹೊರೆಯಾಗದ ರೀತಿಯಲ್ಲಿ ಅತ್ಯವಶ್ಯಕವಾಗಿರುವ ಹುದ್ದೆಗಳ ವಿವರಗಳನ್ನು ಸಲ್ಲಿಸುವಂತೆ ಸೂಚಿಸಲಾಯಿತು. ಈ ಹಿನ್ನೆಲೆಯಲ್ಲಿ ಕಸ ನಿರ್ವಹಣೆ ಸೇರಿದಂತೆ ವಿವಿಧ ಸಾರ್ವಜನಿಕ ಸೇವೆಗಳಿಗೆ ಸಂಬಂಧಿಸಿದಂತೆ ಆರೋಗ್ಯ ಮೇಲ್ವಿಚಾರಕರು, ಹಿರಿಯ ಆರೋಗ್ಯ ಪರಿವೀಕ್ಷಕರು, ಕಿರಿಯ ಆರೋಗ್ಯ ಪರಿವೀಕ್ಷಕರು, ಕಿರಿಯ ಅಭಿಯಂತರರು ಹಾಗೂ ಕೆಲಸದ ಮೇಲ್ವಿಚಾರಕರ ಹುದ್ದೆಗಳಿಗೆ ಹೆಚ್ಚಿನ ಆದ್ಯತೆ ನೀಡಿ, ಅಗತ್ಯವಿರುವ ಹುದ್ದೆಗಳ ಸಂಖ್ಯೆಯ ಮಾಹಿತಿಯನ್ನು ಅಧಿಕಾರಿಗಳಿಂದ ಪಡೆಯಲಾಯಿತು.

# ಪಂಡಿತಾರಾಧ್ಯರು ಶಿವನ ಪ್ರತಿನಿಧಿಗಳು: ಮಂಜುನಾಥ ಬಳ್ಳಾರಿ

ಬೆಂಗಳೂರು

ಕೈಲಾಸ ಮಾನಸ ಸರೋವರ ಯಾತ್ರೆ ಮಾಡಿ ತಮ್ಮ ಅನುಭವಗಳನ್ನು ಶಿಷ್ಯ ಕೋಟಿಗಳಲ್ಲಿ ಆಧ್ಯಾತ್ಮಿಕ ಸೆಲೆ ತುಂಬುತ್ತಿರುವ ಶ್ರೀ ಮದ್ ಗಿರಿರಾಜ ಸೂರ್ಯ ಸಿಂಹಾಸನಾಧೀಶ್ವರರಾದ ಡಾ.ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರು ಸಾಕ್ಷಾತ್ ಶಿವನ ಪ್ರತಿನಿಧಿಗಳಾಗಿದ್ದಾರೆ ಎಂದು ರಾಜ್ಯದ ಹಿರಿಯ ಕೆಎಎಸ್ ಅಧಿಕಾರಿ ಮಂಜುನಾಥ ಬಳ್ಳಾರಿ ಭಾವುಕರಾಗಿ ನುಡಿದರು.



ಇಲ್ಲಿನ ವಿಜಯನಗರದಲ್ಲಿರುವ ಸುಜ್ಞಾನ ಮಂಟಪದಲ್ಲಿ ಆಯೋಜಿಸಿದ್ದ ಇಷ್ಟಲಿಂಗ ಮಹಾಪೂಜೆ ಹಾಗೂ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಆಶೀರ್ವಚನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗುರುಪೂರ್ಣಿಮೆ ಪ್ರಯುಕ್ತ ಶ್ರೀ ಮದ್ ಗಿರಿರಾಜ ಸೂರ್ಯ ಮಹಾಸಿಂಹಾಸನಾಧೀಶ್ವರ 1008 ಡಾ.ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರು ಇಲ್ಲಿ ಕೈಲಾಸವನ್ನೇ ಸೃಷ್ಟಿಸಿದ್ದಾರೆ.

ರೇಣುಕಾದಿ ಆಚಾರ್ಯರು, ಬಸವಾದಿ ಶರಣರ ಅಪೂರ್ವ ಕಾರ್ಯಕ್ರಮ ಇದಾಗಿದೆ. ಕೈಲಾಸ ಮಾನಸ ಸರೋವರ ಯಾತ್ರೆ ಮಾಡಿರುವ ಪೂಜ್ಯರು ಶಿವನ ಪ್ರತಿನಿಧಿಯಾಗಿ ಆಶೀರ್ವಚನ ನೀಡಿದ್ದಾರೆ. ಕಾಯಕವೇ ಕೈಲಾಸ ಎಂದರೆ ಪೂಜ್ಯರ ಸನ್ನಿಧಾನವೇ ಆಗಿದೆ ಎಂದರು.

ದೇಶದ ಉದ್ದಗಲಕ್ಕೆ ಸಂಚರಿಸಿ ಧರ್ಮ ಬೋಧನೆ ಮಾಡಿರುವ ಪೂಜ್ಯರು ಜನರ ಜೀವನಕ್ಕೆ ದಾರಿ ತೋರಿಸಿದ್ದಾರೆ. ಇಲ್ಲಿಯೂ ಕರುಣಾಪೂರ್ಣವಾಗಿರುವ ಆಶೀರ್ವಚನ ಮಾಡಿದ್ದಾರೆ. ಶ್ರೀಶೈಲ ಮಠಕ್ಕೂ ನಮಗೂ ಸಾಕಷ್ಟು ಅವಿನಾಭಾವ ಸಂಬಂಧವಿದೆ ಎಂದರು.

ಈ ಸಂದರ್ಭದಲ್ಲಿ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಮರ್ಥ್ ಶಾಮನೂರು, ಡಾ.ವಿಜಯಲಕ್ಷ್ಮಿ ಬಾಳೆಹೊನ್ನೂರು, ಜಿಲ್ಲಾಧಿಕಾರಿಗಳು, ವಿಶ್ವನಾಥ ಸೇರಿದಂತೆ ಅನೇಕ ಗಣ್ಯಮಾನ್ಯರು ಮತ್ತು ಪೂಜ್ಯರು ಇದ್ದರು.

# ಪಿಡಿಓಗಳಿಂದ ಮೋಜು: ಸಚಿವರಿಂದ ಕಾರಣ ಕೇಳಿ ನೋಟೀಸ್

ಬೆಂಗಳೂರು

ಬೆಂಗಳೂರು ಗ್ರಾಮಾಂತರ ಜಿಲ್ಲೆ ನೆಲಮಂಗಲ ತಾಲೂಕಿನ ಹಲವು ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳು ಮತ್ತು ಸಿಬ್ಬಂದಿ, ಕರ್ತವ್ಯದ ಅವಧಿಯಲ್ಲಿ ಕಚೇರಿಯಿಂದ ದೂರದ ಪವಿತ್ರ ಕ್ಷೇತ್ರದಲ್ಲಿ ಮದ್ಯ, ಮಾಂಸ ಸೇವಿಸಿ ಮೋಜು ಮಾಡಿದ್ದರ ಕುರಿತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಕಾರಣ ಕೇಳಿ ನೋಟೀಸ್ ನೀಡಿದ್ದಾರೆ.



ಸಚಿವರಾದ ಈಶ್ವರ ಬಿ.ಖಂಡ್ರೆ ಇವರು ಈ ಕುರಿತು ನೋಟೀಸ್ ಕಳುಹಿಸಿದ್ದು, ಸಿದ್ದರಬೆಟ್ಟದ ಬಳಿ ಸಾರ್ವಜನಿಕ ಸ್ಥಳದಲ್ಲಿ ಮದ್ಯ ಸೇವಿಸಿ, ಮಾಂಸಾಹಾರ ಸೇವಿಸಿ ಮೋಜು ಮಾಡಿದ್ದಾರೆ ಎಂದು ಮಾಧ್ಯಮಗಳಲ್ಲಿ ವಿಡಿಯೋ ಸಹಿತ ವರದಿ ಪ್ರಸಾರವಾಗಿದೆ. ಈ ವರದಿಯನ್ನು ಸಚಿವರ ಕಚೇರಿಯಿಂದ ಜು.26 ರಂದೇ ಇಲಾಖೆಯ ಉನ್ನತಾಧಿಕಾರಿಗಳಿರುವ ಅಧಿಕೃತ ವಾಟ್ಸ್ ಅಪ್ ಗ್ರೂಪ್ ಗೆ ಪೋಸ್ಟ್ ಮಾಡಿಸಲಾಗಿದೆ. ಈ ಬಗ್ಗೆ ತನಿಖೆ ಮಾಡಿ, ಆರೋಪಿತ ಅಧಿಕಾರಿ ಸಿಬ್ಬಂದಿಗೆ ಕಾರಣ ಕೇಳಿ ನೋಟಿಸ್ ನೀಡಿ ಕ್ರಮ ವಹಿಸುವಂತೆ ಮೌಖಿಕ ಸೂಚನೆ ನೀಡಿರುವುದಾಗಿ ಸಚಿವರು ತಿಳಿಸಿದ್ದಾರೆ.

ಈ ಅಧಿಕಾರಿ ಮತ್ತು ಸಿಬ್ಬಂದಿ ನೋಟಿಸ್ ಗೆ ನೀಡುವ ಉತ್ತರ ಪರಿಶೀಲಿಸಿ, ಇವರೆಲ್ಲರೂ ಕರ್ತವ್ಯದ ಸಮಯದಲ್ಲಿ ಕಚೇರಿ ಬಿಟ್ಟು ಒಂದು ಕಡೆ ಸೇರಿ ಮೋಜು ಮಸ್ತಿ ಮಾಡಿರುವುದು ಮೇಲ್ನೋಟಕ್ಕೆ ಸಾಬೀತಾದಲ್ಲಿ, ತಕ್ಷಣವೇ ಅವರೆಲ್ಲರನ್ನೂ ಅಮಾನತು ಮಾಡಲಾಗುತ್ತದೆ. ಅಲ್ಲದೆ ವಿಚಾರಣೆ ತನಿಖೆ ನಡೆಸಲು ಮತ್ತು ಇನ್ನು ಮುಂದೆ ಇಲಾಖೆಯ ಯಾವುದೇ ಅಧಿಕಾರಿ ಸಿಬ್ಬಂದಿ ಕಚೇರಿಯ ಅವಧಿಯಲ್ಲಿ ಜನರ ಅಹವಾಲು ಆಲಿಸದೆ, ಕರ್ತವ್ಯಲೋಪ ಎಸಗದಂತೆ ಕಟ್ಟೆಚ್ಚರಿಕೆ ನೀಡಲು ಸಚಿವರು ಸೂಚಿಸಿದ್ದಾರೆ.

# 'ಅಪಾರ್ಟ್‌ಮೆಂಟ್‌ಗಳಿಗೆ ಸಂಚಾರಿ ಕಾವೇರಿ ನೀರು'

ಬೆಂಗಳೂರು

ನಗರದ ಅಪಾರ್ಟ್‌ಮೆಂಟ್‌ಗಳಿಗೆ ಶುದ್ಧ ಕುಡಿಯುವ ನೀರಿನ ಪೂರೈಕೆಯನ್ನು ಮತ್ತಷ್ಟು ಸುಗಮಗೊಳಿಸುವ ನಿಟ್ಟಿನಲ್ಲಿ 'ಸಂಚಾರಿ ಕಾವೇರಿ' ಸೇವೆಯಡಿ ದೀರ್ಘಾವಧಿ ನೀರು ಪೂರೈಕೆ ಒಪ್ಪಂದ ವ್ಯವಸ್ಥೆ ರೂಪಿಸುವಂತೆ ಬೆಂಗಳೂರು ಜಲಮಂಡಳಿ ಅಧ್ಯಕ್ಷೆ ಡಾ. ಎನ್. ಮಂಜುಳ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಬೆಂಗಳೂರು ಅಪಾರ್ಟ್‌ಮೆಂಟ್ಸ್ ಫೆಡರೇಶನ್ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ನೀರು ಪೂರೈಕೆ, ಸಂಸ್ಕರಿತ ನೀರಿನ ಮರುಬಳಕೆ ಸೇರಿದಂತೆ ಅಪಾರ್ಟ್‌ಮೆಂಟ್‌ಗಳಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಸಮಗ್ರ ಚರ್ಚೆ ನಡೆಸಲಾಯಿತು.

ಸಭೆಯಲ್ಲಿ ನಗರದ ಪೂರ್ವ ಭಾಗದಲ್ಲಿ ಖಾಸಗಿ ನೀರಿನ ಟ್ಯಾಂಕರ್‌ಗಳು ನೀರಿನ ದರ ಹೆಚ್ಚಿಸುತ್ತಿರುವುದಲ್ಲದೆ, ಅಪಾರ್ಟ್‌ಮೆಂಟ್‌ಗಳೊಂದಿಗೆ ದೀರ್ಘಾವಧಿ ಒಪ್ಪಂದ ಮಾಡಿಕೊಳ್ಳುವಂತೆ ಒತ್ತಡ ಹೇರುತ್ತಿರುವ ಬಗ್ಗೆ ಫೆಡರೇಶನ್ ಪ್ರತಿನಿಧಿಗಳು ಅಧ್ಯಕ್ಷರ ಗಮನಕ್ಕೆ ತಂದರು. ಜಲಮಂಡಳಿಯ 'ಸಂಚಾರಿ ಕಾವೇರಿ' ಸೇವೆಯಡಿ ಬೃಹತ್ ನೀರು ಬಳಕೆದಾರರು ಪ್ರತಿದಿನ ಪ್ರತ್ಯೇಕವಾಗಿ ನೀರು ಕಾಯ್ದಿರಿಸಬೇಕಾಗಿರುವುದರಿಂದ ಅಪಾರ್ಟ್‌ಮೆಂಟ್ ನಿವಾಸಿಗಳಿಗೆ ಅನಾನುಕೂಲವಾಗುತ್ತಿದೆ ಎಂದು ವಿವರಿಸಿದರು.



ಈ ಹಿನ್ನೆಲೆಯಲ್ಲಿ ಅಪಾರ್ಟ್‌ಮೆಂಟ್‌ಗಳಿಗೆ ಜಲಮಂಡಳಿಯಿಂದ ದೀರ್ಘಾವಧಿ ನೀರು ಪೂರೈಕೆ ಒಪ್ಪಂದದ ವ್ಯವಸ್ಥೆ ಕಲ್ಪಿಸಲು ಅಗತ್ಯ ಕರಡು ಒಪ್ಪಂದ ಸಿದ್ಧಪಡಿಸುವಂತೆ ಡಾ. ಎನ್. ಮಂಜುಳ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಇದರಿಂದ ಅಪಾರ್ಟ್‌ಮೆಂಟ್‌ಗಳಿಗೆ ನಿರಂತರ ಹಾಗೂ ವಿಶ್ವಾಸಾರ್ಹ ರೀತಿಯಲ್ಲಿ ಶುದ್ಧ ಕುಡಿಯುವ ನೀರು ಪೂರೈಸಲು ಸಾಧ್ಯವಾಗುವುದರ ಜೊತೆಗೆ ಖಾಸಗಿ ನೀರಿನ ಟ್ಯಾಂಕರ್‌ಗಳ ಮೇಲಿನ ಅವಲಂಬನೆಯೂ ಕಡಿಮೆಯಾಗಲಿದೆ ಎಂದು ಅವರು ತಿಳಿಸಿದರು.

ಅಪಾರ್ಟ್‌ಮೆಂಟ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಕೇಂದ್ರೀಕೃತ ಒಳಚರಂಡಿ ಸಂಸ್ಕರಣಾ ಘಟಕಗಳ ಮೂಲಕ ಉತ್ಪಾದನೆಯಾಗುತ್ತಿರುವ ಸಂಸ್ಕರಿತ ನೀರನ್ನು ಹೆಚ್ಚು ಪರಿಣಾಮಕಾರಿಯಾಗಿ ಬಳಸುವ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಯಿತು.

ಅಪಾರ್ಟ್‌ಮೆಂಟ್‌ಗಳಲ್ಲಿ ಉತ್ಪಾದನೆಯಾಗುವ ಸಂಸ್ಕರಿತ ನೀರನ್ನು ಸಮೀಪದಲ್ಲಿರುವ ಕೈಗಾರಿಕೆಗಳು, ಶಿಕ್ಷಣ ಸಂಸ್ಥೆಗಳು, ದೊಡ್ಡ ವಾಣಿಜ್ಯ ಸಂಕೀರ್ಣಗಳು ಹಾಗೂ ಇತರೆ ಬೃಹತ್ ನೀರು ಬಳಕೆದಾರರಿಗೆ ಪೂರೈಸುವ ಸಾಧ್ಯತೆಗಳ ಕುರಿತು ಸಮಗ್ರ ಅಧ್ಯಯನ ನಡೆಸುವಂತೆ ಡಾ. ಎನ್. ಮಂಜುಳ ಅವರು ಮುಖ್ಯ ಅಭಿಯಂತರರಿಗೆ ಸೂಚಿಸಿದರು.

ಪ್ರದೇಶವಾರು ಬೃಹತ್ ನೀರು ಬಳಕೆದಾರರನ್ನು ಗುರುತಿಸಿ, ಅಪಾರ್ಟ್‌ಮೆಂಟ್‌ಗಳ ಸಂಸ್ಕರಣಾ ಘಟಕಗಳೊಂದಿಗೆ ಸಂಪರ್ಕ ಕಲ್ಪಿಸುವ ಕಾರ್ಯಯೋಜನೆ ಸಿದ್ಧಪಡಿಸುವಂತೆ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಕ್ರಮದಿಂದ ಶುದ್ಧ ಕುಡಿಯುವ ನೀರಿನ ಮೇಲಿನ ಒತ್ತಡ ಕಡಿಮೆಯಾಗುವುದರ ಜೊತೆಗೆ ಸಂಸ್ಕರಿತ ನೀರಿನ ಮರುಬಳಕೆಗೆ ಉತ್ತೇಜನ ದೊರೆಯಲಿದೆ ಎಂದು ಅವರು ಹೇಳಿದರು.

ಸಭೆಯಲ್ಲಿ ಜಲಮಂಡಳಿಯ ಪ್ರಧಾನ ಮುಖ್ಯ ಅಭಿಯಂತರರಾದ ದಲಾಯತ್, ಬೆಂಗಳೂರು ಅಪಾರ್ಟ್‌ಮೆಂಟ್ಸ್ ಫೆಡರೇಶನ್ ಅಧ್ಯಕ್ಷರಾದ ಸತೀಶ್ ಮಲ್ಯ, ಪ್ರಧಾನ ಕಾರ್ಯದರ್ಶಿ ಕೆ. ಅರುಣ್ ಕುಮಾರ್, ಪದಾಧಿಕಾರಿಗಳಾದ ಪ್ರಸಾದ್ ಎಲ್. ವಿ., ರಾಜೇಶ್ ರಾಮಮೂರ್ತಿ, ಪ್ರಭು ಪಾಟೀಲ್, ಸ್ಮರಣ್ ಮೂಡಬಿದ್ರೆ ಸೇರಿದಂತೆ ಜಲಮಂಡಳಿಯ ಮುಖ್ಯ ಅಭಿಯಂತರರು ಉಪಸ್ಥಿತರಿದ್ದರು.



ಮಂಗಳವಾರ ಬಾಗೇಪಲ್ಲಿ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಚಿಕ್ಕಬಳ್ಳಾಪುರ ಜಿಲ್ಲಾ ವಾರ್ತಾಧಿಕಾರಿ ಎಂ.ಆರ್. ಮಂಜುನಾಥ್, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಖಜಾಂಚಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಎಂ. ವಾಸುದೇವ ಹೊಳ್ಳ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಕಾಗತಿ ನಾಗರಾಜ್, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಎನ್.ಚಂದ್ರಶೇಖರ್, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಜೆ.ಕೆ.ಆನಂದ್, ತಾಲ್ಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಆರ್.ಹನುಮಂತರೆಡ್ಡಿ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

# 'ಆಗಸ್ಟ್ 15ರೊಳಗೆ ಖಾಲಿ ನಿವೇಶನಗಳನ್ನು ಮಾಲೀಕರೇ ಸ್ವಚ್ಛಗೊಳಿಸಬೇಕು'

ಬೆಂಗಳೂರು

ಬೆಂಗಳೂರು ನಗರವನ್ನು ಸ್ವಚ್ಛ, ಸುಂದರ ಹಾಗೂ ವಾಸಯೋಗ್ಯ ನಗರವನ್ನಾಗಿಸುವ ಉದ್ದೇಶದಿಂದ ಆಗಸ್ಟ್ 2026ರಲ್ಲಿ 'ತ್ಯಾಜ್ಯದಿಂದ ಸ್ವಾತಂತ್ರ್ಯ' ಅಭಿಯಾನ ಹಮ್ಮಿಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ನಗರದ ಎಲ್ಲಾ ಖಾಲಿ ನಿವೇಶನಗಳ ಮಾಲೀಕರು ತಮ್ಮ ನಿವೇಶನಗಳನ್ನು ಆಗಸ್ಟ್ 15ರೊಳಗೆ ಕಡ್ಡಾಯವಾಗಿ ಸ್ವಚ್ಛಗೊಳಿಸುವಂತೆ ಸೂಚಿಸಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯಲ್ಲಿರುವ ಎಲ್ಲಾ ನಗರ ಪಾಲಿಕೆಗಳು ಹಾಗೂ ಇತರೆ ಸಂಸ್ಥೆಗಳ ವತಿಯಿಂದ ನಗರದ ರಸ್ತೆಗಳಲ್ಲಿ ಕಂಡುಬರುವ ಕಪ್ಪುಚುಕ್ಕೆಗಳು, ಕಟ್ಟಡ ಮತ್ತು ಭಗ್ನಾವಶೇಷ ತ್ಯಾಜ್ಯ, ಮರದ ಕೊಂಬೆಗಳು, ವಿದ್ಯುತ್ ಕಂಬಗಳು ಹಾಗೂ ಪೈಪುಗಳನ್ನು ಸಾಮೂಹಿಕವಾಗಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಘನತ್ಯಾಜ್ಯ ನಿರ್ವಹಣಾ ಉಪವಿಧಿಗಳು-2020ರ ಉಪವಿಧಿ 18(1)(ಬಿ)ರ ಅನ್ವಯ ಖಾಲಿ ನಿವೇಶನಗಳನ್ನು ಸ್ವಚ್ಛ ಹಾಗೂ ನೈರ್ಮಲ್ಯಯುತ ಸ್ಥಿತಿಯಲ್ಲಿ ನಿರ್ವಹಿಸುವುದು ಮಾಲೀಕರ ಕಡ್ಡಾಯ ಜವಾಬ್ದಾರಿಯಾಗಿದೆ. ಹೀಗಾಗಿ, ನಿವೇಶನಗಳಲ್ಲಿ ಶೇಖರಣೆಯಾಗಿರುವ ತ್ಯಾಜ್ಯ ಹಾಗೂ ಕಟ್ಟಡದ ಅವಶೇಷಗಳನ್ನು ಆಗಸ್ಟ್ 15ರೊಳಗೆ ಮಾಲೀಕರೇ ತೆರವುಗೊಳಿಸಬೇಕು.



ನಿಗದಿತ ಅವಧಿಯೊಳಗೆ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸದಿದ್ದಲ್ಲಿ, ನಗರ ಪಾಲಿಕೆಯ ವತಿಯಿಂದ ತ್ಯಾಜ್ಯ ಮತ್ತು ಭಗ್ನಾವಶೇಷಗಳನ್ನು ತೆರವುಗೊಳಿಸಿ, ಅದಕ್ಕೆ ತಗಲುವ ವೆಚ್ಚವನ್ನು ನಿವೇಶನದ ವಿಸ್ತೀರ್ಣ ಹಾಗೂ ತೆರವುಗೊಳಿಸಿದ ತ್ಯಾಜ್ಯದ ಪ್ರಮಾಣಕ್ಕೆ ಅನುಗುಣವಾಗಿ ಆಸ್ತಿ ತೆರಿಗೆಯೊಂದಿಗೆ ವಸೂಲಿ ಮಾಡಲಾಗುವುದು. ತೆರಿಗೆ ಬಾಕಿಯನ್ನು ಕರ್ನಾಟಕ ಭೂಕಂದಾಯ ಕಾಯ್ದೆ, 1964ರ ಅನ್ವಯ ವಸೂಲಿ ಮಾಡಲಾಗುವುದು.

ಆಗಸ್ಟ್ 15ರೊಳಗೆ ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸದಿರುವುದನ್ನು ಸಾರ್ವಜನಿಕರು ಗಮನಿಸಿದಲ್ಲಿ, ಅಂತಹ ನಿವೇಶನಗಳ ಛಾಯಾಚಿತ್ರದೊಂದಿಗೆ ಜಿಪಿಎಸ್ ಸ್ಥಳ ನಿರ್ದೇಶಾಂಕಗಳನ್ನು ವಾಟ್ಸ್‌ಆಪ್ ಚಾಟ್‌ಬಾಟ್ ಸಂಖ್ಯೆ +91-9448197197ಕ್ಕೆ ಕಳುಹಿಸಿ ದೂರು ಸಲ್ಲಿಸಬಹುದು. ದೂರುದಾರರ ಮಾಹಿತಿಯನ್ನು ಗೌಪ್ಯವಾಗಿ ಇಡಲಾಗುವುದು.

ನಿವೇಶನಗಳನ್ನು ಸ್ವಚ್ಛಗೊಳಿಸಿದ ಬಳಿಕ ಮಾಲೀಕರು ಸುತ್ತಮುತ್ತ ಬೇಲಿ ಅಥವಾ ಕಾಂಪೌಂಡ್ ಗೋಡೆ ನಿರ್ಮಿಸಿಕೊಂಡು, ಅನಧಿಕೃತವಾಗಿ ತ್ಯಾಜ್ಯ ವಿಲೇವಾರಿ ಮಾಡದಂತೆ ಅಗತ್ಯ ವ್ಯವಸ್ಥೆ ಕಲ್ಪಿಸಿಕೊಳ್ಳಬೇಕು ಎಂದು ಸೂಚಿಸಲಾಗಿದೆ.

ಸ್ವಚ್ಛ, ಸುಂದರ ಹಾಗೂ ವಾಸಯೋಗ್ಯ ಬೆಂಗಳೂರಿನ ನಿರ್ಮಾಣಕ್ಕೆ ಸಾರ್ವಜನಿಕರು ಸಹಕರಿಸಿ ಕೈಜೋಡಿಸುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

# ವಿಶೇಷ ರೈಲಿಗೆ ಅನುಮೋದನೆ

ಹುಬ್ಬಳ್ಳಿ

ಮುಂಬರಲಿರುವ ಓಣಂ ಹಬ್ಬದ ಹಿನ್ನೆಲೆಯಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಯಂತ್ರಿಸಲು ಶ್ರೀ ಸಿದ್ಧಾರೂಢ ಸ್ವಾಮೀಜಿ ಹುಬ್ಬಳ್ಳಿ ಮತ್ತು ಕೊಟ್ಟಾಯಂ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲುಗಳ ಸಂಚಾರಕ್ಕೆ ರೈಲ್ವೆ ಮಂಡಳಿ ಅನುಮೋದನೆ ನೀಡಿದೆ.

ರೈಲು ಸಂಖ್ಯೆ 07351/07352 ಹುಬ್ಬಳ್ಳಿ-ಕೊಟ್ಟಾಯಂ-ಹುಬ್ಬಳ್ಳಿ ವಿಶೇಷ ಎಕ್ಸ್‌ಪ್ರೆಸ್ ಒಂದು ಟ್ರಿಪ್ ಸಂಚರಿಸಲಿದೆ. ರೈಲು ಸಂಖ್ಯೆ 07351 ಹುಬ್ಬಳ್ಳಿ-ಕೊಟ್ಟಾಯಂ ವಿಶೇಷ ಎಕ್ಸ್‌ಪ್ರೆಸ್ ಆಗಸ್ಟ್ 25ರಂದು ಸಂಜೆ 6.30ಕ್ಕೆ ಹುಬ್ಬಳ್ಳಿಯಿಂದ ಹೊರಟು, ಮರುದಿನ ಸಂಜೆ 4.40ಕ್ಕೆ ಕೊಟ್ಟಾಯಂ ತಲುಪಲಿದೆ. ವಾಪಸ್ ರೈಲು ಸಂಖ್ಯೆ 07352 ಕೊಟ್ಟಾಯಂ-ಹುಬ್ಬಳ್ಳಿ ವಿಶೇಷ ಎಕ್ಸ್‌ಪ್ರೆಸ್ ಆಗಸ್ಟ್ 26ರಂದು ರಾತ್ರಿ 10.30ಕ್ಕೆ ಕೊಟ್ಟಾಯಂನಿಂದ ಹೊರಟು, ಮರುದಿನ ರಾತ್ರಿ 8 ಗಂಟೆಗೆ ಹುಬ್ಬಳ್ಳಿಗೆ ಆಗಮಿಸಲಿದೆ.

ರೈಲು ಸಂಖ್ಯೆ 07353/07354 ಹುಬ್ಬಳ್ಳಿ-ಕೊಟ್ಟಾಯಂ-ಹುಬ್ಬಳ್ಳಿ ವಿಶೇಷ ಎಕ್ಸ್‌ಪ್ರೆಸ್ ಕೂಡ ಒಂದು ಟ್ರಿಪ್ ಸಂಚರಿಸಲಿದೆ. ರೈಲು ಸಂಖ್ಯೆ 07353 ಹುಬ್ಬಳ್ಳಿ-ಕೊಟ್ಟಾಯಂ ವಿಶೇಷ ಎಕ್ಸ್‌ಪ್ರೆಸ್ ಆಗಸ್ಟ್ 29ರಂದು ಮಧ್ಯಾಹ್ನ 3.15ಕ್ಕೆ ಹುಬ್ಬಳ್ಳಿಯಿಂದ ಹೊರಟು, ಮರುದಿನ ಸಂಜೆ 4.15ಕ್ಕೆ ಕೊಟ್ಟಾಯಂ ತಲುಪಲಿದೆ.

ವಾಪಸ್ ರೈಲು ಸಂಖ್ಯೆ 07354 ಕೊಟ್ಟಾಯಂ-ಹುಬ್ಬಳ್ಳಿ ವಿಶೇಷ ಎಕ್ಸ್‌ಪ್ರೆಸ್ ಆಗಸ್ಟ್ 30ರಂದು ರಾತ್ರಿ 10.30ಕ್ಕೆ ಕೊಟ್ಟಾಯಂನಿಂದ ಹೊರಟು, ಮರುದಿನ ರಾತ್ರಿ 8.05ಕ್ಕೆ ಹುಬ್ಬಳ್ಳಿಗೆ ಆಗಮಿಸಲಿದೆ.

ಈ ವಿಶೇಷ ರೈಲುಗಳು ಎರಡೂ ಮಾರ್ಗಗಳಲ್ಲಿ ಶ್ರೀ ಮಹದೇವಪ್ಪ ಮೈಲಾರ ರೈಲು ನಿಲ್ದಾಣ ಹಾವೇರಿ, ದಾವಣಗೆರೆ, ಬೀರೂರು, ಅರಸೀಕೆರೆ, ತುಮಕೂರು, ಎಸ್‌ಎಂವಿಟಿ ಬೆಂಗಳೂರು, ಕೃಷ್ಣರಾಜಪುರಂ, ಬಂಗಾರಪೇಟೆ, ಸೇಲಂ, ಈರೋಡ್, ತಿರುಪ್ಪೂರ್, ಪೊಡನೂರ್, ಪಾಲಕ್ಕಾಡ್, ತ್ರಿಶ್ಶೂರ್, ಆಲುವಾ ಮತ್ತು ಎರ್ನಾಕುಲಂ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಲಿವೆ.

ರೈಲುಗಳು ಒಟ್ಟು 20 ಬೋಗಿಗಳನ್ನು ಹೊಂದಿದ್ದು, ಒಂದು ಎಸಿ ದ್ವಿತೀಯ ದರ್ಜೆ, ಎರಡು ಎಸಿ ತೃತೀಯ ದರ್ಜೆ, ಒಂಬತ್ತು ಮಲಗುವ ದರ್ಜೆ, ಆರು ಸಾಮಾನ್ಯ ದ್ವಿತೀಯ ದರ್ಜೆ ಬೋಗಿಗಳು ಹಾಗೂ ದಿವ್ಯಾಂಗ ಸ್ನೇಹಿ ವಿಭಾಗ ಹೊಂದಿರುವ ಎರಡು ದ್ವಿತೀಯ ದರ್ಜೆ ಲಗೇಜ್ ಕಮ್ ಬ್ರೇಕ್ ವ್ಯಾನ್‌ಗಳನ್ನು ಒಳಗೊಂಡಿರಲಿವೆ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy